ಸಂಪುಟ: 14 Volume ಸಂಚಿಕೆ: 79 Issue ಪುಟಗಳು 08 Pages ಮಂಗಳವಾರ 30 ಜೂನ್ 2026 ₹4 PRGINO.120927 (RNINO:KARKAN/2011/48371) BDR/054/2026-2027 www.mallammanudi.in mallammanudi@gmail.com 9448604450, 9845028349

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

ಕಲಿಕೆ ವಿಷಯ ಬರೀ ತಿಳುವಳಿಕೆಯ ಮಟ್ಟದಲ್ಲಿ ಉಳಿಯದೆ ಹೆಚ್ಚು ಅರ್ಥಪೂರ್ಣ ಮಾಡಬಲ್ಲ ಮನುಷ್ಯನೊಬ್ಬ ಬೇಕು. ಆತನೇ ಕೋಚ್ ಅಥವಾ ಗುರು.

–ಪಿ. ಲಂಕೇಶ್



ಭಾರತದ ಉಪರಾಷ್ಟ್ರಪತಿ ಮತ್ತು ರಾಜ್ಯಸಭೆಯ ಸಭಾಪತಿ ಶ್ರೀ ಸಿ.ಪಿ. ರಾಧಾಕೃಷ್ಣನ್ ಅವರು ಇಂದು ಸಂಸತ್ ಭವನದಲ್ಲಿ ಕರ್ನಾಟಕದಿಂದ ರಾಜ್ಯಸಭೆಗೆ (ಪುನಃ ಆಯ್ಕೆಯಾದ) ಸದಸ್ಯರಾದ ಶ್ರೀ ಮಲ್ಲಿಕಾರ್ಜುನ ಖರ್ಗೆ ಅವರಿಗೆ ಪ್ರಮಾಣ ವಚನ ಬೋಧಿಸಿದರು.



ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನೌಕರರ ಸಂಘ ಹಾಗೂ ಅಸೋಸಿಯೇಷನ್ ಒಕ್ಕೂಟದವರು ಬೆಂಗಳೂರು ಅರಮನೆ ಮೈದಾನದಲ್ಲಿ ಸೋಮವಾರ ಏರ್ಪಡಿಸಿದ್ದ ಅಭಿನಂದನೆ ಸಮಾರಂಭದಲ್ಲಿ ಸಿಎಂ ಡಿ ಕೆ ಶಿವಕುಮಾರ್ ಅವರು ಮಾತನಾಡಿದರು. ಇಂಧನ ಸಚಿವ ಕೆ ಜೆ ಜಾರ್ಜ್, ನೌಕರರ ಸಂಘದ ಅಧ್ಯಕ್ಷ ಕೆ ಬಲರಾಮ್, ಎಂಜಿನಿಯರುಗಳ ಸಂಘದ ಅಧ್ಯಕ್ಷ ಸಿ ಬಸವಣ್ಣ, ಶಾಸಕರು, ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ಕಂಪನಿ ಅಧ್ಯಕ್ಷ ರಮೇಶ್ ಬಂಡಿಸಿದ್ದೇಗೌಡ, ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ಅಧ್ಯಕ್ಷ ಸಯ್ಯದ್ ಅಜಿಂಪೀರ್ ಖಾದ್ರಿ, ಮಂಗಳೂರು ವಿದ್ಯುತ್ ಸರಬರಾಜು ಕಂಪನಿ ಅಧ್ಯಕ್ಷ ಕೆ ಹರೀಶ್ ಕುಮಾರ್, ಕಲ್ಬುರ್ಗಿ ವಿದ್ಯುತ್ ಸರಬರಾಜು ಕಂಪನಿ ಅಧ್ಯಕ್ಷ ಪ್ರವೀಣ್ ಪಾಟೀಲ್ ಹರವಾಳ, ಅಪರ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತಾ, ಎಂ ಡಿ ರಾಮ್ ಪ್ರಸಾತ್ ಮನೋಹರ್ ಮತ್ತಿತರರು ಉಪಸ್ಥಿತರಿದ್ದರು.

## ನೂತನ ಪದಾಧಿಕಾರಿಗಳಿಗೆ ಅನುಮೋದನೆ

• ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ

ಗಂಗಾವತಿ ಲಯನ್ಸ್ ಕ್ಲಬ್ನ 57ನೇ ವರ್ಷದ (2026–27) ಅಧಿಕಾರ ಸ್ವೀಕಾರ ಸಮಾರಂಭವು ಭಾನುವಾರ ನೆರವೇರಿತು. ನೂತನ ಅಧ್ಯಕ್ಷರಾಗಿ ಡಾ. ದೇವರಾಜ್ ಚಂದ್ರಪ್ಪ, ಕಾರ್ಯದರ್ಶಿಯಾಗಿ ಹೊಸಳ್ಳಿ ಶಂಕರ ಪಾಟೀಲ್, ಖಜಾಂಚಿಯಾಗಿ ಹರೀಶ್ ಎನ್. ಆಯ್ಕೆಯಾಗಿದ್ದು, ಈ ತಂಡಕ್ಕೆ ಜ್ಯೋತಿ ಪಿ. ಕುಲಕರ್ಣಿ ಮತ್ತು ಪ್ರದೀಪ ಕುಲಕರ್ಣಿ ಅಧಿಕಾರ ಹಸ್ತಾಂತರಿಸಿದರು.

ಸಮಾರಂಭದ ಮುಖ್ಯ ಅತಿಥಿಗಳಾಗಿ ಜಿಲ್ಲಾ ಗವರ್ನರ್ ಗವಿಸಿದ್ದಪ್ಪ ಮುದಗಲ್, ಡಾ. ಮಾಧವ ಶೆಟ್ಟಿ, ಹಿಂದಿನ ಅಧ್ಯಕ್ಷ ಡಾ. ಶಿವಕುಮಾರ್ ಮಾ. ಲಿಪಾಟೀಲ್, ಕಾರ್ಯದರ್ಶಿ ಜಂಬಣ್ಣ ಐಲಿ, ಖಜಾಂಚಿ ಶಿವಪ್ಪ ಗಾಳಿ ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಲಯನ್ಸ್ ಕ್ಲಬ್ನ ಹಿರಿಯ ಸದಸ್ಯರಾದ ಡಾ. ಚಂದ್ರಪ್ಪ, ಡಾ. ಸೋಮರಾಜು



ಅಲ್ಲೂರಿ, ಡಾ. ವಿ.ವಿ. ಚಿನಿವಾಲರ್, ಟಿ. ರಾಮಕೃಷ್ಣ, ಡಾ. ಗೋಗಿ, ಮೋಹನ್ ಕೋಟಿ, ರವಿ ಚೇತನ್ ರೆಡ್ಡಿ, ಅಭಿಷೇಕ್ ಡಿ.ಎಂ., ಹರಿಬಾಬು, ಡಾ. ಚೇತನ್ ಚೀನಿವಾಲರ್, ಜಗದೀಶ್, ಡಾ. ಕಾರ್ತಿಕ್, ಡಾ. ಬಸವರಾಜ್ ಸಿಂಗನಾಳ, ಸರ್ವೇಶ್ ಮಾಂತಗೊಂಡ, ಸುರೇಶ ಸಿಂಗನಾಳ, ಎಸ್.ಎಸ್. ಪಟ್ಟಣಶೆಟ್ಟಿ, ಡಾ. ಮಲ್ಲನಗೌಡ, ಡಾ. ಎ.ಎಸ್.ಎನ್. ರಾಜು, ಶ್ರೀಕಾಂತ್ ಮಾಕಿನೇನಿ, ಡಾ. ಮಧುಸೂಧನ್ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದು, ನೂತನ ತಂಡಕ್ಕೆ ಶುಭ ಕೋರಿದರು.

## ರೈತರ ಸಾಲಮನ್ನಾ ಮಾಡಲು ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಪ್ರಸಕ್ತ ವರ್ಷದಲ್ಲಿ ಮುಂಗಾರು ಮಳೆಯ ತೀವ್ರ ಕೊರತೆಯಿಂದ ರೈತರು ಸಂಕಷ್ಟಕ್ಕೆ ಸಿಲುಕಿದ್ದು, ಸರಕಾರ ಕೂಡಲೇ ರೈತರ ನೆರವಿಗೆ ಧಾವಿಸಿ ಬೆಳೆ ಪರಿಹಾರ ಹಾಗೂ ಕೃಷಿ ಸಾಲ ಮನ್ನಾ ಘೋಷಿಸಬೇಕು ಎಂದು ಮಹಾಗಾಂವ ಬಿಜೆಪಿ ಮುಖಂಡ ಮಲ್ಲಿಕಾರ್ಜುನ ಮರತೂರಕರ್ ಆಗ್ರಹಿಸಿದ್ದಾರೆ.



ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿದ ಅವರು, ರೈತರು ಈಗಾಗಲೇ ಹೆಚ್ಚಿನ ವೆಚ್ಚದಲ್ಲಿ ಬೀಜ, ರಸಗೊಬ್ಬರ ಮತ್ತು ಔಷಧಗಳನ್ನು ಖರೀದಿಸಿ ಬಿತ್ತನೆ ಕಾರ್ಯ ಪೂರ್ಣಗೊಳಿಸಿದ್ದಾರೆ. ಆದರೆ ನಿರೀಕ್ಷಿತ ಪ್ರಮಾಣದಲ್ಲಿ ಮಳೆಯಾಗದ ಕಾರಣ ಬೆಳೆಗಳು ಒಣಗಿ ನಾಶವಾಗುತ್ತಿದ್ದು, ರೈತರು ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದಾರೆ ಎಂದು ಅವರು ಆತಂಕ ವ್ಯಕ್ತಪಡಿಸಿದರು. ರೈತರು ಅಸಂಖ್ಯಾತ ಸಮಸ್ಯೆಗಳ ನಡುವೆ ಕೃಷಿ ನಡೆಸುತ್ತಿದ್ದರೂ, ಮುಕ್ತ ಮಾರುಕಟ್ಟೆ ನೀತಿಯಿಂದಾಗಿ ಅವರು ಬೆಳೆದ ಬೆಳೆಗಳಿಗೆ ಸಮರ್ಪಕ ಬೆಲೆ ದೊರೆಯುತ್ತಿಲ್ಲ. ಅನೇಕ ಕೃಷಿ ಉತ್ಪನ್ನಗಳಿಗೆ ಸರಕಾರದಿಂದ ಸೂಕ್ತ ಬೆಂಬಲ ಬೆಲೆ ಘೋಷಣೆಯಾಗದ ಕಾರಣ ರೈತರು ಮಧ್ಯವರ್ತಿಗಳ ದಯೆಗೆ ಬಿದ್ದು ನಷ್ಟ ಅನುಭವಿಸುವಂತಾಗಿದೆ.ಆದ್ದರಿಂದ ಸರಕಾರ ಕೂಡಲೇ ತಾಲೂಕು ಹಾಗೂ ಜಿಲ್ಲಾ ಮಟ್ಟದಲ್ಲಿ ಬೆಳೆ ಹಾನಿ ಸಮೀಕ್ಷೆ ನಡೆಸಿ ರೈತರಿಗೆ ಸೂಕ್ತ ಪರಿಹಾರ ವಿತರಿಸಬೇಕು.ಜತೆಗೆ ಕೃಷಿ ಸಾಲ ಮನ್ನಾ,ಉಚಿತ ಬೀಜ ಮತ್ತು ರಸಗೊಬ್ಬರ ವಿತರಣೆ,ನೀರಾವರಿ ಸೌಲಭ್ಯಗಳ ವಿಸ್ತರಣೆ ಹಾಗೂ ಬೆಳೆಗಳಿಗೆ ನ್ಯಾಯಯುತ ಬೆಂಬಲ ಬೆಲೆ ಘೋಷಿಸುವ ಮೂಲಕ ರೈತರ ಸಂಕಷ್ಟ ನಿವಾರಣೆಗೆ ಕ್ರಮ ಕೈಗೊಳ್ಳಬೇಕು ಎಂದು ಅವರು ಒತ್ತಾಯಿಸಿದರು.

# ಕಮಲಾಧಿಪತಿಯ ಕುರ್ಚಿ?

## ರಾಜ್ಯ ಬಿಜೆಪಿಯಲ್ಲಿ ಮತ್ತೆ ಬದಲಾವಣೆಯ ಪರ್ವ | ಮೂರು ತಿಂಗಳಲ್ಲಿ 3 ವರ್ಷ ಪೂರ್ಣ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ರಾಜ್ಯ ಬಿಜೆಪಿಯಲ್ಲಿ ಮತ್ತೆ ಬದಲಾವಣೆಯ ಪರ್ವ ಶುರುವಾಗಿದೆ. ಇತ್ತೀಚೆಗೆ ನಡೆದ ವಿದಾನ ಪರಿಷತ್ ಚುನಾವಣೆಯಲ್ಲಿ ಪಕ್ಷದ ಹಲವು ಶಾಸಕರು ಅಡ್ಡ ಮತದಾನ ಮಾಡಿದ ಬಳಿಕ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಮತ್ತು ವಿಧಾನಸಭೆಯ ಪ್ರತಿಪಕ್ಷ ನಾಯಕ ಅರ್.ಅಶೋಕ್ ಅವರ ಗದ್ದುಗೆ ಅಲುಗಾಡ ತೊಡಗಿದೆ.

**ಆಡಿಯೊ ವೈರಲ್:** ಈ ವಿಷಯಕ್ಕೆ ಇಂಬು ನೀಡುವಂತೆ ವಿಜಯೇಂದ್ರ ಅವರನ್ನು ತೆಗೆದು ಹಾಕುವಂತೆ ದೆಹಲಿ ನಾಯಕರಿಗೆ ಒತ್ತಾಯ ಮಾಡಿರುವ ಮಾಜಿ ಮುಖ್ಯಮಂತ್ರಿ ಡಿವಿ ಸದಾನಂದ ಗೌಡ ಅವರದ್ದು ಎನ್ನಲಾದ ಆಡಿಯೊ ವೈರಲ್ ಆಗಿದೆ. ಬಿಜೆಪಿ ಕೇಂದ್ರ ನಾಯಕ ಪ್ರದೀಪ್ ಎಂಬುವವರ ಜೊತೆಗೆ ಡಿವಿ ಸದಾನಂದಗೌಡ ಅವರು ಇಂಗ್ಲಿಷ್ ನಲ್ಲಿ ನಡೆಸಿದ ಸಂಭಾಷಣೆ ಇದಾಗಿದೆ.

**ಇದರಲ್ಲಿರುವ ಮಾಹಿತಿ?:** ವೈರಲ್ ಆಗಿರುವ ಈ ಆಡಿಯೊ ಮೂರು ತಿಂಗಳ ಬಳಿಕ ರಾಜ್ಯಾಧ್ಯಕ್ಷ ಸ್ಥಾನದಿಂದ ವಿಜಯೇಂದ್ರ ಅವರನ್ನು ಕೆಳಗಿಳಿಸಿ ಎಂದು ಎಂಬ ಬೇಡಿಕೆ ಇಡಲಾಗಿದೆ. ಈ ಆಡಿಯೋ ಇದೀಗ ರಾಜ್ಯ ಬಿಜೆಪಿಯಲ್ಲಿ ಅಲ್ಲೋಲ ಕಲ್ಲೋಲ ಸೃಷ್ಟಿಸಿದ್ದು, ಮತ್ತೆ ಬಣ ಬಡಿದಾಟ ಶುರುವಾಗಿದೆ.



### ಹುದ್ದೆಯ ಅವಧಿ ಎಷ್ಟು?

ಬಿಜೆಪಿ ರಾಜ್ಯಾಧ್ಯಕ್ಷರಾಗಿ ಬಿವೈ ವಿಜಯೇಂದ್ರ ಇನ್ನು 3 ತಿಂಗಳಲ್ಲಿ 3 ವರ್ಷ ಪೂರೈಸಲಿದ್ದಾರೆ. ಬಿಜೆಪಿ ರಾಜ್ಯಾಧ್ಯಕ್ಷರ ಅವಧಿ 3 ವರ್ಷ ಇದ್ದು, ಬಿಜೆಪಿಯಲ್ಲಿ ನಡೆದುಕೊಂಡು ಬಂದ ನಿಯಮವಾಗಿದೆ. ಆಗಸ್ಟ್, ಸೆಪ್ಟೆಂಬರ್, ಅಕ್ಟೋಬರ್ ವರೆಗೂ ವಿಜಯೇಂದ್ರ ಮುಂದುವರೆಯಲು ಬಿಡಿ, ಬಳಿಕ ರಾಜ್ಯಾಧ್ಯಕ್ಷ ಸ್ಥಾನದಿಂದ ತೆಗೆದು ಹಾಕಿ ಎಂಬುವುದು ಆಡಿಯೋದಲ್ಲಿ ಉಲ್ಲೇಖವಾಗಿದೆ.

### ಅವಹೇಳನೆ; ಸಸ್ಪೆಂಡ್

ಬಿಜೆಪಿ ರಾಜ್ಯ ಘಟಕದ ವಕ್ತಾರ ಎಂ.ಜಿ ಮಹೇಶ್ ಅವರನ್ನು ಪಕ್ಷದ ಪ್ರಾಥಮಿಕ ಸದಸ್ಯತ್ವದಿಂದ 6 ವರ್ಷಗಳ ಅವಧಿಗೆ ಉಚ್ಚಾಟಿಸಲಾಗಿದೆ. ಜೂನ್ 19ರಂದು ನಡೆದ ಪಕ್ಷದ ಪ್ರಮುಖರ ಸಭೆಯಲ್ಲಿ ಬಿಜೆಪಿ ಹೈಕಮಾಂಡ್ ಮತ್ತು ರಾಜ್ಯ ನಾಯಕರ ವಿರುದ್ಧ ಅವಹೇಳನಕಾರಿ ಆರೋಪ ಮಾಡಿದ್ದ ಹಿನ್ನಲೆಯಲ್ಲಿ ಉಚ್ಚಾಟನೆ ಮಾಡಲಾಗಿದೆ.

### ರೇಸ್‌ನಲ್ಲಿ ಯಾರ್ಯಾರು?

ವಿಜಯೇಂದ್ರ ಅವರನ್ನು ಪದಚ್ಯುತಗೊಳಿಸಿದರೆ ಬಿಜೆಪಿ ಮತ್ತೆ ಲಿಂಗಾಯತ ವಿರೋಧಿ ಟೀಕೆಗೆ ಗುರಿ ಆಗುವ ಅಪಾಯ ಇದೆ. ಇದರಿಂದ ಪಕ್ಷಕ್ಕೆ ಡ್ಯಾಮೇಜ್ ಜಾಸ್ತಿ.ಅಕ್ಟೋಬರ್‌ವರೆಗೂ ಕಾದು ನೋಡುವ ತಂತ್ರ ಅನುಸರಿಸಲಾಗುತ್ತಿದೆ ಎನ್ನುತ್ತಿದೆ ಮೂಲ. ವಿಶೇಷವಾಗಿ ಸೋಮಣ್ಣ,ಮುರುಗೇಶ್ ನಿರಾಣಿ ಸೇರಿ ಅನೇಕರ ಹೆಸರು ಕೇಳಿಬರುತ್ತಿದೆ. ಯಾವುದೇ ಅಂತಿಮವಾಗಿಲ್ಲ..!

### ಗೊತ್ತಿಲ್ಲ: ಮಾಜಿ ಸಿಎಂ

ಇನ್ನು ಈ ಆಡಿಯೋ ಬಗ್ಗೆ ಪ್ರತಿಕ್ರಿಯಿಸಿದ ಮಾಜಿ ಸಿಎಂ ಸದಾನಂದಗೌಡ ಅವರು, ಆಡಿಯೋ ಕುರಿತು ನಾನು ಯಾವುದೇ ಕಾಮೆಂಟ್ ಮಾಡುವುದಿಲ್ಲ ಎಂದಿದ್ದಾರೆ. ಈ ಆಡಿಯೋ ಬಗ್ಗೆ ನನಗೆ ಗೊತ್ತಿಲ್ಲ. ಆಡಿಯೋ ಬಗ್ಗೆ ನಾನು ಯಾವುದೇ ಪ್ರತಿಕ್ರಿಯೆ ನೀಡುವುದಿಲ್ಲ. ನನ್ನದಲ್ಲದ ಆಡಿಯೋ ಮತ್ತು ವಿಡಿಯೋಗೆ ನಾನು ಉತ್ತರಿಸುವುದಿಲ್ಲ ಎಂದು ಅವರು ಸ್ಪಷ್ಟೀಕರಿಸಿದ್ದಾರೆ.

## ಗ್ರಾಮ ಪಂಚಾಯ್ತಿಗಳಿಗೆ ಗಾಂಧೀ ಹೆಸರಿಡಿ

**ನವದೆಹಲಿ:** ಉದ್ಯೋಗ ಖಾತ್ರಿ ಯೋಜನೆಯಲ್ಲಿ ಗ್ರಾಮ ಸ್ವರಾಜ್ಯದ ಪ್ರತಿಪಾದಕರಾಗಿದ್ದ ಮಹಾತ್ಮಾ ಗಾಂಧೀ ಹೆಸರು ಕೈಬಿಟ್ಟಿರುವ ಕೇಂದ್ರ ಸರ್ಕಾರ, ಮಹಾತ್ಮಾಗಾಂಧೀ ವಿಬಿ ಜಿ ರಾಮ್ ಜೀ ಎಂದು ಮರುನಾಮಕರಣ ಮಾಡಬೇಕು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಆಗ್ರಹಿಸಿದ್ದಾರೆ.



ದೆಹಲಿಯಲ್ಲಿಂದು ಕೇಂದ್ರ ಗ್ರಾಮೀಣಾಭಿವೃದ್ಧಿ ಸಚಿವ ಶಿವರಾಜ್ ಸಿಂಗ್ ಚವ್ಹಾಣ್ ಅವರ ಅಧ್ಯಕ್ಷತೆಯಲ್ಲಿ ನಡೆದ ಎಲ್ಲ ರಾಜ್ಯಗಳ ಗ್ರಾಮೀಣಾಭಿವೃದ್ಧಿ ಸಚಿವರ ಸಭೆಯಲ್ಲಿ ಮಾತನಾಡಿದ ಅವರು, ಗಾಂಧೀಜಿ ಅವರು ಭಾರತ ಹಳ್ಳಿಗಳ ದೇಶವಾಗಿದ್ದು, ದೇಶದ ಆತ್ಮ ಇರುವುದೇ ಗ್ರಾಮಗಳಲ್ಲಿ ಎಂದು ಹೇಳಿದ್ದರು. ಗ್ರಾಮಗಳ ಅಭಿವೃದ್ಧಿ ಆಗದೆ ದೇಶದ ಅಭಿವೃದ್ಧಿ ಆಗದು ಎಂದು ಪ್ರತಿಪಾದಿಸಿದ್ದರು. ಇಂತಹ ಮಹಾಪುರುಷರ ಹೆಸರನ್ನು ಕೈಬಿಟ್ಟಿರುವುದು ಸರಿಯಲ್ಲ ಎಂದರು.

## ಕಾರು ಹುಣ್ಣಿಮೆ ಅಂಗವಾಗಿ ಹೋರಿಕರ ಓಟ

• ಮಲ್ಲಮ್ಮ ನುಡಿ ವಾರ್ತೆ ಹಗರಿಬೊಮ್ಮನಹಳ್ಳಿ

ಕಾರಹುಣ್ಣಿಮೆ ಅಂಗವಾಗಿ ಹಂಪಾಪಟ್ಟಣದಲ್ಲಿ ಗ್ರಾಮೀಣ ಸಂಸ್ಕೃತಿ ಹಾಗೂ ಕೃಷಿ ಪರಂಪರೆಯ ಪ್ರತೀಕವಾಗಿರುವ ಸಾಂಪ್ರದಾಯಿಕ ಹೋರಿಕರ ಓಟದ ಸ್ಪರ್ಧೆ ಅದ್ದೂರಿಯಾಗಿ ನಡೆಯಿತು. 100ಕ್ಕೂ ಹೆಚ್ಚು ರೈತರು ತಮ್ಮ ಹೋರಿಕರೊಂದಿಗೆ ಸ್ಪರ್ಧೆಯಲ್ಲಿ ಭಾಗವಹಿಸಿದ್ದರು. ಸುಮಾರು 500 ಮೀಟರ್ ದೂರದ ಓಟದಲ್ಲಿ ಹೋರಿಕರು ತಮ್ಮ ವೇಗ, ಸಾಮರ್ಥ್ಯ ಹಾಗೂ ತರಬೇತಿಯನ್ನು ಪ್ರದರ್ಶಿಸಿ ನೆರೆದಿದ್ದ ಸಾರ್ವಜನಿಕರ ಮೆಚ್ಚುಗೆಗೆ ಪಾತ್ರರಾದರು.



ಸ್ಪರ್ಧೆಯಲ್ಲಿ ಯುವ ರೈತ ಚಿಂತ್ರಪಳ್ಳಿ ಪಾಂಡು ಅವರ ಹೋರಿಕರ ಅತ್ಯುತ್ತಮ ಪ್ರದರ್ಶನ ನೀಡಿ ಪ್ರಥಮ ಸ್ಥಾನ ಪಡೆದುಕೊಂಡಿತು.

ಈ ಸಂದರ್ಭದಲ್ಲಿ ಕಾಳೇವಾದನ ಹೇಮಣ್ಣ, ಬಾರಿಕರ್ ಗಂಗಪ್ಪ, ತಳವಾರ್ ಹುಲುಗಪ್ಪ, ಚಿಂತಪಳ್ಳಿ ಬಸಪ್ಪ, ಎನ್. ನಾಗರಾಜ್, ಬಿ. ನಾಗರಾಜ್, ವಿ.ಎಸ್. ಎಸ್.ಎನ್. ಅಧ್ಯಕ್ಷ ಹುಲುಗಪ್ಪ ಹಾಗೂ ಎಚ್. ಭೀಮಪ್ಪ ಸೇರಿದಂತೆ ಗ್ರಾಮದ ಮುಖಂಡರು ಉಪಸ್ಥಿತರಿದ್ದರು.

## ದೇವರು ಹಿಡಿದವ ಕುಸಿದು ಬಿದ್ದು ಸಾವು

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ತಾಲ್ಲೂಕಿನ ಅಳವಂಡಿ ಹೋಬಳಿಯ ಕವಲೂರು ಗ್ರಾಮದಲ್ಲಿ ಮೊಹರಂ ಹಬ್ಬದ ಅಂಗವಾಗಿ ಖಾಜಿ ಮಸೂತಿಯ ಅಲಾಯಿ ದೇವರನ್ನು ಹಿಡಿದಿದ್ದ ವ್ಯಕ್ತಿಯೊಬ್ಬ ಕುಸಿದು ಬಿದ್ದು ಸಾವನ್ನಪ್ಪಿದ ಘಟನೆ ಶುಕ್ರವಾರ ಬೆಳಗ್ಗೆ ನಡೆದಿದೆ.



ಕವಲೂರು ಗ್ರಾಮದ ಚಾಂದುಸಾಬ ಬಳ್ಳಾರಿ (88) ಅವರು ಕಳೆದ ಹಲವು ವರ್ಷಗಳಿಂದ ಖಾಜಿ ಮಸೂತಿಯ ಅಲಾಯಿ ದೇವರನ್ನು ಹಿಡಿಯುತ್ತಾ ಬಂದಿದ್ದರೂ, ಕತಲ್ ರಾತ್ರಿ ದಿನದಂದು ಶುಕ್ರವಾರ ಬೆಳಿಗ್ಗೆ ಸವಾರಿ ಮಾಡಲು ಬಂದಾಗ ದೇವರನ್ನು ಹಿಡಿದುಕೊಂಡು ಬೆಂಕಿ–ಯ ಹೊಂಡದಲ್ಲಿ ಹೋಗಿ ಬಳಿಕ ಭಕ್ತರಿಗೆ ಆಶೀರ್ವಾದ ಮಾಡುತ್ತಿದ್ದಾರೆ ಕುಸಿದು ಬಿದ್ದು ಮೃತಪಟ್ಟಿದ್ದಾರೆ. ಮೃತರಿಗೆ ನಾಲ್ವರು ಪುತ್ರರು, ಓರ್ವ ಪುತ್ರಿ ಇದ್ದಾರೆ. ಮೃತರ, ಅಂತ್ಯಕ್ರಿಯೆ ಸ್ವ ಗ್ರಾಮದಲ್ಲಿ ಶುಕ್ರವಾರ ಸಂಜೆ ನಡೆಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

# ಅಧ್ಯಕ್ಷರು ಮಾಡಿದ ಸಾಲ, ಪಿಡಿಓಗಳಿಗೆ ಶೂಲ..!

• ಮೊಹ್ಮದ್ ಮುಸ್ತಾಫ್, ಲಿಂಗಸಗೂರ

ತಾಲೂಕಿನ ಬಹುತೇಕ ಗ್ರಾಮ ಪಂಚಾಯತಗಳಲ್ಲಿ ಅನುದಾನವಿಲ್ಲದೆ ಗ್ರಾಮ ಪಂಚಾಯತ್‌ಗಳು ಪಾಳು ಬಿದ್ದಿವೆ. ಹಳ್ಳಿಗಳ ಅಭಿವೃದ್ಧಿ ಎನ್ನುವುದು ಅಭಿವೃದ್ಧಿ ಅಧಿಕಾರಿಗಳಿಗೆ ಹಗಲುಗನಸಾಗಿದೆ. ಇದ–ರಿಂದ ನಾಗರಿಕರು ಕೈಕಟ್ಟಿ ಕುಳಿತು ಕೊಳ್ಳಬೇಕಾದ ಪರಸ್ಥಿತಿ ನಿರ್ಮಾಣವಾಗಿದೆ. ವಿಶೇಷವೆಂದರೆ ಈ ಹಿಂದೆ ಅಧಿಕಾರ ನೆಡೆಸಿದ ಗ್ರಾಮ ಪಂಚಾಯತ್ ಅಧ್ಯಕ್ಷರು ಪಿಡಿಓಗಳ ಮೂಲಕ ವಿವಿಧ ಅಂಗಡಿಗಳಲ್ಲಿ ಎಲೆಕ್ಟ್ರಿಕಲ್, ಬುಕ್ ಸ್ಟಾಲ್, ಹಾರ್ಡ್‌ವೇರ್ ಸೇರಿದಂತೆ ವಿವಿಧ ಅಂಗಡಿಗಳಲ್ಲಿ ಗ್ರಾಮ ಪಂಚಾಯತ್ ಹಳ್ಳಿಗಳಿಗೆ ಅವಶ್ಯವಿರುವ ತಮಗೆ ಬೇಕಾದ ಸಾಮಾಗ್ರಿಗಳನ್ನು ಖರೀದಿಸಿದ್ದು ಅದರ ಬಾಕಿ ಹಣ ಸಹ ಅಂಗಡಿ ಮಾಲೀಕರಿಗೆ ಕೊಡದೆ ಹಾಗೆ ಉಳಿಸಿದ್ದಾರೆ. ಈಗ ಅಂಗಡಿ ಮಾಲೀಕರು ತಮಗೆ ಬರಬೇಕಾಗಿದ್ದ ಬಾಕಿ ಹಣ ನೀಡುವಂತೆ ಒತ್ತಡ ಹಾಕುತ್ತಿರುವುದು ಪಿಡಿಓಗಳಿಗೆ ದೊಡ್ಡ ತಲೆ ನೋವಾಗಿ ಪರಿಣಮಿಸಿದೆ.

**ಗ್ರಾ.ಪಂಗಳಲ್ಲಿ ಹಣವಿಲ್ಲದೆ ಅಭಿವೃದ್ಧಿಯೇ ಶೂನ್ಯ**

**ಅನುದಾನ ಸಕಾಲಕ್ಕೆ ಇಲ್ಲ:** 16 ತಿಂಗಳುಗಳಿಂದ ಗ್ರಾಮ ಪಂಚಾಯತ್‌ಗಳಿಗೆ 15ನೇ ಹಣಕಾಸು ಆಯೋಗದ ಅನುದಾನ ಸೇರಿದಂತೆ ಯಾವುದೇ ರೀತಿಯ ಅನುದಾನ ಸಕಾಲಕ್ಕೆ ಬಾರದೆ ಇರುವುದರಿಂದ ಗ್ರಾಮಪಂಚಾಯತಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪಿಡಿಓಗಳಿಗೆ ಹೇಳತೀರದ ರೀತಿಯ ಸಂಕಷ್ಟ ಎದುರಾಗಿದೆ.

**ಗ್ರಾ.ಪಂ.ಗಳಿಗೆ ಬೀಗ..?:** ಹಳ್ಳಿಗಳ ಕುಡಿಯುವ ನೀರು ಸೇರಿದಂತೆ ಇನ್ನಿತರ ಕೆಲಸ ಕಾರ್ಯಗಳಿಗಾಗಿ 15ನೇ ಹಣಕಾಸು ಯೋಜನೆಯ ಅನುದಾನ ಅನುಕೂಲವಾಗಿತ್ತು ಈಗ ಅದು 16 ತಿಂಗಳು ಕಳೆದರೂ ಬಾರದೆ ಇರುವುದರಿಂದಾಗಿ ಗ್ರಾಮಪಂಚಾಯಿತಿಗಳಿಗೆ ಬೀಗ ಹಾಕುವಂತ ಪರಿಸ್ಥಿತಿ ನಿರ್ಮಾಣವಾಗಿದೆ. ಕೆಲ ಗ್ರಾಮ ಪಂಚಾಯತ್ ಗಳ ಪಿಡಿಓಗಳು ಬದಲಾವಣೆ ಗೊಂಡಿದ್ದೇ ಈಗ ತಲೆನೋವಾಗಿದೆ.




ಏನ್ ಮಾಡೋದ್ರೀ.. ಅತ್ತ ದರಿ ಇತ್ತ ಪುಲಿ ಅನ್ನಂಗಾಗಿದೆ ನಮ್ ಸ್ಥಿತಿ. ಸರಕಾರ ಅನುದಾನ ಕೊಟ್ಟರೆ ಮಾತ್ರ ನಾವು ಏನಾದರೂ ಹಳ್ಳಿಗಳ ಅಭಿವೃದ್ಧಿ ಮಾಡಲು ಸಾಧ್ಯ. ಹಳ್ಳಿಗಳಲ್ಲಿ ನೂರೆಂಟು ಸಮಸ್ಯೆಗಳಿವೆ. ಅವುಗಳನ್ನ ಇತ್ಯರ್ಥ ಪಡಿಸಲು ಗ್ರಾ.ಪಂ.ಗಳಲ್ಲಿ ಹಣದ ಕೊರತೆ ಇದೆ. ಇದರಿಂದಾಗಿ ದೊಡ್ಡ ತಲೆ ನೋವಾಗಿದೆ. –ಹೆಸರು ಹೇಳಲಿಚ್ಛಿಸದ ಗ್ರಾಮಪಂಚಾಯಿತಿ ಪಿಡಿಓ

### ಕಾಂಚಾಣಂ ಕಾರ್ಯಸಿದ್ಧಿ..!

ಇಲ್ಲಿ ಹಣ ವಿಲ್ಲದಿರುವುದರಿಂದ ರಾಜಕೀಯ ಲೀಡರ್‌ಗಳು ಕಾಂಚಾಣವಿಲ್ಲದೆ ಇರುವುದರಿಂದ ಅತ್ತ ಸುಳಿಯುತ್ತಿಲ್ಲ. ಕೆಲವೊಂದು ಗ್ರಾ.ಪಂ.ಗಳಿಂದ ಹೋಟೆಲ್‌ಬಾಕಿ ಇದೆ. ಯಾವುದೇ ರೀತಿಯ ಸಭೆ ನೆಡೆದರೆ ಹೋಟೆಲ್ ಮಾಲೀಕರು, ಉಪಾಹಾರ, ಟಿ,ಕೂಡ ಉದ್ರಿ ಕೊಡಲು ಹಿಂದೇಟು ಹಾಕುತ್ತಿದ್ದಾರೆ. ಪಿಡಿಓಗಳೇ ಕೆಲವೊಮ್ಮೆ ಸಂಬಳದಿಂದ ಬಾಕಿ ಕಟ್ಟಿದ್ದಾರೆ ಎನ್ನಲಾಗುತ್ತಿದೆ.

### ಹೆಸರಿಗೆ ಮಾತ್ರ ಆಡಳಿತಾಧಿಕಾರಿ..!

ಸರಕಾರ ಹಳ್ಳಿಗಳ ಅಭಿವೃದ್ಧಿಯ ಹಿತದೃಷ್ಟಿಯಿಂದ ಆಡಳಿತ ಅಧಿಕಾರಿಗಳನ್ನು ನೇಮಕ ಮಾಡಲಾಗಿದೆ. ಆದರೆ ಗ್ರಾಮ ಪಂಚಾಯಿತಿಗಳಲ್ಲಿ ನಯಾ ಪೈಸೆ ಅನುದಾನ ಬಾರದೆ ಇರುವುದರಿಂದಾಗಿ ಗ್ರಾ.ಪಂ.ಗಳಿಗೆ ಹೋಗಿ ನಾವು ಮಾಡುವುದಾದರೂಏನು ಎಂದು ಗ್ರಾ.ಪಂ.ಗಳಿಗೆ ನೇಮಕವಾದ ಆಡಳಿತ ಅಧಿಕಾರಿಗಳು ಗ್ರಾ.ಪಂಗಳತ್ತ ತಲೆ ಹಾಕುತ್ತಿಲ್ಲ..!

## ದನ ಕೊಂದವರು ಜೈಲಿಗೆ ಹೋಗುತ್ತಾರೆ, ಮನುಷ್ಯರನ್ನು ಕೊಲ್ಲುವವರು ಪ್ರಧಾನಿ, ಸಿಎಂಗಳಾಗುತ್ತಾರೆ: ಬಿ.ಕೆ ಹರಿಪ್ರಸಾದ್

# ಗ್ರಾಮೀಣ ಕ್ರೀಡಾಪಟುಗಳ ಸಹಕಾರಕ್ಕೆ ಸರ್ಕಾರ ಮುಂದಾಗಲಿ

ಭಾರತದ ಕ್ರೀಡಾ ಕ್ಷೇತ್ರಕ್ಕೆ ಗ್ರಾಮೀಣ ಭಾಗದ ಯುವಕರು ಅಪಾರ ಪ್ರತಿಭೆಯನ್ನು ನೀಡುತ್ತಿದ್ದಾರೆ. ಸೂಕ್ತ ತರಬೇತಿ, ಆರ್ಥಿಕ ನೆರವು ಹಾಗೂ ಅಗತ್ಯ ಸೌಲಭ್ಯಗಳ ಕೊರತೆಯ ನಡುವೆಯೂ ಅನೇಕ ಗ್ರಾಮೀಣ ಕ್ರೀಡಾಪಟುಗಳು ರಾಜ್ಯ, ರಾಷ್ಟ್ರ ಹಾಗೂ ಅಂತರರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡುತ್ತಿದ್ದಾರೆ. ಇಂತಹ ಪ್ರತಿಭೆಗಳನ್ನು ಗುರುತಿಸಿ ಪ್ರೋತ್ಸಾಹಿಸುವ ಜವಾಬ್ದಾರಿ ಸರ್ಕಾರದ ಮೇಲಿದೆ.

## ಸಂಪಾದಕೀಯ



**ಮಾಣಿಕರೆಡ್ಡಿ ಕೌಡಾಳೆ**
**ಪ್ರಧಾನ ಸಂಪಾದಕರು**
**ಮೊ: 9845028349**

ಗ್ರಾಮೀಣ ಪ್ರದೇಶಗಳಲ್ಲಿ ಕ್ರೀಡಾಂಗಣಗಳು, ತರಬೇತಿ ಕೇಂದ್ರಗಳು, ಗುಣಮಟ್ಟದ ಕ್ರೀಡಾ ಸಾಮಗ್ರಿಗಳು ಮತ್ತು ಅನುಭವಿ ತರಬೇತುದಾರರ ಕೊರತೆಯಿಂದ ಅನೇಕ ಪ್ರತಿಭೆಗಳು ಆರಂಭದಲ್ಲೇ ಹಿನ್ನಡೆ ಅನುಭವಿಸುತ್ತಿವೆ. ಆರ್ಥಿಕವಾಗಿ ಹಿಂದುಳಿದ ಕುಟುಂಬಗಳ ಮಕ್ಕಳು ತಮ್ಮ ಪ್ರತಿಭೆಯನ್ನು ಪ್ರದರ್ಶಿಸಲು ಅವಕಾಶವಿಲ್ಲದೆ ಕ್ರೀಡೆಯನ್ನೇ ತೊರೆಯುವ ಪರಿಸ್ಥಿತಿ ನಿರ್ಮಾಣವಾಗುತ್ತಿದೆ.

ಸರ್ಕಾರವು ಗ್ರಾಮೀಣ ಕ್ರೀಡಾಪಟುಗಳಿಗೆ ವಿಶೇಷ ವಿದ್ಯಾರ್ಥಿವೇತನ, ಉಚಿತ ತರಬೇತಿ, ಪೌಷ್ಟಿಕ ಆಹಾರ, ಪ್ರಯಾಣ ಭತ್ಯೆ ಹಾಗೂ ಉತ್ತಮ ಕ್ರೀಡಾ ಮೂಲಸೌಕರ್ಯ ಒದಗಿಸಬೇಕು. ಪ್ರತಿ ತಾಲೂಕು ಮತ್ತು ಜಿಲ್ಲೆಯಲ್ಲಿ ಆಧುನಿಕ ಕ್ರೀಡಾ ತರಬೇತಿ ಕೇಂದ್ರಗಳನ್ನು ಸ್ಥಾಪಿಸಿ, ಪ್ರತಿಭಾವಂತ ಕ್ರೀಡಾಪಟುಗಳನ್ನು ಗುರುತಿಸಿ ನಿರಂತರವಾಗಿ ಪ್ರೋತ್ಸಾಹಿಸಬೇಕು.

ಕ್ರೀಡೆ ಕೇವಲ ಪದಕ ಗೆಲ್ಲುವುದಕ್ಕಲ್ಲ; ಅದು ಆರೋಗ್ಯವಂತ ಸಮಾಜ ನಿರ್ಮಾಣಕ್ಕೂ, ಶಿಸ್ತು ಮತ್ತು ಆತ್ಮವಿಶ್ವಾಸ ಬೆಳೆಸುವುದಕ್ಕೂ ಪ್ರಮುಖ ಸಾಧನವಾಗಿದೆ. ಗ್ರಾಮೀಣ ಪ್ರತಿಭೆಗಳಿಗೆ ಸೂಕ್ತ ಅವಕಾಶ ಮತ್ತು ಬೆಂಬಲ ದೊರೆತರೆ ಕರ್ನಾಟಕ ಹಾಗೂ ದೇಶಕ್ಕೆ ಇನ್ನಷ್ಟು ಶ್ರೇಷ್ಠ ಕ್ರೀಡಾಪಟುಗಳು ದೊರೆಯುವುದು ಖಚಿತ.

ಆದ್ದರಿಂದ ಗ್ರಾಮೀಣ ಕ್ರೀಡಾಪಟುಗಳ ಕನಸುಗಳಿಗೆ ಬಲ ತುಂಬುವ ನಿಟ್ಟಿನಲ್ಲಿ ಸರ್ಕಾರ ಸಮಗ್ರ ಯೋಜನೆಗಳನ್ನು ರೂಪಿಸಿ, ಅಗತ್ಯ ಸಹಕಾರ ಮತ್ತು ಪ್ರೋತ್ಸಾಹವನ್ನು ನೀಡಬೇಕು. ಪ್ರತಿಭೆಗೆ ಅವಕಾಶ ಸಿಕ್ಕಾಗ ಮಾತ್ರ ದೇಶದ ಕ್ರೀಡಾ ಭವಿಷ್ಯ ಇನ್ನಷ್ಟು ಉಜ್ವಲವಾಗಲಿದೆ.

# ಡಿಗ್ಗಿ ಗ್ರಾಮದಲ್ಲಿ ಸಡಗರದ ವಟಸಾವಿತ್ರಿ ವ್ರತ ಆಚರಣೆ



**ಕಮಲನಗರ:** ತಾಲೂಕಿನ ಡಿಗ್ಗಿ ಗ್ರಾಮದಲ್ಲಿ ವಟಸಾವಿತ್ರಿ ವ್ರತವನ್ನು ಅತ್ಯಂತ ಭಕ್ತಿ, ಶ್ರದ್ಧೆ ಹಾಗೂ ಸಡಗರ ಸಂಭ್ರಮಗಳಿಂದ ಆಚರಿಸಲಾಯಿತು. ಗ್ರಾಮದ ಸುಮಂಗಲೆಯರು ಒಟ್ಟಾಗಿ ಸೇರಿ ಆಲದ ಮರಕ್ಕೆ ವಿಶೇಷ ಪೂಜೆ ಸಲ್ಲಿಸಿ, ತಮ್ಮ ಪತಿಯ ದೀರ್ಘಾಯುಷ್ಯ, ಆರೋಗ್ಯ ಮತ್ತು ಕುಟುಂಬದ ಸುಖ-ಸಮೃದ್ಧಿಗಾಗಿ ಶ್ರದ್ಧಾಭಕ್ತಿಯಿಂದ ಪ್ರಾರ್ಥಿಸಿದರು.

ಸುಮಂಗಲೆಯರು ಸನಾತನ ಸಂಪ್ರದಾಯದಂತೆ ಆಲದ ಮರಕ್ಕೆ ನೂಲಿನ ದಾರವನ್ನು ಸುತ್ತಿ ಪ್ರದಕ್ಷಿಣೆ ಹಾಕಿ, ವಿಶೇಷ ನೈವೇದ್ಯವನ್ನು ಸಮರ್ಪಿಸಿದರು. ಬಳಿಕ ಪರಸ್ಪರ ಉಡಿ ತುಂಬುವ ಸಾಂಪ್ರದಾಯಿಕ ಮಂಗಲ ಕಾರ್ಯವನ್ನು ಭಕ್ತಿಭಾವದಿಂದ ನೆರವೇರಿಸಿದರು.

ಕಾರ್ಯಕ್ರಮ ವಟಸಾವಿತ್ರಿ ವ್ರತದ ಮಹಿಮೆಯ ಕುರಿತು ಸುದೀರ್ಘವಾಗಿ ಮಾತನಾಡಿದ ಉಷಾ ಬಿರಾದಾರ ಅವರು, "ಭಾರತೀಯ ಸಂಸ್ಕೃತಿಯಲ್ಲಿ ಪತಿವ್ರತಾ ಶಿರೋಮಣಿ ಸಾವಿತ್ರಿಯ ಕಥೆ ಪ್ರತಿಯೊಬ್ಬ ಮಹಿಳೆಗೂ ಆದರ್ಶವಾಗಿದೆ. ತನ್ನ ಅಪ್ರತಿಮ ಭಕ್ತಿ, ಜಾಣ್ಮೆ ಮತ್ತು ದೃಢ ಸಂಕಲ್ಪದಿಂದ ಯಮಧರ್ಮನನ್ನೇ ಒಲಿಸಿ, ಮರಣ ಹೊಂದಿದ್ದ ಪತಿ ಸತ್ಯವಾನನ ಪ್ರಾಣವನ್ನು ಮರಳಿ ಪಡೆದ ಮಹಾನ್ ದಿನವಿದು. ಸಾವಿತ್ರಿ ಯಮನೊಂದಿಗೆ ಹೋರಾಡಿ ತನ್ನ ಪತಿಯ ಜೀವವನ್ನು ಆಲದ ಮರದ ಕೆಳಗೆ ಮರಳಿ ಪಡೆದಿದ್ದರಿಂದಲೇ ಈ ಮರಕ್ಕೆ ವಟಸಾವಿತ್ರಿ ಪೂಜೆಯಲ್ಲಿ ವಿಶೇಷ ಪ್ರಾಮುಖ್ಯತೆ ಇದೆ.

ಈ ವ್ರತವನ್ನು ಕೇವಲ ಒಂದು ಆಚರಣೆಯಾಗಿ ಮಾಡದೆ, ಅದರ ಹಿಂದಿನ ಶ್ರದ್ಧೆಯನ್ನು ಅರ್ಥೈಸಿಕೊಳ್ಳಬೇಕು. ಇದು ಕೌಟುಂಬಿಕ ಬಾಂಧವ್ಯವನ್ನು ಗಟ್ಟಿಗೊಳಿಸುವುದಲ್ಲದೆ, ದಾಂಪತ್ಯ ಜೀವನದಲ್ಲಿ ಪರಸ್ಪರ ನಂಬಿಕೆ ಮತ್ತು ತ್ಯಾಗದ ಮಹತ್ವವನ್ನು ನಮಗೆ ನೆನಪಿಸುತ್ತದೆ ಎಂದು ವ್ರತದ ಪಾವಿತ್ರ್ಯತೆಯನ್ನು ಸುಂದರವಾಗಿ ವಿವರಿಸಿದರು.

ಸಪ್ನಾ ರಾಂಪುರೆ ಅವರು ಕಾರ್ಯಕ್ರಮದ ಮಹತ್ವ ಮತ್ತು ಪ್ರಕೃತಿ ಆರಾಧನೆಯ ಕುರಿತು ಮಾತನಾಡಿದರು, "ನಮ್ಮ ಸನಾತನ ಧರ್ಮದಲ್ಲಿ ಪ್ರಕೃತಿಯನ್ನು ದೈವಸ್ವರೂಪವಾಗಿ ಕಾಣಲಾಗುತ್ತದೆ. ಆಲದ ಮರವು (ವಟವೃಕ್ಷ) ದೀರ್ಘಾಯುಷ್ಯ, ಸ್ಥಿರತೆ ಮತ್ತು ನಿರಂತರ ಬೆಳವಣಿಗೆಯ ಸಂಕೇತವಾಗಿದೆ. ಬ್ರಹ್ಮ, ವಿಷ್ಣು ಮತ್ತು ಮಹೇಶ್ವರರ ತ್ರಿಮೂರ್ತಿ ಸ್ವರೂಪವಾಗಿರುವ ಈ ವೃಕ್ಷಕ್ಕೆ ದಾರ ಸುತ್ತಿ ಪೂಜಿಸುವುದರಿಂದ ಕುಟುಂಬದಲ್ಲಿ ಸದಾ ಶಾಂತಿ, ನೆಮ್ಮದಿ ನೆಲೆಸುತ್ತದೆ ಎಂಬ ಬಲವಾದ ನಂಬಿಕೆಯಿದೆ.

ವೈಜ್ಞಾನಿಕವಾಗಿಯೂ ಆಲದ ಮರವು ಪರಿಸರಕ್ಕೆ ಅತಿ ಹೆಚ್ಚು ಆಮ್ಲಜನಕವನ್ನು ನೀಡುವ ಮೂಲಕ ಜೀವಕೋಟಿಯನ್ನು ರಕ್ಷಿಸುತ್ತದೆ. ಅಂತಹ ಪವಿತ್ರ ಮರವನ್ನು ಪೂಜಿಸುವ ಮೂಲಕ ನಮ್ಮ ಹಿರಿಯರು ಪ್ರಕೃತಿ ಸಂರಕ್ಷಣೆಯ ಸಂದೇಶವನ್ನು ನಮಗೆ ನೀಡಿದ್ದಾರೆ. ಇಂದಿನ ಆಧುನಿಕ ಯುಗದಲ್ಲೂ ಗ್ರಾಮೀಣ ಭಾಗದ ಮಹಿಳೆಯರು ಒಟ್ಟಾಗಿ ಸೇರಿ ಇಂತಹ ಸಂಪ್ರದಾಯಗಳನ್ನು ಜೀವಂತವಾಗಿಟ್ಟಿರುವುದು ಶ್ಲಾಘನೀಯ" ಎಂದು ತಿಳಿಸಿದರು. ಕಾರ್ಯಕ್ರಮದ ಆರಂಭದಲ್ಲಿ ಭಾಗವಹಿಸಿದ್ದ ಹಿರಿಯರಾದ ನೀಲಮ್ಮ ಬಿರಾದಾರ, ಮಲ್ಲಮ್ಮ ಬಿರಾದಾರ ಹಾಗೂ ಪಾರಮ್ಮ ಚಾಂಡೇಶ್ವರೆ ಅವರು ಸಾಂಪ್ರದಾಯಿಕ ಮತ್ತು ಅತ್ಯಂತ ಮಧುರವಾದ 'ಭೂಲಯಿ' ಹಾಡುಗಳನ್ನು ಹಾಡುವ ಮೂಲಕ ಹಬ್ಬದ ಧಾರ್ಮಿಕ ಕಳೆಯನ್ನು ಹೆಚ್ಚಿಸಿದರು. ಗ್ರಾಮದ ಮಹಿಳೆಯರು ಸಾಂಪ್ರದಾಯಿಕ ರೇಷ್ಮೆ ಸೀರೆಗಳನ್ನು ಧರಿಸಿ, ಸಕಲ ಮಂಗಲ ದ್ರವ್ಯಗಳೊಂದಿಗೆ ಅತ್ಯಂತ ಉತ್ಸಾಹದಿಂದ ಈ ಧಾರ್ಮಿಕ ಆಚರಣೆಯಲ್ಲಿ ಪಾಲ್ಗೊಂಡಿದ್ದು ಇಡೀ ಡಿಗ್ಗಿ ಗ್ರಾಮದಲ್ಲಿ ದೈವೀಕ ಹಾಗೂ ಹಬ್ಬದ ವಾತಾವರಣವನ್ನು ಸೃಷ್ಟಿಸಿತ್ತು.

ಈ ಸಂದರ್ಭದಲ್ಲಿ ಆಶಾ ಬಿರಾದಾರ, ರಾಣಿ ಶ್ರೀಗಿರೆ, ಶೈಲಜಾ ಬಿರಾದಾರ, ಶೀಲಾ ರಾಂಪುರೆ,ಶಿವನಂದಾ ರಾಂಪುರೆ,ಪ್ರಿಯಾಂಕಾ, ಸೋನಾಲಿ ಬನವಾಸೆ, ಆರತಿ ಚಾಂಡೇಶ್ವರೆ, ಸವಿತಾ ರಾಂಪುರೆ, ಸೇವಮ್ಮ ಹೂಗಾರ, ಮಹಾದೇವಿ ಬಿರಾದಾರ, ಲಕ್ಷ್ಮಿಬಾಯಿ ರಾಂಪುರೆ, ನಿರ್ಮಲಾ ರಾಂಪುರೆ,ಸುಗುಣವತಿ, ಚಂದ್ರಕಲಾ ಚಾಂಡೇಶ್ವರೆ ಸೇರಿದಂತೆ ಇತರರಿದ್ದರು.

# ಶಾಸಕ ಡಾ. ಅಜಯ್ ಸಿಂಗ್‌ಗೆ ಸಚಿವ ಸ್ಥಾನಕ್ಕೆ ಆಗ್ರಹ

• **ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ್**

ಮಾಜಿ ಮುಖ್ಯಮಂತ್ರಿ ಅಜಾತಶತ್ರು ದಿವಂಗತ ಎನ್. ಧರಂ ಸಿಂಗ್ ಅವರ ಪುತ್ರ ಜೇವರ್ಗಿ ಕ್ಷೇತ್ರದ ಶಾಸಕ ಹಾಗೂ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ (KKRDB) ಅಧ್ಯಕ್ಷರಾದ ಡಾ. ಅಜಯ್ ಸಿಂಗ್ ಅವರಿಗೆ ರಾಜ್ಯ ಸಚಿವ ಸಂಪುಟದಲ್ಲಿ ಸಚಿವ ಸ್ಥಾನ ನೀಡಬೇಕೆಂದು ಹುಮನಾಬಾದ್ ತಾಲೂಕು ರಜಪೂತ ಯುವ ಮುಖಂಡ ಪ್ರಶಾಂತ್ ಠಾಕೂರ್ ವರವಟ್ಟಿ (ಕೆ) ಹಾಗೂ ರಜಪೂತ ಸಮಾಜದ ಮುಖಂಡರು ಆಗ್ರಹಿಸಿದ್ದಾರೆ.

ಪತ್ರಿಕಾ ಪ್ರಕಟಣೆ ಮೂಲಕ ಆಗ್ರಹಿಸಿರುವ ಅವರು ಡಾ. ಅಜಯ್ ಸಿಂಗ್ ಅವರು ಜೆವರ್ಗಿ ಕ್ಷೇತ್ರದಿಂದ ಸತತವಾಗಿ ಮೂರು ಭಾರಿ ಆಯ್ಕೆಯಾಗುತ್ತಾ ಜನಾನುರಾಗಿಯಾಗಿದ್ದಾರೆ. ಅವರ ತಂದೆ ಎನ್. ಧರಂ ಸಿಂಗ್ ಅವರು ರಾಜ್ಯದ ಮುಖ್ಯಮಂತ್ರಿಯಾಗಿ, ಕೆಪಿಸಿಸಿ ಅಧ್ಯಕ್ಷರಾಗಿ ಪಕ್ಷ ಹಾಗೂ ನಾಡಿಗೆ ಅಪಾರ ಕೊಡುಗೆ ನೀಡಿದ್ದಾರೆ. ಅವರ ಕುಟುಂಬದ ರಾಜಕೀಯ ಅನುಭವ ಮತ್ತು ಹಿರಿತನವನ್ನು ಪರಿಗಣಿಸಿ ಡಾ. ಅಜಯ್ ಸಿಂಗ್ ಅವರಿಗೆ ಸಚಿವ ಸ್ಥಾನ ನೀಡುವುದು ಸೂಕ್ತ ಎಂದು ಅಭಿಪ್ರಾಯಪಟ್ಟಿದ್ದಾರೆ.





ಡಾ.ಅಜಯ್ ಸಿಂಗ್ ಅವರು ಸುಶಿಕ್ಷಿತ, ದೂರದೃಷ್ಟಿಯುಳ್ಳ ಹಾಗೂ ಆಡಳಿತಾತ್ಮಕ ಅನುಭವ ಹೊಂದಿರುವ ಸಮರ್ಥ ನಾಯಕರಾಗಿದ್ದಾರೆ. ಕಲ್ಯಾಣ ಕರ್ನಾಟಕ ಭಾಗದ ಅಭಿವೃದ್ಧಿಗಾಗಿ ಅವರು ಕೈಗೊಂಡಿರುವ ಜನಪರ ಯೋಜನೆಗಳು ಮತ್ತು ಪಾರದರ್ಶಕ ಕಾರ್ಯವೈಖರಿಯು ಶ್ಲಾಘನೀಯವಾಗಿದೆ ಎಂದು ಹೇಳಿದ್ದಾರೆ.

ಇವರಂತಹ ಯುವ ಮತ್ತು ದಕ್ಷ ನಾಯಕರಿಗೆ ಸಚಿವ ಸ್ಥಾನ ನೀಡುವುದರಿಂದ ಆಡಳಿತಕ್ಕೆ ಹೊಸ ಹುರುಪು ಬರುವುದಲ್ಲದೆ, ಜನಸಾಮಾನ್ಯರ ಸಮಸ್ಯೆಗಳಿಗೆ ಮತ್ತಷ್ಟು ಪರಿಣಾಮಕಾರಿಯಾಗಿ ಸ್ಪಂದಿಸಲು ಸಾಧ್ಯವಾಗುತ್ತದೆ. ನಮ್ಮ ರಜಪೂತ ಸಮಾಜವು ದೀರ್ಘಕಾಲದಿಂದ ರಾಜ್ಯದ ಏಳಿಗೆಗಾಗಿ ಶ್ರಮಿಸುತ್ತಿದೆ. ಆದ್ದರಿಂದ ಸಚಿವ ಸಂಪುಟದಲ್ಲಿ ನಮ್ಮ ಸಮುದಾಯದ ಧ್ವನಿಯಾಗಿರುವ ಡಾ. ಅಜಯ್ ಸಿಂಗ್ ಅವರಿಗೆ ಸಚಿವ ಸ್ಥಾನ ನೀಡುವ ಮೂಲಕ ಸರ್ಕಾರವು ಸಮಾಜದ ಆಶೋತ್ತರಗಳನ್ನು ಗೌರವಿಸಬೇಕು ಎಂದು ಅವರು ವಿನಂತಿಸಿದ್ದಾರೆ.

> **ಡಾ.ಅಜಯ್ ಸಿಂಗ್ ಅವರು ಸುಶಿಕ್ಷಿತ, ದೂರದೃಷ್ಟಿಯುಳ್ಳ ಹಾಗೂ ಆಡಳಿತಾತ್ಮಕ ಅನುಭವ ಹೊಂದಿರುವ ಸಮರ್ಥ ನಾಯಕರಾಗಿದ್ದಾರೆ. ಕಲ್ಯಾಣ ಕರ್ನಾಟಕ ಭಾಗದ ಅಭಿವೃದ್ಧಿಗಾಗಿ ಅವರು ಕೈಗೊಂಡಿರುವ ಜನಪರ ಯೋಜನೆಗಳು ಮತ್ತು ಪಾರದರ್ಶಕ ಕಾರ್ಯವೈಖರಿಯು ಶ್ಲಾಘನೀಯವಾಗಿದೆ. ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ (KKRDB) ಅಧ್ಯಕ್ಷರಾದ ಡಾ. ಅಜಯ್ ಸಿಂಗ್ ಅವರಿಗೆ ರಾಜ್ಯ ಸಚಿವ ಸಂಪುಟದಲ್ಲಿ ಸಚಿವ ಸ್ಥಾನ ನೀಡಬೇಕು.**
> **–ಪ್ರಶಾಂತ್ ಠಾಕೂರ್**
> **ರಜಪೂತ ಸಮಾಜದ ಮುಖಂಡರು**

ಕರ್ನಾಟಕ ಸರ್ವಾಂಗೀಣ ಅಭಿವೃದ್ಧಿ ಹಾಗೂ ರಜಪೂತ ಸಮಾಜ ಸೇರಿದಂತೆ ಎಲ್ಲಾ ಸಮುದಾಯಗಳ ಹಿತದೃಷ್ಟಿಯಿಂದ ಅಜಯ್ ಸಿಂಗ್ ಅವರ ನಾಯಕತ್ವದ ಅಗತ್ಯವಿದೆ. ಮುಖ್ಯಮಂತ್ರಿಗಳು ಹಾಗೂ ಪಕ್ಷದ ಹೈಕಮಾಂಡ್ ತಕ್ಷಣವೇ ಗಮನಹರಿಸಿ ಅವರಿಗೆ ಸಚಿವ ಸಂಪುಟದಲ್ಲಿ ಸೂಕ್ತ ಸ್ಥಾನಮಾನ ಕಲ್ಪಿಸಿಕೊಡಬೇಕೆಂದು ಪ್ರಶಾಂತ್ ಠಾಕೂರ್ ವರವಟ್ಟಿ (ಕೆ) ಹಾಗೂ ರಜಪೂತ ಸಮಾಜದ ಮುಖಂಡರು ಆಗ್ರಹಿಸಿದ್ದಾರೆ.

# ಬಸವಾದಿ ಶಿವಶರಣರ ಹಿಂದೂ ಸಮಾವೇಶ ವಿರೋಧಿಸಿ ಬೃಹತ್ ಪ್ರತಿಭಟನೆ



• **ಮಲ್ಲಮ್ಮ ನುಡಿ ವಾರ್ತೆ ಬಸವಕಲ್ಯಾಣ**

ಕನ್ನೇರಿ ಸ್ವಾಮಿಯ ನೇತೃತ್ವದ ಬಸವಾದಿ ಶಿವ ಶರಣರ ಹಿಂದೂ ಸಮಾವೇಶ ವಿರೋಧಿಸಿ ಕರ್ನಾಟಕದ ಹಲವಾರು ಜಿಲ್ಲೆ ಮಹಾರಾಷ್ಟ್ರ ಹಾಗೂ ಹೈದರಾಬಾದ್ ನಿಂದ ಬಂದ ಬಸವ ಅನುಯಾಯಿಗಳಿಂದ ಪ್ರತಿಭಟನೆ ನಡೆಸಿದರು.

ಬಸವಕಲ್ಯಾಣದ ಹೊರ ವಲಯದಲ್ಲಿರುವ ಬಂಗಲಾದ ಹತ್ತಿರವಿರುವ ರಾಷ್ಟ್ರೀಯ ಹೆದ್ದಾರಿ-65 ರ ಮೇಲೆ ರವಿವಾರ ಪ್ರತಿಭಟನೆ ನಡೆಸಿ, ಬಸವಾದಿ ಶಿವ ಶರಣರ ಹಿಂದೂ ಸಮಾವೇಶ, ಕನ್ನೇರಿ ಸ್ವಾಮಿ ಹಾಗೂ ಆರ್ ಎಸ್ ಎಸ್ ವಿರುದ್ಧ ಘೋಷಣೆ ಕೂಗಿದರು. ಮುಂದಿನ ದಿನಗಳಲ್ಲಿ ತತ್ವಕ್ಕೆ ಬದ್ಧರಾದವರಿಗೆ ಮಾತ್ರ ನಮ್ಮ ಮತದಾನವಿರುತ್ತದೆ. 2027ರಲ್ಲಿ ಸನಾತನಿಗಳು ಬಸವ ಭಾರತ ಉತ್ಸವ ಎನ್ನುವ ನಾಟಕ ತೆಗೆದುಕೊಂಡು ಬರುತ್ತಿದ್ದಾರೆ.

ಹಾಗಾಗಿ ಎಚ್ಚರದಿಂದ ಇರಬೇಕು. ಇಲ್ಲಿನ ನಮ್ಮ ಸ್ವಾಮೀಜಿಗಳಿಗೆ ಅರ್ಥ ಆಗುವುದಿಲ್ಲ. ಸ್ವಾಮಿಗಳು ಯಾವುದಾದರು ಒಂದು ಕಡೆಗೆ ಇರಬೇಕು. ಸನಾತನಿಗಳ ಕಡೆಗೆ ಇದ್ದರೆ ನಮ್ಮನ್ನು ಬಿಡಬೇಕು. ನಮ್ಮನ್ನು ಬಿಟ್ಟರೆ ಸನಾತನಿಗಳ ಜೊತೆಗೆ ಹೋಗಬೇಕು. ಎರಡು ಕಡೆಗೆ ಇರುವುದು ಚೆನ್ನಾಗಿರುವುದಿಲ್ಲ ಎಂದು ಇಲ್ಲಿನ ಮಠಾಧೀಷರ ವಿರುದ್ಧ ಕಿಡಿ ಕಾರಿದರು.

> **ರಾಜ್ಯ ಸರಕಾರ ಸಾಂಸ್ಕೃತಿಕ ನಾಯಕ ಎಂದು ಬಸವಣ್ಣನವರನ್ನು ಘೋಷಣೆ ಮಾಡಿದೆ. ಆರ್ ಎಸ್ ಎಸ್ ನವರು ಇಂತಹ ಸಮಾವೇಶ ಮಾಡುವುದನ್ನು ಕೂಡ ಸರ್ಕಾರ ತಡೆಯಬೇಕು. ಬಸವಕಲ್ಯಾಣವನ್ನು ಪುರೋಹಿತಶಾಹಿಯನ್ನಾಗಿ ಮಾಡುವ ಹುನ್ನಾರ ಇದೆ. ಇದನ್ನು ಆಗಲು ನಾವು ಬಿಡಬಾರದು ಎಂದು ಗುಡುಗಿದರು.**
> **–ಕೆ.ನೀಲಾ, ಹೋರಾಟಗಾರ್ತಿ**

ಹೋರಾಟಗಾರ್ತಿ ಕೆ.ನೀಲಾ ಅವರು ಮಾತನಾಡಿ, ರಾಜ್ಯ ಸರಕಾರ ಸಾಂಸ್ಕೃತಿಕ ನಾಯಕ ಎಂದು ಬಸವಣ್ಣನವರನ್ನು ಘೋಷಣೆ ಮಾಡಿದೆ. ಆರ್ ಎಸ್ ಎಸ್ ನವರು ಇಂತಹ ಸಮಾವೇಶ ಮಾಡುವುದನ್ನು ಕೂಡ ಸರ್ಕಾರ ತಡೆಯಬೇಕು. ಬಸವಕಲ್ಯಾಣವನ್ನು ಪುರೋಹಿತಶಾಹಿಯನ್ನಾಗಿ ಮಾಡುವ ಹುನ್ನಾರ ಇದೆ. ಇದನ್ನು ಆಗಲು ನಾವು ಬಿಡಬಾರದು ಎಂದು ಗುಡುಗಿದರು. ಇಡೀ ಜಗತ್ತಿನ ಮೊದಲ ಭಯೋತ್ಪಾದಕ ಸನಾತನವಾದಿಗಳಾಗಿದ್ದಾರೆ. ಅವರೇ ಕಲ್ಯಾಣದಲ್ಲಿ ಹರಳಯ್ಯ ಮಧುವರಸ ದಂಪತಿಗಳಿಗೆ ಆನೆ ಕಾಲಿಗೆ ಕಟ್ಟಿ ಎಳೆದರು. ಅಂದಿನ ದಿನಗಳಲ್ಲಿ ಸನಾತನಿಗೆ ಶರಣರು ಹೆದರಲಿಲ್ಲ. ಆದರೆ ಇಂದಿನ ಕೆಲ ಮಠಾಧೀಶರು ಸನಾತನಿಗಳ ಸಂಧಾನ ಮಾಡಿಕೊಂಡಿದ್ದಾರೆ. ಇವರು ಸಂಧಾನ ಯಾಕೆ ಮಾಡಿಕೊಂಡರು? ಬಸವಾದಿ ಶರಣರ ಹಿಂದೂ ಸಮಾವೇಶದ ವಿರುದ್ಧ ಹೋರಾಟ ಯಾಕೆ ಹಿಂದಕ್ಕೆ ತೆಗೆದುಕೊಳ್ಳಲಾಯಿತು ಎಂದು ಇಲ್ಲಿನ ಮಠಾಧೀಶರಿಗೆ ಖಾರವಾಗಿ ಪ್ರಶ್ನೆ ಮಾಡಿದರು.

> **ಬಸವ ಧರ್ಮ ಶೂದ್ರ, ದುಡಿಯುವವರ ಧರ್ಮವಾಗಿದೆ. ಈ ಬಸವಾದಿ ಶಿವ ಶರಣರ ಹಿಂದೂ ಸಮಾವೇಶವು ಆರ್ ಎಸ್ ಎಸ್ ನವರು ಮಾಡುತ್ತಿದ್ದಾರೆ. ಅವರು ವೇದಕ್ಕೆ ಒರೆಯ ಕಟ್ಟುವೆ ಎನ್ನುವ ವಚನ ಹೇಳುವುದಿಲ್ಲ. ಶಾಸ್ತ್ರಗಳು ಹೆಣ್ಣು ಅಸ್ಪೃಶ್ಯರು ಕನಿಷ್ಠ ಬ್ರಾಹ್ಮಣರು ಶ್ರೇಷ್ಠ ಎಂದು ಹೇಳುತ್ತವೆ. ನಮಗೆ ಬಾಬಾಸಾಹೇಬರು ನೀಡಿದ ಸಂವಿಧಾನದಿಂದಲೇ ಅಕ್ಷರ ಸಿಕ್ಕಿದೆ. ಬುದ್ಧ ಬಸವಣ್ಣ ಹಾಗೂ ಅಂಬೇಡ್ಕರ್ ಅವರ ತತ್ವಗಳ ಮೇಲೆ ನಡೆಯುವವರಾಗಿದ್ದೇವೆ ಎಂದರು.**
> **–ಡಾ.ಮೀನಾಕ್ಷಿ ಬಾಳಿ**

# ಸಮಾನತೆ ಮತ್ತು ಭಾವೈಕ್ಯದ ಸಂಕೇತ ಸಮವಸ್ತ್ರ: ನಾರಾಯಣ

• **ಮಲ್ಲಮ್ಮ ನುಡಿ ವಾರ್ತೆ ಬೀದರ್**

ಸರಸ್ವತಿ ಶಿಕ್ಷಣ ವಿಕಾಸ ಸಮಿತಿ ಸಂಚಾಲಿತ ಶ್ರೀ ಮಡಿವಾಳೇಶ್ವರ ಶಿಶುಮಂದಿರ, ಹಿರಿಯ ಪ್ರಾಥಮಿಕ ಹಾಗೂ ಪ್ರೌಢ ಶಾಲೆ, ಮಂಗಲಪೇಟೆಯಲ್ಲಿ ಸಮವಸ್ತ್ರ ದಿನಾಚರಣೆಯನ್ನು ಸಂಭ್ರಮದಿಂದ ಆಚರಿಸಲಾಯಿತು.

ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಆಗಮಿಸಿದ್ದ ಮರ್ಕೆಟ್ ಪೊಲೀಸ್ ಠಾಣೆಯ ಸಹಾಯಕ ಉಪನಿರೀಕ್ಷಕರಾದ ನಾರಾಯಣ ಕುಲರ್ಣಿ ಅವರು ಮಾತನಾಡಿ, ಸಮವಸ್ತ್ರವು ಬಡವ-ಶ್ರೀಮಂತ ಎಂಬ ಭೇದಭಾವವನ್ನು ದೂರ ಮಾಡಿ ಮಕ್ಕಳಲ್ಲಿ ಸಮಾನತೆ ಹಾಗೂ ಏಕತೆಯ ಭಾವನೆ ಬೆಳೆಸುವುದರ ಜೊತೆಗೆ ಶಿಸ್ತು ಮತ್ತು ಅನುಶಾಸನವನ್ನು ಮೈಗೂಡಿಸಲು ಸಹಕಾರಿಯಾಗಿದೆ



ಎಂದು ಹೇಳಿದರು. ಶಾಲೆಯ ವಿದ್ಯಾರ್ಥಿಗಳು ಅಚ್ಚುಕಟ್ಟಾಗಿ ಸಮವಸ್ತ್ರ ಧರಿಸಿರುವುದನ್ನು ಅವರು ಮೆಚ್ಚುಗೆ ವ್ಯಕ್ತಪಡಿಸಿದರು.

ಇನ್ನೋರ್ವ ಅತಿಥಿಯಾಗಿದ್ದ ಮರ್ಕೆಟ್ ಪೊಲೀಸ್ ಠಾಣೆಯ ಸಹಾಯಕ ಉಪನಿರೀಕ್ಷಕರಾದ ಅನಿತಾ ಪೋಲ್‌ದಾಸ್ ಅವರು, ವಿದ್ಯಾರ್ಥಿಗಳು ಶಾಲೆಯು ನಿಗದಿಪಡಿಸಿರುವ ಸಮವಸ್ತ್ರವನ್ನು ಕಡ್ಡಾಯವಾಗಿ ಧರಿಸಬೇಕು. ಸಮವಸ್ತ್ರವು ವಿದ್ಯಾರ್ಥಿಗಳ ಶೈಕ್ಷಣಿಕ ಕಾರ್ಯಕ್ಷಮತೆಯ ಮೇಲೂ ಸಕಾರಾತ್ಮಕ ಪರಿಣಾಮ ಬೀರುತ್ತದೆ ಎಂದು ತಿಳಿಸಿ, ಪ್ರತಿಯೊಬ್ಬ ವಿದ್ಯಾರ್ಥಿಯೂ ಸಮವಸ್ತ್ರದ ಬಗ್ಗೆ ಗೌರವ ಮತ್ತು ಅಭಿಮಾನ ಹೊಂದಿರಬೇಕು ಎಂದು ಕರೆ ನೀಡಿದರು.

ಸಂಸ್ಥೆಯ ಅಧ್ಯಕ್ಷ ಪ್ರೊ. ಎಸ್.ಬಿ. ಸಜ್ಜನಶೆಟ್ಟಿ ಅವರು ಅಧ್ಯಕ್ಷೀಯ ಭಾಷಣದಲ್ಲಿ ವಿದ್ಯಾರ್ಥಿಗಳು ಶಿಸ್ತು, ಸಂಯಮ ಮತ್ತು ಉತ್ತಮ ಹವ್ಯಾಸಗಳನ್ನು ಅಳವಡಿಸಿಕೊಂಡು ಆರ್ಯ ಪ್ರಜೆಗಳಾಗಬೇಕು ಎಂದು ಸಲಹೆ ನೀಡಿದರು. ಜೊತೆಗೆ ಪ್ರತಿದಿನ ಸಮವಸ್ತ್ರವನ್ನು ಅಚ್ಚುಕಟ್ಟಾಗಿ ಹಾಗೂ ನಿಯಮಿತವಾಗಿ ಧರಿಸಿಕೊಂಡು ಬರಬೇಕು ಎಂದು ತಿಳಿಸಿದರು. ಕಾರ್ಯಕ್ರಮದ ಅಂಗವಾಗಿ ಅತಿಥಿಗಳು ಮತ್ತು ಅಧ್ಯಕ್ಷರು ವಿದ್ಯರ್ಥಿಗಳ ಸಮವಸ್ತ್ರವನ್ನು ವೀಕ್ಷಿಸಿ, ಅತ್ಯುತ್ತಮ ಸಮವಸ್ತ್ರ ಧರಿಸಿದ್ದ ವಿದ್ಯರ್ಥಿಗಳಿಗೆ ಬಹುಮಾನ ವಿತರಿಸಿ ಅಭಿನಂದಿಸಿದರು.

ಈ ಸಂದರ್ಭದಲ್ಲಿ ಪ್ರೌಢ ಶಾಲೆಯ ಮುಖ್ಯಗುರು ಶರಣು ಪಾಟೀಲ, ಪ್ರಾಥಮಿಕ ಶಾಲೆಯ ಮುಖ್ಯಗುರು ರ್ಚನಾ ಶಿರಗೆರೆ ಹಾಗೂ ಶಿಕ್ಷಕ ವೃಂದ ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ 9ನೇ ತರಗತಿಯ ವಿದ್ಯರ್ಥಿನಿ ದಿವ್ಯ ನಾಗೇಶ ಸ್ವಾಗತಿಸಿದರು. ಆದಿತಿ ದತ್ತಾತ್ರಿ ವಂದಿಸಿದರು. ವೈಷ್ಣವಿ ವಿಜಯಲಕ್ಷ್ಮೀ ಕೃಷ್ಣ ಕಾರ್ಯಕ್ರಮ ನಿರೂಪಿಸಿದರು. ರ್ಪಿತಾ ನಾಗೇಶ ವೈಯಕ್ತಿಕ ಗೀತೆ ಹಾಡಿದರು. ರಾಷ್ಟ್ರಗೀತೆಯೊಂದಿಗೆ ಕರ್ಯಕ್ರಮ ಮುಕ್ತಾಯಗೊಂಡಿತು.

# ಪವಿತ್ರತೆಯೇ ಸರ್ವ ಶಕ್ತಿಗಳ ಮೂಲ: ಬಿ.ಕೆ ಪ್ರತಿಮಾ ಬಹೆನ್ ಜಿ

• **ಮಲ್ಲಮ್ಮ ನುಡಿ ವಾರ್ತೆ ಬೀದರ್**

"ಪವಿತ್ರವಾದ ಬುದ್ಧಿ ಮಾತ್ರ ಏಕಾಗ್ರತೆಯನ್ನು ಸಾಧಿಸಲು ಸಾಧ್ಯ, ಏಕೆಂದರೆ ಏಕಾಗ್ರತೆಗೆ ಶಕ್ತಿಯುತ ಬುದ್ಧಿಯ ಅಗತ್ಯವಿದೆ ಮತ್ತು ಬುದ್ಧಿಯು ಪವಿತ್ರತೆಯಿಂದ ಮಾತ್ರ ಶಕ್ತಿಶಾಲಿಯಾಗುತ್ತದೆ" ಎಂದು ಪ್ರಜಾಪಿತಾ ಬ್ರಹ್ಮಾಕುಮಾರಿಸ್ ಈಶ್ವರಿಯ ವಿಶ್ವವಿದ್ಯಾಲಯ ರಾಜಯೋಗ ಕೇಂದ್ರ ಪಾವನಧಾಮದ ಸಂಚಾಲಕಿ ಬಿ.ಕೆ ಪ್ರತಿಮಾ ಬಹೆನ್ ಜಿ ತಿಳಿಸಿದರು.

ನಗರದ ಜನವಾಡ ರಸ್ತೆಯಲ್ಲಿರುವ ಬ್ರಹ್ಮಾಕುಮಾರಿಸ್ ಕೇಂದ್ರ ಪಾವನಧಾಮ ಅವರಣದಲ್ಲಿ ರವಿವಾರ ಮಾ ಜಗದಂಬಾ ಸರಸ್ವತಿ(ಮಮ್ಮಾ) ಅವರ ಜಯಂತಿ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿರುವ ಅವರು, ಈ ಸಂಗಮ ಯುಗದಲ್ಲಿ ಪವಿತ್ರತೆಯು ಅತ್ಯಂತ ಶ್ರೇಷ್ಠ ಸಾಧನೆಯಾಗಿದೆ. ಪವಿತ್ರ ಬುದ್ಧಿಯಿಂದ ಮಾತ್ರ ಜ್ಞಾನದ ಆಳವನ್ನು ಅರಿಯಲು ಹಾಗೂ ಶಿವಬಾಬಾ ಅವರ ದಿವ್ಯ ಮತ್ತು ಸೂಕ್ಷ್ಮ ಪ್ರೇರಣೆಗಳನ್ನು ಗ್ರಹಿಸಲು ಸಾಧ್ಯ ಎಂದು ಅವರು ವಿವರಿಸಿದರು.

ಪವಿತ್ರತೆಯೇ ಶಿವಬಾಬಾ ಅವರ ಆಸ್ತಿ: ಸಂಗಮ ಯುಗದಲ್ಲಿ ಪರಮಾತ್ಮನು ನಮಗೆ ನೀಡಿರುವ ಅತಿ ದೊಡ್ಡ ಬಂಡವಾಳವೆಂದರೆ ಪವಿತ್ರತೆ. ಇದನ್ನು ಕಳೆದುಕೊಂಡು ವಿಶ್ವದ ಯಾವುದೇ ಅತ್ಯುನ್ನತ ಸ್ಥಾನವನ್ನು ಪಡೆದರೂ ಅದು ಮೌಲ್ಯ ರಹಿತ. ಪವಿತ್ರತೆಯನ್ನು ಕಾಪಾಡಿಕೊಳ್ಳುವುದು ನಮ್ಮ ನಿಷ್ಠೆಯ ಸಂಕೇತವಾಗಿದೆ.

ನಿರ್ಭಯತೆ ಮತ್ತು ಆತ್ಮಸಮ್ಮಾನ: ಜೀವನದಲ್ಲಿನ ಭಯ, ನಿರಾಶೆ ಮತ್ತು ಉದಾಸೀನತೆಗಳು ಅಪವಿತ್ರತೆಯ ಫಲವಾಗಿವೆ. ಪವಿತ್ರತೆಯು ಅಪಾರವಾದ ನಿರ್ಭಯತೆ, ಅಚಲತೆ ಮತ್ತು ಆತ್ಮಗೌರವವನ್ನು ನೀಡುತ್ತದೆ. ಮಾಯೆಯನ್ನು ಎದುರಿಸುವ ಶಕ್ತಿ ಇರುವುದು ಪವಿತ್ರತೆಯಲ್ಲಿ ಮಾತ್ರ.



ಈಶ್ವರೀಯ ಸೇವೆಯ ಶ್ರೇಷ್ಠ ಸಾಧನ ಪವಿತ್ರತೆಯು ನಮ್ಮ ಸೇವೆಯ ಮುಖ್ಯ ಆಧಾರವಾಗಿದೆ. ಇದರ ಕೊರತೆಯಿದ್ದರೆ ನಾವು ವ್ಯಯಿಸಿದ ಸಮಯ, ಶಕ್ತಿ ಮತ್ತು ಸಂಪತ್ತು ನಿಷ್ಫಲವಾಗುತ್ತದೆ. ಪವಿತ್ರತೆಯ ಶುದ್ಧ ಅಲೆಗಳನ್ನು ಹರಡುವ ಮೂಲಕ ನಾವು ವಿಶ್ವದ ಕಲುಷಿತ ವಾತಾವರಣವನ್ನು ಸ್ವಚ್ಛಗೊಳಿಸಬಹುದು. ಸರ್ವ ಗುಣಗಳ ಜನನಿ: ಪವಿತ್ರತೆಯೆಂಬ ಶೃಂಗಾರವಿದ್ದರೆ, ಆತ್ಮದಲ್ಲಿ ಉಳಿದ ಸದ್ಗುಣಗಳು ತಾನಾಗಿಯೇ ಒಲಿದು ಬರುತ್ತವೆ. ಆಂತರಿಕ ಮುಗುಳ್ನಗೆ, ಆಳವಾದ ಶಾಂತಿ ಮತ್ತು ಇತರರಿಗೆ ಸುಖ ನೀಡುವ ಪ್ರವೃತ್ತಿ ಜಾಗೃತವಾಗುತ್ತದೆ.

ಸೃಷ್ಟಿಯ ಬೆಳಕು (ನೂರ್): ದೇಹದಲ್ಲಿ ಕಣ್ಣಿಗೆ ಎಷ್ಟು ಪ್ರಾಮುಖ್ಯತೆ ಇದೆಯೋ, ಸೃಷ್ಟಿಯಲ್ಲಿ ಪವಿತ್ರ ಆತ್ಮಗಳಿಗೆ ಅಷ್ಟೇ ಪ್ರಾಮುಖ್ಯತೆ ಇದೆ. ಪವಿತ್ರ ಆತ್ಮಗಳಿಲ್ಲದಿದ್ದರೆ ಈ ಸೃಷ್ಟಿ ನಿರ್ಜೀವವಾಗುತ್ತದೆ ಮತ್ತು ಸುಖ-ಶಾಂತಿಯ ಬರಗಾಲ ಎದುರಾಗುತ್ತದೆ.

ಸಂಪೂರ್ಣ ಪವಿತ್ರತೆಯ ಸ್ಥಿತಿ ಮತ್ತು ಸಾಧನಾ ಮಾರ್ಗ (ಪುರುಷಾರ್ಥ): ಸಂಪೂರ್ಣ ಪವಿತ್ರತೆಯೆಂದರೆ ಕೇವಲ ಬಾಹ್ಯ ಶುದ್ಧಿಯಲ್ಲ, ಬದಲಾಗಿ ವ್ಯರ್ಥ ಸಂಕಲ್ಪಗಳಿಂದ ಮುಕ್ತಿ, ದೇಹದ ಆಕರ್ಷಣೆಯ ಅಂತ್ಯ ಮತ್ತು ಕನಸಿನಲ್ಲೂ ಸಂಪೂರ್ಣ ಶುದ್ಧಿಯನ್ನು ಹೊಂದುವುದಾಗಿದೆ. ಈ ಉನ್ನತ ಸ್ಥಿತಿಯನ್ನು ತಲುಪಲು ಕೆಲವು ಮಾರ್ಗೋಪಾಯಗಳಿವೆ

ದೈನಂದಿನ ಚಿಂತನೆ: ಪ್ರತಿದಿನ 10 ನಿಮಿಷಗಳ ಕಾಲ ಏಕಾಂತದಲ್ಲಿ ಪವಿತ್ರತೆಯ ಮಹತ್ವದ ಬಗ್ಗೆ ಚಿಂತನೆ ನಡೆಸುವುದು. ನಕಾರಾತ್ಮಕ ದೃಶ್ಯಗಳು, ಕಥೆಗಳು ಮತ್ತು ಗೀತೆಗಳಿಂದ ದೂರವಿರುವುದು.

ಯೋಗಾಭ್ಯಾಸ (ಧ್ಯಾನ): ಪ್ರತಿದಿನ ಅರ್ಧ ಗಂಟೆಗಳ ಕಾಲ ಯೋಗ ಮಾಡಬೇಕು. "ನಾನು ಪವಿತ್ರತೆಯ ಫರಿಸ್ತಾ (ದೇವತೆ), ಕಮಲದಾಸನದ ಮೇಲೆ ಕುಳಿತಿದ್ದೇನೆ. ಪವಿತ್ರತೆಯ ಸಾಗರನಾದ ಶಿವಬಾಬಾ ಅವರಿಂದ ಪವಿತ್ರ ಕಿರಣಗಳು ನನ್ನಲ್ಲಿ ಹರಿಯುತ್ತಿವೆ" ಎಂದು ಸಂಕಲ್ಪ ಮಾಡಬೇಕು.

ವಿಶ್ವಕ್ಕೆ ಶುದ್ಧ ಪ್ರಕಂಪನ (ಗಿುಭಡಿಚಿಣುಠಿ): ಕನಿಷ್ಠ 10 ನಿಮಿಷಗಳ ಕಾಲ ಇಡೀ ವಿಶ್ವ ಮತ್ತು ಪ್ರಕೃತಿಗೆ ಪವಿತ್ರತೆಯ ಅಲೆಗಳನ್ನು ಹರಡುವ ಅಭ್ಯಾಸ ಮಾಡಬೇಕು.

ಪ್ರಪಂಚದಲ್ಲಿ ಪವಿತ್ರತೆ ಮತ್ತು ಯೋಗ ಇವೆರಡೇ ಅತ್ಯಂತ ದೊಡ್ಡ ಶಕ್ತಿಗಳಾಗಿವೆ. ಈ ಶಕ್ತಿಗಳನ್ನು ಹೊಂದಿರುವವರು ಎಂದಿಗೂ ಸೋಲುವುದಿಲ್ಲ. ಪತಿತ-ಪಾವನನಾದ ಪರಮಾತ್ಮನಿಗೆ ಸಂಪೂರ್ಣ ಪವಿತ್ರ ಜೀವನ ನಡೆಸುವ ವಾಗ್ದಾನವನ್ನು ಮಾಡುವ ಮೂಲಕ ಈ ಶ್ರೇಷ್ಠ ಮಾರ್ಗದಲ್ಲಿ ದೃಢವಾಗಿ ಮುನ್ನಡೆಯಬೇಕು ಎಂದು ಬಹೆನ್ ಜಿ ಹೇಳಿದರು.

ಮಮ್ಮಾ ಅವರ ಕೆಲವು ವಿಚಾರಗಳನ್ನು ಮೆಲಕು ಹಾಕಿದ ಬಹೆನ್ ಜಿ ಅವರು, ಮಮ್ಮಾ ಅವರನ್ನು ಸ್ವತಃ ಶಿವಪರಮಾತ್ಮನು ರಾಧೆ ಎಂದು ಸಂಭೋದಿಸಿದ್ದರು. ಅವರಿಗೆ ನೇರವಾಗಿ ಶಿವಪರಮಾತ್ಮನ ಅನುಗ್ರಹವಿತ್ತು. ಹಾಗಾಗಿ ಅವರಿಗೆ ನೇರವಾಗಿ ಸಂಪರ್ಕ ಹೊಂದಿದ್ದರು. ಬ್ರಹ್ಮಾ ಬಾಬಾ ಅವರು ಲೌಕಿಕ ಜಗತ್ತಿನಿಂದ ಅಲೌಕಿಕವನ್ನು ಆರಿಸಿಕೊಂಡರೆ ಸ್ವತಃ ಮಮ್ಮಾ ಅವರು, ಕನ್ನೆಯರನ್ನು ಒಗ್ಗೂಡಿಸಿಕೊಂಡು ಮಹಿಳಾ ಸನ್ಯಾಸತ್ವಕ್ಕೆ ಭದ್ರ ಬುನಾದಿ ಹಾಕಿದ್ದರು. ಹಾಗಾಗಿ ಇಂದು ವಿಶ್ವದ 148 ದೇಶಗಳಲ್ಲಿ ಸುಮಾರು ಅಣ್ಣಂದಿರ ಸಹಯೋಗದಿಂದ ಐದು ವರೆ ಲಕ್ಷಕ್ಕೂ ಅಧಿಕ ಮಹಿಳಾ ಮಣಿಗಳು ಪರಮಾತ್ಮನ ಮನೆಯ ಜವಾಬ್ದಾರಿ ವಹಿಸಿಕೊಂಡಿರುವರು ಎಂದರು.

ಬ್ರಹ್ಮಕುಮಾರಿಸ್ ಪಾವನಧಾಮ ಕೇಂದ್ರದ ಶಾಖೆಗಳ ಎಲ್ಲ ಬಿ.ಕೆ ಸಹೋದರಿಯರಾದ ಬಿ.ಕೆ ಜ್ಯೋತಿ ಬಹೆನ್, ಬಿ.ಕೆ ವಿಜಯಲಕ್ಷ್ಮೀ ಬಹೆನ್, ಬಿ.ಕೆ ಶಿಲ್ಪಾ ಬಹೆನ್, ಬಿ.ಕೆ ಮೀನಾ, ಬಹೆನ್, ಬಿ.ಕೆ ಮಹಾನಂದಾ ಬಹೆನ್, ಬಿ.ಕೆ ಉಷಾ ಬಹೆನ್, ಬಿ.ಕೆ ರೂಪಾ ಬಹೆನ್, ಬಿ.ಕೆ ಉಮಾ ಬಹೆನ್, ಬಿ.ಕೆ ರೇಣು ಬಹೆನ್, ಬಿ.ಕೆ ರೇಣುಕಾ ಬಹೆನ್, ಬಿ.ಕೆ ಅಕ್ಷತಾ ಬಹೆನ್ ಹಾಗೂ ಇತರರು ವೇದಿಕೆಯಲ್ಲಿದ್ದರು.

ಇದಕ್ಕೂ ಮುನ್ನ ಯೋಗ ನಡೆಯಿತು. ಇದೆ ವೇಳೆ ಅವರ ಜೀವನ ಚರಿತ್ರೆಯ ಕಿರುಚಿತ್ರ ಪ್ರದರ್ಶನಗೊಂಡಿತು. ನಂತರ ಮಮ್ಮಾ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಲಾಯಿತು. ತದನಂತರ ಭೋಗ(ನೈವಿದ್ಯ)ಅರ್ಪಿಸಲಾಯಿತು. ಸೇರಿದ ಎಲ್ಲ ಸಹೋದರ-ಸಹೋದರಿಯರು ಬ್ರಹ್ಮಾ ಭೋಜನ ಸವಿದ ಬಳಿಕ ಕಾರ್ಯಕ್ರಮ ಮುಕ್ತಾಯವಾಯಿತು.

ಆರಂಭದಲ್ಲಿ ಕೇಂದ್ರದ ಹಿರಿಯ ರಾಜಯೋಗ ಶಿಕ್ಷಕಿ ಬಿ.ಕೆ ಗುರುದೇವಿ ಅಕ್ಕನವರು ಸ್ವಾಗತಿಸಿ ಕಾರ್ಯಕ್ರಮ ನಿರೂಪಿಸಿದರು. ಬಿ.ಕೆ ಮಂಗಲಾ ಬಹೆನ್ ವಂದನೆ ಸಲ್ಲಿಸಿದರು.

# ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸನ್ಮಾನ; ನೌಕರರ ಭವನ ನಿರ್ಮಾಣಕ್ಕೆ ಸಂಸದ ಸಾಗರ ಖಂಡ್ರೆ ಭರವಸೆ

• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ಶಿಕ್ಷಣವೇ ಸಮಾಜದ ಸರ್ವಾಂಗೀಣ ಅಭಿವೃದ್ಧಿಗೆ ಭದ್ರ ಅಡಿಪಾಯವಾಗಿದೆ. ವಿದ್ಯಾರ್ಥಿಗಳು ಉತ್ತಮ ಶಿಕ್ಷಣದೊಂದಿಗೆ ಸಂಸ್ಕಾರ,ಮಾನವೀಯ ಮೌಲ್ಯಗಳು ಹಾಗೂ ನಾಯಕತ್ವಗುಣಗಳನ್ನು ಬೆಳೆಸಿಕೊಂಡು ಸಮಾಜ ಮತ್ತು ರಾಷ್ಟ್ರದ ಅಭಿವೃದ್ಧಿಗೆ ತಮ್ಮ ಕೊಡುಗೆ ನೀಡಬೇಕು ಎಂದು ಬೀದರ ಲೋಕಸಭಾ ಕ್ಷೇತ್ರದ ಸಂಸದ ಸಾಗರ ಈಶ್ವರ ಖಂಡ್ರೆ ಕರೆ ನೀಡಿದರು.

ನಗರದ ಕನಕ ಭವನದಲ್ಲಿ ತಾಲೂಕು ಗೊಂಡ (ಕುರುಬ) ನೌಕರರ ಸಂಘದ ವತಿಯಿಂದ ಭಾನುವಾರ ಆಯೋಜಿಸಿದ್ದ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಯಲ್ಲಿ ಸಾಧನೆಗೈದ ಪ್ರತಿಭಾವಂತ ವಿದ್ಯಾರ್ಥಿಗಳ ಪ್ರತಿಭಾ ಪುರಸ್ಕಾರ ಮತ್ತು ವಿವಿಧ ಕ್ಷೇತ್ರಗಳ ಸಾಧಕರ ಅಭಿನಂದನಾ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಗೊಂಡ (ಕುರುಬ) ಸಮಾಜದ ನೌಕರರ ಭವನ ನಿರ್ಮಾಣಕ್ಕೆ ಅಗತ್ಯ ಸಹಕಾರ ನೀಡುವುದಾಗಿ ಭರವಸೆ ನೀಡಿದ ಅವರು, ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ವಿದ್ಯಾರ್ಥಿಗಳು ದೊಡ್ಡ ಕನಸುಗಳನ್ನು ಕಂಡು ನಿರಂತರ ಪರಿಶ್ರಮದಿಂದ ಸಾಧನೆ ಮಾಡಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿದ್ದ ಪವಾಡ ಪುರುಷ ಗೋಪಾಲ ಮಹಾರಾಜ್ ಉಚ್ಚಾ ಮಾತನಾಡಿ, ಪ್ರತಿಯೊಬ್ಬರಲ್ಲೂ ಪ್ರತಿಭೆ ಅಡಗಿದೆ. ಅದನ್ನು ಗುರುತಿಸಿ ಬೆಳೆಸಿದಾಗ ಮಾತ್ರ ಯಶಸ್ಸು ಸಾಧ್ಯ. ಗೊಂಡ (ಕುರುಬ) ಸಮಾಜದ ಜನರು ಪ್ರಾಮಾಣಿಕರು, ಶ್ರಮಜೀವಿಗಳು ಹಾಗೂ ಸರಳ ಸ್ವಭಾವದವರಾಗಿದ್ದು, ಸಮಾಜದ ವಿದ್ಯಾರ್ಥಿಗಳು ಉನ್ನತ ಶಿಕ್ಷಣ ಪಡೆದು ದೇಶದ ಅಭಿವೃದ್ಧಿಗೆ ತಮ್ಮ ಕೊಡುಗೆ ನೀಡಬೇಕು ಎಂದು ಆಶಿಸಿದರು.

ಪಂಚ್ ಗ್ಯಾರಂಟಿ ಯೋಜನೆಗಳ ಜಿಲ್ಲಾ ಅಧ್ಯಕ್ಷ ಅಮೃತರಾವ ಚಿಮಕೊಡೆ ಮಾತನಾಡಿ, ಗೊಂಡ ಸಮಾಜವು ತನ್ನದೇ ಆದ ಶ್ರೀಮಂತ ಇತಿಹಾಸ ಮತ್ತು ಸಂಸ್ಕೃತಿಯನ್ನು ಹೊಂದಿದೆ. ಸಮಾಜದ ಶೈಕ್ಷಣಿಕ, ಸಾಮಾಜಿಕ ಹಾಗೂ ರಾಜಕೀಯ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಬೇಕು. ಜೊತೆಗೆ ಗೊಂಡ (ಕುರುಬ) ಸಮಾಜವನ್ನು ಪರಿಶಿಷ್ಟ ಪಂಗಡ (ಎಸ್.ಟಿ.) ಪಟ್ಟಿಗೆ ಸೇರಿಸಲು ಹೋರಾಟವನ್ನು ಮತ್ತಷ್ಟು ಬಲಪಡಿಸುವ ಅಗತ್ಯವಿದೆ ಎಂದರು.



ಗೊಂಡ (ಕುರುಬ) ನೌಕರರ ಸಂಘದ ಅಧ್ಯಕ್ಷ ಅರ್ಜುನರಾವ ಸೂರ್ಯವಂಶಿ ಮಾತನಾಡಿ, ಶಿಕ್ಷಣ, ಸೇವೆ ಹಾಗೂ ಸಮಾಜಮುಖಿ ಕಾರ್ಯಗಳಲ್ಲಿ ಸಾಧನೆ ಮಾಡಿದವರನ್ನು ಗುರುತಿಸಿ ಗೌರವಿಸುವ ಉದ್ದೇಶದಿಂದ ಪ್ರತಿಭಾ ಪುರಸ್ಕಾರ ಹಾಗೂ ಅಭಿನಂದನಾ ಸಮಾರಂಭವನ್ನು ಆಯೋಜಿಸಲಾಗಿದೆ ಎಂದು ತಿಳಿಸಿದರು.

ಪ್ರಧಾನ ಕಾರ್ಯದರ್ಶಿ ಆನಂದ ಹಳೆಂಬರ ಪ್ರಾಸ್ತಾವಿಕವಾಗಿ ಮಾತನಾಡಿ, ವಿದ್ಯಾರ್ಥಿಗಳು ಅಂಕಗಳ ಹಿಂದೆ ಮಾತ್ರ ಓಡದೆ ಶಿಸ್ತು, ಸಮಯಪ್ರಜ್ಞೆ, ಪರಿಶ್ರಮ ಹಾಗೂ ಉತ್ತಮ ವ್ಯಕ್ತಿತ್ವವನ್ನು ರೂಢಿಸಿಕೊಳ್ಳಬೇಕು. ಸೋಲು ಜೀವನದ ಅಂತ್ಯವಲ್ಲ, ಯಶಸ್ಸಿನ ಮೊದಲ ಮೆಟ್ಟಿಲು ಎಂಬುದನ್ನು ಅರಿತು ಮುನ್ನಡೆಯಬೇಕು ಎಂದು ಕಿವಿಮಾತು ಹೇಳಿದರು.

ಈ ಸಂದರ್ಭದಲ್ಲಿ ಗೊಂಡ (ಕುರುಬ) ನೌಕರರ ಭವನ ನಿರ್ಮಾಣ ಹಾಗೂ ಗೊಂಡ (ಕುರುಬ) ಸಮಾಜವನ್ನು ಪರಿಶಿಷ್ಟ ಪಂಗಡ (ಎಸ್.ಟಿ.) ಪಟ್ಟಿಗೆ ಸೇರಿಸುವ ಕುರಿತು ಸಂಸದರಿಗೆ ಮನವಿ ಸಲ್ಲಿಸಲಾಯಿತು. ಕಾರ್ಯಕ್ರಮದಲ್ಲಿ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಪರೀಕ್ಷೆಗಳಲ್ಲಿ ಶೇ.85ಕ್ಕಿಂತ ಹೆಚ್ಚು ಅಂಕಗಳನ್ನು ಗಳಿಸಿದ 90ಕ್ಕೂ ಹೆಚ್ಚು ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು. ವಿವಿಧ ಸರ್ಕಾರಿ ಇಲಾಖೆಗಳಲ್ಲಿ ಪದೋನ್ನತಿ ಪಡೆದ, ಸೇವಾ ನಿವೃತ್ತಿ ಹೊಂದಿದ ಹಾಗೂ ವಿಶೇಷ ಸಾಧನೆ ಮಾಡಿದ ನೌಕರರು, ನೂತನವಾಗಿ ಆಯ್ಕೆಯಾದ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ನಿರ್ದೇಶಕರು, ಗೊಂಡ (ಕುರುಬ) ನೌಕರರ ಸಂಘದ ನೂತನ ಹಾಗೂ ನಿಕಟಪೂರ್ವ ಪದಾಧಿಕಾರಿಗಳು, ಸಮಾಜದ ಮುಖಂಡರು ಹಾಗೂ ಪತ್ರಕರ್ತರ ಸಂಘದ ನೂತನ ಅಧ್ಯಕ್ಷ ಜೈರಾಜ ಪಾತ್ರೆ ಮತ್ತು ಕಾರ್ಯದರ್ಶಿ ಸಂತೋಷ ಬಿ.ಜಿ. ಪಾಟೀಲ ಅವರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಬೀರಲಿಂಗದೇವ ಕನಕ ಗುರುಪೀಠ ತಿಂತಣಿ ಪೂಜ್ಯರು, ಜಿಲ್ಲಾ ಗೊಂಡ (ಕುರುಬ) ನೌಕರರ ಸಂಘದ ಅಧ್ಯಕ್ಷ ನಿರಂಜಪ್ಪ ಪಾತ್ರೆ ಸೇರಿದಂತೆ ಇತರರು ಮಾತನಾಡಿದರು.

ಖುಶಾಲರಾವ ಯರನಳ್ಳೆ, ವಿಜಯಕುಮಾರ ಡುಮ್ಮೆ, ಎಂ.ಎಸ್. ಕಟಗಿ, ಕೆ.ಡಿ. ಗಣೇಶ, ಬಾಲಾಜಿ ಖೇಡಕರ, ಬಾಲಾಜಿ ಜಬಾಡೆ, ಶ್ರೀನಿವಾಸ ಮೇತ್ರೆ, ರಾಜಕುಮಾರ ಜೋಳದಾಪಕೆ, ವೆಂಕಟ ಬಿರಾದಾರ, ಬಾಜಿರಾವ ಮೇತ್ರೆ, ಜಾಲಿಂದರ ಮೇತ್ರೆ, ಮಹಾನಂದಾ, ಅನ್ನಪೂರ್ಣಾ ಮೇತ್ರೆ, ಮಾಲಾಶ್ರೀ ತಳವಾಡೆ, ಸುನೀತಾ ಬರ್ಮಾ,ಆರತಿ ಮೇತ್ರೆ, ಸಂತೋಷ ಜಬಾಡೆ, ರಂಗರಾವ ಮೇತ್ರೆ, ಶಾಲಿವಾನ ಘೋದೆ, ವೆಂಕಟ ಮಲಗೊಂಡಾ, ಅಶೋಕ ಬರ್ಮಾ, ಧನರಾಜ ಮೇತ್ರೆ, ಡಾ. ಕಾಮರಾಯ ಜಗ್ಗಿನವರ ಸೇರಿದಂತೆ ಸಮಾಜದ ಮುಖಂಡರು, ನೌಕರರು, ಯುವಕರು, ವಿದ್ಯಾರ್ಥಿಗಳು ಹಾಗೂ ತಾಯಂದಿರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

ಹಣಮಶೆಟ್ಟಿ ಸಿದ್ದೇಶ್ವರೆ ಸ್ವಾಗತಿಸಿದರು,ದೇವಿದಾಸ ಮೇತ್ರೆ ನಿರೂಪಿಸಿದರು,ಚಂದ್ರಕಾಂತ ತಳವಾಡೆ ವಂದಿಸಿದರು.



ಭಾಲ್ಕಿ:ಪುಣೆ ವಿಶ್ವವಿದ್ಯಾಲಯದಿಂದ ಕೊಡಲ್ಪಟ್ಟ ಗೌರವ ಡಾಕ್ಟರೇಟ್ ಪುರಸ್ಕೃತರಾದ ಸಮಾಜ ಸೇವಕ ಡಾ.ಜನಾರ್ಧನರಾವ ಬಿರಾದಾರ ಅವರಿಗೆ ವಿಧಾನ ಪರಿಷತ್ ಸದಸ್ಯ ಮಾರುತಿರಾವ ಮುಳೆ ಅವರು ಸನ್ಮಾನಿಸಿ ಗೌರವಿಸಿದರು.ಈ ಸಂದರ್ಭದಲ್ಲಿ ಕಿಶನರಾವ ಪಾಟೀಲ್ ಇಂಚೂರಕರ್,ರಾವಸಾಬ್ ಬಿರಾದಾರ,ರಾಜು ಭೋಸ್ಲೆ,ರಾಜು ಮಾನಕರಿ,ಗೋವಿಂದ ಹುಪಳಾ,ತುಕಾರಾಮ ಮೋರೆ,ಶಾಹುರಾಜ ಪವಾರ,ಸಂತೋಷ ಭೋಸ್ಲೆ ಸೇರಿದಂತೆ ಇತರರಿದ್ದರು.

# ಸಾಂಪ್ರದಾಯಿಕ ಬಂಜಾರಾ ವೇಷಭೂಷಣದಲ್ಲಿ ಮನ್ ಕಿ ಬಾತ್ ವೀಕ್ಷಿಸಿದ ಶಾಸಕ ಪ್ರಭು ಚವ್ಹಾಣ

• ಮಲ್ಲಮ್ಮ ನುಡಿ ವಾರ್ತೆ ಕಮಲನಗರ

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಮಹತ್ವದ 'ಮನ್ ಕಿ ಬಾತ್' ಕಾರ್ಯಕ್ರಮದ ನೇರ ಪ್ರಸಾರವನ್ನು ಭಾನುವಾರ ದೇಶದ 17 ಆಯ್ದ ಸ್ಥಳಗಳಲ್ಲಿ ಆಯೋಜಿಸಿದ್ದು, ಕರ್ನಾಟಕದಿಂದ ಬೀದರ ಜಿಲ್ಲೆಯ ಕಮಲನಗರದಲ್ಲಿ ನಡೆಯಿತು.

ಪಟ್ಟಣದ ಹೊರ ಒಲಯದಲ್ಲಿ ಇರುವ ಎಂ.ಎ. ಬಿರಾದಾರ ಫಂಕ್ಷನ್ ಹಾಲ್‌ನಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ. ಚವ್ಹಾಣ ಅವರು ತಲೆಯ ಮೇಲೆ ವಿಶೇಷ ಪೇಟಾ, ಧೋತಿ ಹಾಗೂ ಬಂಜಾರಾ ಕುಸುರಿ ಕಲೆಯಿಂದ ತಯಾರಿಸಲಾದ ವಿಶೇಷ ಶಾಲು ಧರಿಸಿ, ತಮ್ಮ ಧರ್ಮಪತ್ನಿಯವರೊಂದಿಗೆ ಸಾಂಪ್ರದಾಯಿಕ ಬಂಜಾರಾ ಉಡುಗೆಯಲ್ಲಿ ಭಾಗವಹಿಸಿ ಪ್ರಧಾನಮಂತ್ರಿಯವರ ಮನ್ ಕಿ ಬಾತ್ ಕಾರ್ಯಕ್ರಮವನ್ನು ವೀಕ್ಷಿಸಿದರು.



ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಪ್ರಭು ಚವ್ಹಾಣ ಅವರು, ಈ ಬಾರಿ ಮನ್ ಕಿ ಬಾತ್ ಕಾರ್ಯಕ್ರಮ ಕಮಲನಗರದಲ್ಲಿ ನಡೆದಿರುವುದು ಬಹಳಷ್ಟು ಸಂತೋಷವಾಗಿದೆ ಎಂದರು.

ಮನ್ ಕಿ ಬಾತ್ ಕಾರ್ಯಕ್ರಮವು ದೇಶದ ಜನರೊಂದಿಗೆ ಪ್ರಧಾನಮಂತ್ರಿಯವರು ನೇರವಾಗಿ ಸಂವಾದ ನಡೆಸುವ ವಿಶಿಷ್ಟ ವೇದಿಕೆಯಾಗಿದೆ. ದೇಶದ ಏಳಿಗೆ, ರೈತರ ಅಭಿವೃದ್ಧಿ, ಪ್ರಕೃತಿ ಸಂರಕ್ಷಣೆ, ಮಹಿಳಾ ಸಬಲೀಕರಣ,ಯುವಜನತೆಗೆ ಮಾರ್ಗದರ್ಶನ,ನವೋದ್ಯಮ, ಸ್ವಚ್ಛತೆ, ಆರೋಗ್ಯ, ಸ್ಥಳೀಯ ಉತ್ಪನ್ನಗಳಿಗೆ ಉತ್ತೇಜನ, ಸಾಮಾಜಿಕ ಜಾಗೃತಿ ಸೇರಿದಂತೆ ಪ್ರತಿ ತಿಂಗಳು ವಿಭಿನ್ನ ವಿಷಯಗಳ ಕುರಿತು ದೇಶವಾಸಿಗಳೊಂದಿಗೆ ತಮ್ಮ ವಿಚಾರಗಳನ್ನು ಹಂಚಿಕೊಳ್ಳುವ ಮೂಲಕ ಜನರಲ್ಲಿ ಸಕಾರಾತ್ಮಕ ಚಿಂತನೆ ಮತ್ತು ರಾಷ್ಟ್ರಭಕ್ತಿಯ ಮನೋಭಾವ ಬೆಳೆಸುತ್ತಿರುವ ಏಕೈಕ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರಾಗಿದ್ದಾರೆ ಎಂದು ಹೇಳಿದರು.

ಮನ್ ಕಿ ಬಾತ್ ಕಾರ್ಯಕ್ರಮದಲ್ಲಿ ಪ್ರಧಾನಮಂತ್ರಿಯವರು 'ಏಕ್ ಪೇಡ್ ಮಾಂ ಕೆ ನಾಮ್' ಅಭಿಯಾನದ ಮೂಲಕ ಪರಿಸರ ಸಂರಕ್ಷಣೆಯ ಮಹತ್ವವನ್ನು ಮತ್ತೊಮ್ಮೆ ಒತ್ತಿ ಹೇಳಿದರು. ಅಂತರರಾಷ್ಟ್ರೀಯ ಯೋಗ ದಿನಾಚರಣೆ-ಯ ಯಶಸ್ಸು, ದೇಶದ ವಿವಿಧ ಭಾಗಗಳಲ್ಲಿ ಜನರು ನಡೆಸುತ್ತಿರುವ ಜಲ ಸಂರಕ್ಷಣೆ, ಸ್ವಚ್ಛತೆ, ಜನಸಾಮಾನ್ಯರ ಹೊಸ ಆವಿಷ್ಕಾರಗಳು, ಮಹಿಳಾ ಸಬಲೀಕರಣ, ಯುವಕರ ಸಾಧನೆಗಳು ಹಾಗೂ 'ವೋಕಲ್ ಫಾರ್ ಲೋಕಲ್' ಮೂಲಕ ಸ್ವದೇಶಿ ಉತ್ಪನ್ನಗಳಿಗೆ ಬೆಂಬಲ ನೀಡುವ ಕುರಿತು ದೇಶದ ಜನತೆಗೆ ಕರೆ ನೀಡಿದರು. ರಾಷ್ಟ್ರದ ಅಭಿವೃದ್ಧಿಯಲ್ಲಿ ಪ್ರತಿಯೊಬ್ಬ ನಾಗರಿಕರ ಪಾಲ್ಗೊಳ್ಳುವಿಕೆ ಅತ್ಯಂತ ಮಹತ್ವದ್ದಾಗಿದೆ ಎಂದು ಅವರು ಸಂದೇಶ ನೀಡಿದರು. ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ಸೋಮನಾಥ ಪಾಟೀಲ, ಬಸವಕಲ್ಯಾಣ ಶಾಸಕ ಶರಣು ಸಲಗರ, ಮಾಜಿ ಶಾಸಕರಾದ ಪ್ರಕಾಶ ಖಂಡ್ರೆ, ಈಶ್ವರಸಿಂಗ್ ಠಾಕೂರ, ಮಂಡಲ ಅಧ್ಯಕ್ಷ ರಾಮಶೆಟ್ಟಿ ಪನ್ನಾಳೆ, ಜಿಲ್ಲಾ ಉಪಾಧ್ಯಕ್ಷ ಅರಹಂತ ಸಾವಳೆ, ಪ್ರಧಾನ ಕಾರ್ಯದರ್ಶಿಗಳಾದ ಕಿರಣ ಪಾಟೀಲ, ಪೀರಪ್ಪ ಔರಾದೆ, ಮುಖಂಡರಾದ ರಾಜಶೇಖರ ನಾಗಮೂರ್ತಿ, ಬಾಬು ವಾಲಿ, ವಸಂತ ಬಿರಾದಾರ, ಬಸವರಾಜ ಪಾಟೀಲ, ಸತೀಷ ಪಾಟೀಲ, ಶಿವಾಜಿರಾವ ಪಾಟಿಲ ಮುಂಗನಾಳ, ಸುರೇಶ ಭೋಸ್ಲೆ, ಶಿವಾನಂದ ವಡ್ಡೆ, ಖಂಡೋಬಾ ಕಂಗಟೆ, ಪ್ರವೀಣ ಕಾರಬಾರಿ, ಕೇರಬಾ ಪವಾರ, ದಯಾನಂದ ಘೂಳೆ, ಬಂಟಿ ರಾಂಪೂರೆ, ಉದಯ ಸೋಲಾಪೂರೆ, ರವೀಂದ್ರ ರೆಡ್ಡಿ, ಸಂಜು ಮುರ್ಕೆ, ಗಿರೀಶ ವಡೆಯಾರ್, ಶಿವು ಜುಲ್ಫೆ, ವೀರೂ ದಿಗ್ವಾಲ, ಸುಜಿತ ರಾಠೋಡ, ಪ್ರದೀಪ ಪವಾರ, ಪ್ರಭುರಾವ ಜೀರ್ಗೆ ಸೇರಿದಂತೆ ಪಕ್ಷದ ಮುಖಂಡರು, ಪದಾಧಿಕಾರಿಗಳು, ಕಾರ್ಯಕರ್ತರು ಹಾಗೂ ಸಾರ್ವಜನಿಕರು ಕಾರ್ಯಕ್ರಮವನ್ನು ವೀಕ್ಷಿಸಿದರು.

# ಭಾರತೀಯ ಪೌರತ್ವಹೊಂದಿದ ಪ್ರತಿಯೊಬ್ಬರೂ ಮತದಾರರ ಪಟ್ಟಿಯಲ್ಲಿರಲಿ : ವಡ್ಡನಕೆರೆ

• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ಭಾರತೀಯ ಪೌರತ್ವಹೊಂದಿದ ಪ್ರತಿಯೊಬ್ಬ ಪ್ರಜೆಯೂ ಮತದಾರರ ಪಟ್ಟಿಯಲ್ಲಿರುವಂತೆ ನೋಡಿಕೊಳ್ಳುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದು ತಹಸೀಲ್ದಾರ ಮಲ್ಲಿಕಾರ್ಜುನ ವಡ್ಡನಕೇರೆ ಹೇಳಿದರು.ಪಟ್ಟಣದ ಕಾರಂಜಾ ರೈತ ಸಮುದಾಯಭವನದಲ್ಲಿ ಸೋಮವಾರ ನಡೆದ ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ತರಬೇತಿ ಕಾರ್ಯಾಗಾರ ಉದ್ದೇಶಿಸಿ ಅವರು ಮಾತನಾಡಿದರು. ಎಲ್ಲಾ ಬಿಎಲ್‌ಓ ರವರು ಮನೆಮನೆಗೆ ಭೇಟಿ ನೀಡಿ, ಸರಿಯಾದ ಮಾಹಿತಿ ಭರ್ತಿ ಮಾಡಿ ಯಾವ ಮತದಾರರು ಬಿಟ್ಟುಹೋಗದಂತೆ ನೋಡಿಕೊಳ್ಳಬೇಕು. 2002ರ ಮತದಾರರ ಪಟ್ಟಿಯಲ್ಲಿ ಮಾಹಿತಿ ಸಿಗದಿದ್ದರೂ ಸೂಕ್ತ ದಾಖಲೆಗಳನ್ನು ಪರಿಶೀಲಿಸಿ ನಿಜವಾದ ಮತದಾರರ ಹೆಸರು ಮತದಾರರ ಪಟ್ಟಿಯಲ್ಲಿ ಸೇರುವಂತೆ ಮಾಡಬೇಕು ಎಂದು ಸಲಹೆ ನೀಡಿದರು.

ನಂತರ ನೋಡಲ್ ಅಧಿಕಾರಿಗಳು ಮತದಾರರ ಪಟ್ಟಿಯಲ್ಲಿ ಹೆಸರು ನೊಂದಣಿ ಮಾಡಿಕೊಳ್ಳುವ ಭಾರತ ಚುನಾವಣಾ ಆಯೋಗದ ಗಣತಿ ನಮೂನೆಯನ್ನು ಹೇಗೆ ಭರ್ತಿ ಮಾಡಬೇಕು ಎನ್ನುವ ಮಾಹಿತಿಯನ್ನು, ಬಿಎಲ್‌ಒಗಳು ಮತ್ತು ಕಾಂಗ್ರೆಸ್, ಬಿಜೆಪಿ, ಜೆಡಿಎಸ್ ಸೇರಿದಂತೆ ವಿವಿಧ ಪಕ್ಷಗಳ ಮತಗಟ್ಟೆ ಏಜೆಂಟರುಗಳಿಗೆ ತಿಳಿಸಿಕೊಟ್ಟರು.

ಹಿಂದಿನ ವಿಶೇಷ ಸಮಗ್ರ ಪರಿಷ್ಕರಣೆಯ ಮತದಾರರ ಪಟ್ಟಿಯಲ್ಲಿನ ಮತದಾರರ ವಿವರ, ಮತದಾರರ ಸಂಬಂಧಿಗಳ ವಿವರ, ವಿಧಾನಸಭಾ ಕ್ಷೇತ್ರದ, ಭಾಗದ, ಹಾಗು ಮತದಾರರ ಕ್ರಮ ಸಂಖೆಗಳನ್ನು ತಿಳಿಸುವ ಮೂಲಕ ನಿಜವಾದ ಮತದಾರರನ್ನು ಗುರುತಿಸುವ ಕಾರ್ಯವಾಗಬೇಕು ಎಂದು ಮಾಹಿತಿ ನೀಡಿದರು. ಎರಡೆರಡು ಕ್ಷೇತ್ರಗಳಲ್ಲಿ ಹೆಸರು ನೊಂದಣಿಸಿಕೊಂಡವರು ಒಂದೇ ಕ್ಷೇತ್ರದಲ್ಲಿ ಮತದಾನದ ಹಕ್ಕು ನೊಂದಾಯಿಸಿಕೊಳ್ಳಬೇಕು. ಅರ್ಜಿ ನಮೂನೆಯಲ್ಲಿ ಯಾವುದೇ ತಪ್ಪು ಮಾಹಿತಿ ನೀಡಬಾರದು, ತಪ್ಪು ಮಾಹಿತಿ ಕಂಡು ಬಂದಲ್ಲಿ ಪ್ರಜಾ ಪ್ರತಿನಿಧಿ ಕಾಯ್ದೆ 1950ರ ಕಲಂ 31 ರ ಅಡಿಯಲ್ಲಿ ಶಿಕ್ಷೆ ವಿಧಿಸಲಾಗುವುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ತಹಸೀಲ ಕಚೇರಿಯ ಗೋಪಾಲ ಹಿಪ್ಪರಗಿ, ಎಸ್‌ಐಆರ್ ನೋಡಲ್ ಅಧಿಕಾರಿಗಳಾದ ಬಿಇಓ ಸಿ.ಜಿ.ಹಳ್ಳದ್, ಕೃಷಿ ಸಹಾಯಕ ನಿರ್ದೇಶಕ ಸತೀಶಕುಮಾರ ಮುದ್ದಾ, ಕಾರಂಜಾ ಎಇಇ ಜ್ಞಾನೇಶ್ವರ ಮಂಡೆ, ಸಮಾಜ ಕಲ್ಯಾಣಾಧಿಕಾರಿ ಶಿವಾನಂದ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದ ಪತ್ರಾಂಕಿತ ವ್ಯವಸ್ಥಾಪಕ ಶಿವಕುಮಾರ ಫುಲಾರಿ, ಇಸಿಓ ಮಲ್ಲಿಕಾರ್ಜುನ ಕನ್ನಾಳೆ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ನಿರ್ದೇಶಕ ಸೂರ್ಯಕಾಂತ ಸುಂಟೆ ಸೇರಿದಂತೆ ವಿವಿಧ ಪಕ್ಷಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಪಲ್ಸ್ ಪೊಲಿಯೊ ಲಸಿಕೆ ಪಡೆದ ಮಗು: ಸುಹಾಸಿನಿ-ಮಹೇಶ್ ದಂಪತಿ ಸಂಭ್ರಮ

• ಮಲ್ಲಮ್ಮ ನುಡಿ ವಾರ್ತೆ ಕಮಲನಗರ

ತಾಲೂಕಿನ ಡಿಗ್ಗಿ ಅಂಗನವಾಡಿ ಕೇಂದ್ರದಲ್ಲಿ ಭಾನುವಾರ ಹಮ್ಮಿಕೊಳ್ಳಲಾಗಿದ್ದ ರಾಷ್ಟ್ರೀಯ ಪಲ್ಸ್ ಪೋಲಿಯೋ ಅಭಿಯಾನದ ಅಂಗವಾಗಿ, ಸುಹಾಸಿನಿ ಮತ್ತು ಮಹೇಶ್ ದಂಪತಿಗಳು ತಮ್ಮ ಪುಟ್ಟ ಮಗ 'ಶ್ಲೋಕ' ನಿಗೆ ಮೊದಲಬಾರಿಗೆ ಪೋಲಿಯೋ ಲಸಿಕೆ ಹಾಕಿಸುವ ಮೂಲಕ ಸಂಭ್ರಮಿಸಿದರು.ದೇಶವನ್ನು ಪೋಲಿಯೋ ಮುಕ್ತವಾಗಿರಿಸಲು ಹಾಗೂ ಮಕ್ಕಳ ಆರೋಗ್ಯಕರ ಭವಿಷ್ಯಕ್ಕಾಗಿ ಪೋಷಕರು ಕಡ್ಡಾಯವಾಗಿ ತಮ್ಮ 5 ವರ್ಷದೊಳಗಿನ ಮಕ್ಕಳಿಗೆ ಲಸಿಕೆ ಹಾಕಿಸಬೇಕು ಎಂದು ಈ ಸಂದರ್ಭದಲ್ಲಿ ಜಾಗೃತಿ ಮೂಡಿಸಲಾಯಿತು.ಈ ಯಶಸ್ವಿ ಲಸಿಕಾ ಕಾರ್ಯಕ್ರಮದ ಸಂದರ್ಭದಲ್ಲಿ ಅಂಗನವಾಡಿ ಕೇಂದ್ರದ ಮುಖ್ಯ ಶಿಕ್ಷಕಿ ಸವಿತಾ, ಆಶಾ ಕಾರ್ಯಕರ್ತೆ ದೇವಿಕಾ ಪಂಚಾಳ ಹಾಗೂ ಅಂಗನವಾಡಿ ಸಹಾಯಕ ಸಿಬ್ಬಂದಿ ವಿಮಲಾಬಾಯಿ ಉಪಸ್ಥಿತರಿದ್ದು, ಮಗುವಿಗೆ ಲಸಿಕೆ ಹಾಕಿ ಪೋಷಕರಿಗೆ ಶುಭ ಹಾರೈಸಿದರು. ಗ್ರಾಮೀಣ ಭಾಗದಲ್ಲಿ ಪೋಷಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ತಮ್ಮ ಮಕ್ಕಳಿಗೆ ಪೋಲಿಯೋ ಹನಿಗಳನ್ನು ಹಾಕಿಸುವ ಮೂಲಕ ಅಭಿಯಾನವನ್ನು ಯಶಸ್ವಿಗೊಳಿಸಿದರು.



# ನಿಸರ್ಗ ಸಂರಕ್ಷಣೆ ನಮ್ಮೆಲ್ಲರ ಹೊಣೆ: ಕಾವಡಿ



• ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ

ವಿಶ್ವದ ಅನೇಕ ದೇಶಗಳು ಹವಾಮಾನ ವೈಪರೀತ್ಯದಿಂದಾಗಿ ಸಂಕಷ್ಟ ಅನುಭವಿಸುತ್ತಿವೆ. ಪರಿಸರ ಸಂರಕ್ಷಣೆ ಮಾಡುವುದು ನಮ್ಮೆಲ್ಲರ ಹೊಣೆಯಾಗಿದೆ ಹಾಗೂ ಪರಿಸರವನ್ನು ಸಂರಕ್ಷಣೆ ಮಾಡುವಲ್ಲಿ ಪ್ರತಿಯೊಬ್ಬರು ಶ್ರಮ ವಹಿಸಬೇಕೆಂದು ಪರಿಸರವಾದಿ ಶೈಲೇಂದ್ರ ಕಾವಡಿ ಹೇಳಿದರು.

ತಾಲ್ಲೂಕಿನ ಮನ್ನಾಏಖ್ಖೇಳ್ಳಿ ಗ್ರಾಮದ ನಿವಾಸಿ ಪೂರ್ಣಿಮಾ ಸುರೇಶ ಆಚಾರ್ಯ ಉಡುಪಿ ದಂಪತಿಗಳ ಮಗಳಾದ ಹರ್ಷಿನಿ ಜೊತೆ ಬಿಹಾರದ ಶಿವಚಂದ್ರ ಪ್ರಸಾದ ಅವರ ಮಗ ಕುಮಾರ ರೊನಕ ಅವರ ಮದುವೆ ಔತಣ ಕೂಟದಲ್ಲಿ ಪರಿಸರ ಜಾಗೃತಿ ಮೂಡಿಸಿ ದಂಪತಿಗಳಿಗೆ ಸಸಿಗಳನ್ನು ನೀಡಿ ಮಾತನಾಡಿದರು. ಹಿಂದೆ ನಮ್ಮ ಪೂರ್ವಜನರು ಪರಿಸರಕ್ಕೆ ವಿಶೇಷ ಕಾಳಜಿಯನ್ನು ಹೊಂದಿದ್ದರು. ಅವರು ಪರಿಸರವನ್ನು ದೇವರೆಂದು ಪೂಜಿಸುತ್ತಿದ್ದರು. ಕಾರಣ ಪ್ರಕೃತಿ ನಮಗೆ ಶುದ್ಧವಾದ ಗಾಳಿ ನೀರು ಅನ್ನ ಎಲ್ಲವನ್ನೂ ನೀಡುತ್ತದೆ. ಇಂದು ನಾವು ಮರಗಿಡಗಳನ್ನು ಕಡಿದು ಅರಣ್ಯ ಸಂಪತ್ತು ಕಡಿಮೆಯಾಗುತ್ತಿರುವ ಕಾರಣದಿಂದ ಸಮಯಕ್ಕೆ ಸರಿಯಾಗಿ ಮಳೆಯಾಗುತ್ತಿಲ್ಲ. ಇದರಿಂದ ನಾವು ಎಚ್ಚೆತ್ತುಕೊಳ್ಳಬೇಕಿದೆ.

ಮುಂದಿನ ದಿನಗಳಲ್ಲಿ ಪರಿಸರ ಸಂರಕ್ಷಣೆ ಮಾಡಿದರೆ ಮಾತ್ರ ನಮಗೆ ಉಳಿಗಾಲವಿದೆ ಇಲ್ಲವಾದರೆ ಸಂಕಷ್ಟ ತಪ್ಪಿದ್ದಲ್ಲ.


ಎಲ್ಲರೂ ತಮ್ಮ ಮದುವೆ, ಮುಂಜಿ, ಜನ್ಮದಿನ ಇತ್ಯಾದಿ ವಿಶೇಷ ದಿನಗಳಲ್ಲಿ ಸಸಿಗಳನ್ನು ಬೆಳೆಸುವ ಮೂಲಕ ಪರಿಸರ ಸಂರಕ್ಷಣೆಗೆ ಮುಂದಾಗಬೇಕು ಎಂದರು.

ಈ ಸಂದರ್ಭದಲ್ಲಿ ಕಾರ್ಯನಿರತ ಪತ್ರಕರ್ತರ ಸಂಘದ ತಾಲೂಕಾಧ್ಯಕ್ಷ ಕೃಷ್ಣಾಚಾರ್ಯ ಪಂಚಾಳ, ಪತ್ರಕರ್ತರಾದ ರಾಜಕುಮಾರ ಆರ್. ಹಡಪದ, ಅಬ್ದುಲ ಖದೀರ ಲಶ್ಕೇರಿ, ಮಂಜುನಾಥ್ ಚಿಂತಕೋಟಿ, ಸುರೇಶ ಆಚಾರ್ಯ ಉಡುಪಿ, ಸಂತೋಷರೆಡ್ಡಿ ಸೋನಿ ಸೇರಿದಂತೆ ಆಚಾರ್ಯ ಉಡುಪಿ ಪರಿವಾರದವರು ಉಪಸ್ಥಿತರಿದ್ದರು.

# ಪೊಲಿಯೊ ಲಸಿಕೆ ಹಾಕಿಸುವುದರಿಂದ ಪೊಲಿಯೊ ಮುಕ್ತ ಸಮಾಜ ನಿರ್ಮಿಸಲು ಸಾಧ್ಯ

• ಮಲ್ಲಮ್ಮ ನುಡಿ ವಾರ್ತೆ ಕುಕನೂರು

ಸ್ಥಳೀಯ ಪಟ್ಟಣದ ಸಂಜಯ ನಗರದಲ್ಲಿರುವ ಶ್ರೀ ಚಳ್ಳೇಶ್ವರ ದೇವಸ್ಥಾನದ ಮುಂಭಾಗದಲ್ಲಿ ಮಕ್ಕಳಿಗೆ ಪೋಲಿಯೋ ಲಸಿಕೆ ಹಾಕುವ ಮಹತ್ವದ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಈ ಸಂದರ್ಭದಲ್ಲಿ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಲಸಿಕಾ ಅಭಿಯಾನಕ್ಕೆ ಚಾಲನೆ ನೀಡಲಾಯಿತು.



ಕಾರ್ಯಕ್ರಮವನ್ನು ಉದ್ದೇಶಿಸಿ ಕುಕನೂರು ಹಿತರಕ್ಷಣಾ ಸಮಿತಿಯ ಸಹಸಂಚಾಲಕರಾದ ಮಂಜುನಾಥ್ ನಾಡಗೌಡರ್ ಅವರು ಮಾತನಾಡಿದರು. ಶ್ರೀ ನರೇಂದ್ರ ಮೋದಿ ಅವರ ನೇತೃತ್ವದ ಭಾರತ ಸರ್ಕಾರದ ರಾಷ್ಟ್ರೀಯ ಪೋಲಿಯೋ ನಿರ್ಮೂಲನಾ ಕಾರ್ಯಕ್ರಮದ ಅಡಿಯಲ್ಲಿ ಈ ಲಸಿಕಾ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ. ಮಕ್ಕಳಿಗೆ ಸಕಾಲದಲ್ಲಿ ಪೋಲಿಯೋ ಲಸಿಕೆ ಹಾಕಿಸುವುದರಿಂದ ಪೋಲಿಯೋ ಮುಕ್ತ ಸಮಾಜವನ್ನು ನಿರ್ಮಿಸಲು ಸಾಧ್ಯ. ಪ್ರತಿಯೊಬ್ಬ ಪೋಷಕರು ತಮ್ಮ 5 ವರ್ಷದೊಳಗಿನ ಮಕ್ಕಳಿಗೆ ತಪ್ಪದೇ ಲಸಿಕೆ ಕೊಡಿಸಬೇಕು ಎಂದು ಅವರು ಕರೆ ನೀಡಿದರು.ಈ ಸಂದರ್ಭದಲ್ಲಿ ಪ್ರಮುಖ ಮುಖಂಡರುಗಳಾದ ವೀರೇಶ್ ಸಬರದ, ರಾಮನಗೌಡ ಅರಿಷಿಣಬಿದಿ, ಮಂತೇಶ್ ಹುಗಾರ್, ಗಂಗಾಧರ್ ನಾರಾಯಣಿ, ಹಾಗೂ ಕಾಲಕೇಶ್ ಹತ್ತಿಕಟಗಿ ಉಪಸ್ಥಿತರಿದ್ದರು. ಇವರೊಂದಿಗೆ ಸ್ಥಳೀಯ ಅಂಗನವಾಡಿ ಕಾರ್ಯಕರ್ತೆಯರು ಮತ್ತು ಆಶಾ (ASHA) ಕಾರ್ಯಕರ್ತೆಯರು ಸಕ್ರಿಯವಾಗಿ ಪಾಲ್ಗೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

# ಗುಣಮಟ್ಟದ ರಸ್ತೆ ಕಾಮಗಾರಿ ಕೈಗೊಳ್ಳಲು ಹಾಗೂ ಶುದ್ಧ ಕುಡಿಯುವ ನೀರನ್ನು ಪೂರೈಸಿ: ರಾಹುಲ್ ತುಕಾರಾಮ ಪಾಂಡ್ವೆ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಯಾದಗಿರಿ ನಗರದ ವಿವಿಧ ಸ್ಥಳಗಳಿಗೆ ಇಂದು ಭೇಟಿ ನೀಡಿ ಕಾಮಗಾರಿಗಳನ್ನು ಪರಿವೀಕ್ಷಣೆ ನಡೆಸಿದ ಜಿಲ್ಲಾಧಿಕಾರಿ ರಾಹುಲ್ ತುಕಾರಾಮ ಪಾಂಡ್ವೆ ಅವರು, ಯಾದಗಿರಿ–ಸೈದಾಪುರ ಜಿಲ್ಲಾ ಮುಖ್ಯ ರಸ್ತೆ ಕಾಮಗಾರಿಗಳನ್ನು ಗುಣಮಟ್ಟದಲ್ಲಿ ಕೈಗೊಳ್ಳುವ ಜೊತೆಗೆ ಸಾರ್ವಜನಿಕರಿಗೆ ರೋಗ ರುಜಿನಗಳು ಹರಡದಂತೆ ಪರೀಕ್ಷಿಸಿದ, ಶುದ್ಧ ಕುಡಿಯುವ ನೀರನ್ನು ಪೂರೈಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಲೋಕೋಪಯೋಗಿ ಇಲಾಖೆಯ ವತಿಯಿಂದ ನಿರ್ಮಿಸುತ್ತಿರುವ 2025–26ನೇ ಸಾಲಿನ ಮಾನ್ಯ ಮುಖ್ಯಮಂತ್ರಿಗಳ ಮೂಲ ಸೌಕರ್ಯ ಅಭಿವೃದ್ಧಿ ಯೋಜನೆಯಡಿಯಲ್ಲಿ, ಯಾದಗಿರಿ ತಾಲೂಕಿನ ಯಾದಗಿರಿ–ಸೈದಾಪೂರ ಜಿಲ್ಲಾ ಮುಖ್ಯ ರಸ್ತೆ ಕಿಲೋ ಮೀಟರ್ 0.00 ರಿಂದ 7.2 ಕಿಲೋ ಮೀಟರ್‌ವರೆಗಿನ ರಸ್ತೆ ಮರು ಡಾಂಬರೀಕರಣ (ಆಯ್ದ ಭಾಗಗಳಲ್ಲಿ) ಅಂದಾಜು ಮೊತ್ತ 700 ಲಕ್ಷ ರೂ.,ಗಳ ಕಾಮಗಾರಿಗಳನ್ನು ಪರಿವೀಕ್ಷಣೆ ಮಾಡಿ ಸಾರ್ವಜನಿಕರಿಗೆ ಹಾಗೂ ವಾಹನ ಸಂಚಾರಕ್ಕೆ ಅಡಚಣೆಯಾಗದಂತೆ ಕಾಮಗಾರಿಯನ್ನು ನಿರ್ವಹಿಸಬೇಕು.ಈ ಕಾಮಗಾರಿಯು ನಿಗಧಿತ ಅವಧಿಯಲ್ಲಿ ನಿರ್ವಹಿಸಿ ಪೂರ್ಣಗೊಳಿಸಬೇಕು ಮತ್ತು ಉತ್ತಮ ಗುಣಮಟ್ಟದಾಗಿರಬೇಕೆಂದು ಕಾರ್ಯಪಾಲಕ ಅಭಿಯಂತರರಿಗೆ ಸಲಹೆ, ಸೂಚನೆಗಳನ್ನು ನೀಡಿದರು.



ಸದರಿ ಸ್ಥಳದಲ್ಲಿ ಎಸ್.ಜಿ ಪಾಟೀಲ್ ಕಾರ್ಯಪಾಲಕ ಅಭಿಯಂತರರು,ಪರಶುರಾಮ ಸಹಾಯಕ ಕಾರ್ಯಪಾಲಕ ಅಭಿಯಂತರರು, ಹಣಮಂತ ಕಿರಿಯ ಅಭಿಯಂತರರು, ಲೋಕೋಪಯೋಗಿ ಇಲಾಖೆ ಯಾದಗಿರಿ ರವರು ಹಾಗೂ ಉಮೇಶ ಚವ್ಹಾಣ ಪೌರಾಯುಕ್ತರು, ನಗರಸಭೆ ಯಾದಗಿರಿ ಹಾಗೂ ವಿಶ್ವನಾಥ ಕಾರ್ಯಪಾಲಕ ಅಭಿಯಂತರರು ಜಿಲ್ಲಾ ನಗರಾಭಿವೃದ್ಧಿ ಕೋಶ ಯಾದಗಿರಿ ಇವರು ಉಪಸ್ಥಿತರಿದ್ದರು.

ಅದರಂತೆ ಯಾದಗಿರಿ ನಗರದ ಶುದ್ಧ ಕುಡಿಯುವ ನೀರಿನ ಘಟಕಕ್ಕೆ ಭೇಟಿ ನೀಡಿ, ನೀರು ಶುದ್ಧಿಕರಿಸುವ ಘಟಕವನ್ನು ಪರಿವೀಕ್ಷಣೆ ಮಾಡಿ, ನೀರನ್ನು ಪರೀಕ್ಷಿಸಿ ವರದಿಯ ಆಧಾರದ ಮೇಲೆ ಯಾದಗಿರಿ ನಗರದ ಸಾರ್ವಜನಿಕರಿಗೆ ಡೆಂಗ್ಯೂ, ಮಲೇರಿಯಾ ಮತ್ತು ಗ್ಯಾಸ್ಟ್ರೋಎಂಟರೈಟಿಸ್ (ಜಿ.ಇ) ಪ್ರಕರಣಗಳನ್ನು ತಡೆಗಟ್ಟಲು , ನೀರನ್ನು ಶುದ್ಧಿಕರಿಸಿ ಸ್ವಚ್ಛವಾದ ಕುಡಿಯುವ ನೀರನ್ನು ಸರಬರಾಜು ಮಾಡಬೇಕು. ಸಾರ್ವಜನಿಕರಿಗೆ ರೋಗ ರುಜಿನ ಬರದಂತೆ ಕಟ್ಟುನಿಟ್ಟಾಗಿ ಪಾಲನೆ ಮಾಡಬೇಕೆಂದು ಯಾದಗಿರಿ ನಗರಸಭೆ ಪೌರಾಯುಕ್ತರಿಗೆ ಸೂಚಿಸಿದರು.

ಕರ್ನಾಟಕ ನಗರ ನೀರು ಸರಬರಾಜು ಮಂಡಳಿ ವತಿಯಿಂದ ನಿರ್ಮಾಣವಾಗುತ್ತಿರುವ 7 ಎಂ.ಎಲ್.ಡಿ ಶುದ್ಧ ಕುಡಿಯುವ ನೀರಿನ ಘಟಕದ ಕಾಮಗಾರಿಯನ್ನು ಪರಿವೀಕ್ಷಣೆ ಮಾಡಿ, ಈಗಾಗಲೇ ಸುಮಾರು 8 ತಿಂಗಳಾದರು ಕಾಮಗಾರಿ ಪ್ರಾರಂಭಗೊಂಡಿರುವುದಿಲ್ಲ.

ಮುಂದಿನ ಇನ್ನೂ 13 ತಿಂಗಳ ಕಾಲಾವಧಿಯಲ್ಲಿ ಕಾಮಗಾರಿಯನ್ನು ಪ್ರಾರಂಭಿಸಿ ಶೀಘ್ರವಾಗಿ ಮುಕ್ತಾಯಗೊಳಿಸಲು ಯಾದಗಿರಿ, ಕರ್ನಾಟಕ ನಗರ ನೀರು ಸರಬರಾಜು ಮಂಡಳಿ ಕಾರ್ಯಪಾಲಕ ಅಭಿಯಂತರರಿಗೆ ಸೂಚಿಸಿದರು.

ಅದರಂತೆ ಕಮಲಾ ನೇಹರು ಪಾರ್ಕನಲ್ಲಿ ಓ.ಹೆಚ್. ಟ್ಯಾಂಕನ್ನು ಶೀಘ್ರವಾಗಿ ಚಾಲನೆ ಮಾಡಿ ಪೂರ್ಣಗೊಳಿಸಲು ಸೂಚಿಸಿದರು. ಈ ಸಂದರ್ಭದಲ್ಲಿ ಅಶೋಕ ರಾಠೋಡ್ ಸಹಾಯಕ ಕಾರ್ಯಪಾಲಕ ಅಭಿಯಂತರರು, ರಾಜಕುಮಾರ ಸಹಾಯಕ ಅಭಿಯಂತರರು, ಶಂಕರಗೌಡ ಸಹಾಯಕ ಅಭಿಯಂತರರು ಕೆ.ಯು.ಡಬ್ಲ್ಯೂ.ಎಸ್ ಯಾದಗಿರಿ, ಉಮೇಶ ಚವ್ಹಾಣ ಪೌರಾಯುಕ್ತರು, ನಗರಸಭೆ , ವಿಶ್ವನಾಥ ಕಾರ್ಯಪಾಲಕ ಅಭಿಯಂತರರು ಜಿಲ್ಲಾ ನಗರಾಭಿವೃದ್ಧಿ ಕೋಶ ಯಾದಗಿರಿ, ಶ್ರೀಮತಿ ಲೋಕೇಶ್ವರಿ ಕಿರಿಯ ಅಭಿಯಂತರರು, ಮತ್ತು ಶಂಭುಲಿಂಗೇಶ್ವರ ಕಿರಿಯ ಅಭಿಯಂತರರು ನಗರಸಭೆ ಯಾದಗಿರಿ ರವರು ಸ್ಥಳದಲ್ಲಿ ಉಪಸ್ಥಿತರಿದ್ದರು.

# ಯಾದಗಿರಿ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿಗೆ ನೂತನ ಪದಾಧಿಕಾರಿಗಳ ನೇಮಕ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಯಾದಗಿರಿ ಜಿಲ್ಲಾ ಕಾಂಗ್ರೆಸ್ ಪಕ್ಷದ ಪ್ರಚಾರ ಸಮಿತಿಯ ಜಿಲ್ಲಾ ಜಂಟಿ ಸಂಯೋಜಕರಾಗಿ ಸೌರಾಷ್ಟ್ರಹಳ್ಳಿ ಗ್ರಾಮದ ಹಣಮಂತ ತಂದೆ ಭೀಮಪ್ಪ ದೊಡ್ಡಮನಿ ಹಾಗೂ ಜಿಲ್ಲಾ ಪ್ರಚಾರ ಸಮಿತಿಯ ಸಂಯೋಜಕರಾಗಿ ಮಲ್ಲಯ್ಯ ಕಸವಿ ಅವರು ನೇಮಕಗೊಂಡಿದ್ದಾರೆ.



ಈ ನೇಮಕವು ಜಿಲ್ಲಾ ಪ್ರಚಾರ ಸಮಿತಿಯ ಜಿಲ್ಲಾಧ್ಯಕ್ಷ ಮರೆಪ್ಪ ಕವಡಿ ಬಿಳ್ಹಾರ ಹಾಗೂ ಹಿಂದುಳಿದ ವರ್ಗಗಳ ಜಿಲ್ಲಾ ಅಧ್ಯಕ್ಷ ಸಾಯಬಣ್ಣ ಕೆಂಗುರಿ ಅವರ ನೇತೃತ್ವದಲ್ಲಿ, ಬಸರೆಡ್ಡಿ ಪಾಟೀಲ್ ಅನಪೂರ್ ಅವರ ಶಿಫಾರಸ್ಸಿನ ಮೇರೆಗೆ ಹಾಗೂ ಕರ್ನಾಟಕ ಪ್ರದೇಶ ಕಾಂಗ್ರೆಸ್ ಪ್ರಚಾರ ಸಮಿತಿಯ ರಾಜ್ಯಾಧ್ಯಕ್ಷ ವಿನಯ ಕುಮಾರ ಸೊರಕೆ ಅವರ ಆದೇಶದಂತೆ ನಡೆದಿದೆ.

ನೂತನವಾಗಿ ಜವಾಬ್ದಾರಿ ವಹಿಸಿಕೊಂಡಿರುವ ಪದಾಧಿಕಾರಿಗಳು ಪಕ್ಷದ ಸಿದ್ಧಾಂತಗಳು, ಯೋಜನೆಗಳು ಮತ್ತು ಜನಪರ ಕಾರ್ಯಕ್ರಮಗಳನ್ನು ಜನರಿಗೆ ಪರಿಣಾಮಕಾರಿಯಾಗಿ ತಲುಪಿಸುವ ಮೂಲಕ ಕಾಂಗ್ರೆಸ್ ಪಕ್ಷವನ್ನು ಜಿಲ್ಲೆಯಲ್ಲಿ ಮತ್ತಷ್ಟು ಸಂಘಟಿಸಿ ಬಲಪಡಿಸುವಲ್ಲಿ ಯಶಸ್ವಿಯಾಗಲಿ ಎಂದು ಮುಖಂಡರು ಮತ್ತು ಕಾರ್ಯಕರ್ತರು ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಯಾದಗಿರಿ ನಗರ ಬ್ಲಾಕ್ ಅಧ್ಯಕ್ಷ ಮಲ್ಲಿಕಾರ್ಜುನ ಹೀಟೆ, ರಾಜ್ಯ ಸಂಘಟನಾ ಸದಸ್ಯ ರಾಘವೇಂದ್ರ ಮಾನಸಗಲ್, ತಾಲೂಕು ಒಬಿಸಿ ಅಧ್ಯಕ್ಷ ಸಾಯಬಣ್ಣ ಬಾಡಿಯಾಳ, ಸೈದಾಪುರ ಒಬಿಸಿ ಬ್ಲಾಕ್ ಅಧ್ಯಕ್ಷ ದೇವಪ್ಪಗೌಡ ರಾಚನಹಳ್ಳಿ, ಜಗದೀಶ್ ಅಬ್ಬೆತುಮಕೂರು, ಜಗದೀಶ್ ಸಜ್ಜನ್ (ಸೌರಾಷ್ಟ್ರಹಳ್ಳಿ), ಹಣಮಂತರಾಯ ತೆಕಾರಾಳ, ಭೀಮರಾಯ ದಾಸರಿ, ವೀರೇಶ್ ಸಜ್ಜನ್, ಬಸಲಿಂಗಪ್ಪ ಗೋಲ್ಡ್, ಭಾಸ್ಕರ್ ಬಡಿಗೇರ, ಸೋಮಶೇಖರ್ ಮಸಕನಳ್ಳಿ ಸೇರಿದಂತೆ ಅನೇಕ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದು, ನೂತನ ಪದಾಧಿಕಾರಿಗಳಿಗೆ ಹೂಗುಚ್ಛ ನೀಡಿ ಅಭಿನಂದಿಸಿ ಶುಭಾಶಯ ಕೋರಿದರು.

# ಗಾಂಜಾ, ಮಾದಕ ವಸ್ತುಗಳ ಉತ್ಪಾದನೆ ಸಾಗಾಣಿಕೆಯಲ್ಲಿ ತೊಡಗಿರುವವರ ವಿರುದ್ಧ ಕಾನೂನು ರಿತ್ಯ ಕ್ರಮ: ಪಾಂಡ್ವೆ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಜೂ:29: ಗಾಂಜಾ, ಮಾದಕ ವಸ್ತುಗಳ ಉತ್ಪಾದನೆ ಹಾಗೂ ಸಾಗಾಣಿಕೆ ಗಳಲ್ಲಿ ತೊಡಗಿರುವವರ ವಿರುದ್ಧ ಕಾನೂನು ರೀತ್ಯಾ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾದಂಡಾಧಿಕಾರಿಗಳಾದ ತುಕಾರಾಮ ಪಾಂಡ್ವೆ ಅವರು ಹೇಳಿದರು. ಕೇಂದ್ರಗೃಹ ಮಂತ್ರಾಲಯದ ಸೂಚನೆಯಂತೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇಂದು ಜಿಲ್ಲಾ ಮಟ್ಟದ NCORD ಸಭೆ ನಡೆಸಿ ಅವರು ಮಾತನಾಡಿದರು. ಮಾದಕ ವಸ್ತುಗಳ (ಗಾಂಜಾ) ಉತ್ಪಾದನೆ,ಬೆಳೆ,ಸಾಗಾಣಿಕೆ, ಸೇವನೆ ವಿರುದ್ಧ ಕಾನೂನು ಪ್ರಕಾರ ಪ್ರಕರಣ ದಾಖಲಿಸಲಾಗುತ್ತದೆ ಎಂದು ಅವರು ಹೇಳಿದರು. ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಪೃಥ್ವಿಕ ಶಂಕರ್ ಅವರು ಮಾತನಾಡಿ, ಮಾದಕ ವ್ಯಸನಿಗಳಿಗೆ ಜಿಲ್ಲಾ ಯಿಮ್ಸ್ ಆಸ್ಪತ್ರೆಯಲ್ಲಿ ಕೌನ್ಸಲಿಂಗ್ ಮಾಡಿಸಲಾಗುತ್ತದೆ.




ಮಾದಕ ವಸ್ತು ತಡೆಗಟ್ಟುವ ನಿಟ್ಟಿನಲ್ಲಿ ಚೆಕ್ ಪೋಸ್ಟ್/ ರೈಲ್ವೆಗಳಲ್ಲಿ ತಪಾಸಣೆ ಒಳಪಡಿಸಲಾಗುತ್ತದೆ.ಸಾರ್ವಜನಿಕರು ಮಾದಕ ವಸ್ತು ಬಗ್ಗೆ ದೂರು ದಾಖಲಿಸಲು KSP App Download ಮಾಡಿ Drug Free Karnataka App ಉಪಯೋಗಿಸಬೇಕು.ಸಾರ್ವಜನಿಕ ಸ್ಥಳಗಳಲ್ಲಿ /ಶಾಲಾ–ಕಾಲೇಜುಗಳಲ್ಲಿ ಜಾಗೃತಿ ಕಾರ್ಯಕ್ರಮಗಳನ್ನು ಮಾಡಿ ಡ್ರಗ್ಸ್ ಮುಕ್ತ ಯಾದಗಿರಿಯನ್ನಾಗಿ ಮಾಡುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲಾಗುತ್ತಿದ್ದು, ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳು ಸೂಕ್ತ ಅರಿವು ಮೂಡಿಸುವ ಕಾರ್ಯ ಮಾಡುವಂತೆ ತಿಳಿಸಿದರು. ಸಭೆಯಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು. ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಮಟ್ಟದ ಅಧ್ಯಕ್ಷರು, ನಾರ್ಕೋ ಕೋ–ಆರ್ಡಿನೇಶನ್ ಕಮಿಟಿ ಅವರು ಮುಂತಾದವರು ಇದ್ದರು.

# ಕಾಂಗ್ರೇಸ್ ಪ್ರಚಾರ ಸಮಿತಿಯ ಜಿಲ್ಲಾ ಸಂಯೋಜಕರಾಗಿ ಸುರೇಶರೆಡ್ಡಿ ನೇಮಕ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಯಾದಗಿರಿ ಮತಕ್ಷೇತ್ರದ ಜನಪ್ರಿಯ ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರ್, ಶಿಫಾರಸ್ಸಿನ ಮೇರೆಗೆ ಹಾಗೂ ಕರ್ನಾಟಕ ಪ್ರದೇಶ ಕಾಂಗ್ರೆಸ್ ಪ್ರಚಾರ ಸಮಿತಿ ರಾಜ್ಯಾಧ್ಯಕ್ಷ ವಿನಯ ಕುಮಾರ ಸೊರಕೆ ರವರ ಆದೇಶದ ಮೇರೆಗೆ ಯಾದಗಿರಿ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿಯ ಜಿಲ್ಲಾ ಸಂಯೋಜಕರನ್ನಾಗಿ ಸುರೇಶರೆಡ್ಡಿ ತಂದೆ ಸಿದ್ದಣ್ಣಗೌಡ ಪೋಲಿಸ್ ಪಾಟೀಲ್, ಸಾ॥ ಗೋನಾಲ್ ತಾ॥ ವಡಗೇರಾ, ರವರನ್ನು ನೇಮಿಸಲಾಗಿದೆ ಎಂದು ಕೆ.ಪಿ.ಸಿ.ಸಿ, ಪ್ರಚಾರ ಸಮಿತಿಯ ಜಿಲ್ಲಾಧ್ಯಕ್ಷ ಮರೆಪ್ಪ ಜಿ. ಕವಡಿ ಬಿಳ್ಹಾರ ಹೇಳಿದರು. ಈ ವೇಳೆ ಮಾತನಾಡಿದ ಅವರು ಕಾಂಗ್ರೇಸ್ ಪಕ್ಷದ ಸಂಸದರು,



ಶಾಸಕರು, ಕಾಂಗ್ರೇಸ್ ಪಕ್ಷದ ಮುಖಂಡರು, ಹಾಗೂ ಜಿಲ್ಲಾ ಕಾಂಗ್ರೇಸ್ ಸಮಿತಿಯ ಕಾರ್ಯಕರ್ತರ ಸಹಕಾರದೊಂದಿಗೆ ಪಕ್ಷದ ಯೋಜನೆಗಳನ್ನು ಪ್ರಚಾರ ಮಾಡುವ ಮೂಲಕ ಪಕ್ಷವನ್ನು ಸಂಘಟನೆ ಮಾಡಿ ಪಕ್ಷವನ್ನು ಬಲಪಡಿಸಲು ಶ್ರಮಿಸಬೇಕೆಂದು ಎಂದು ಕಿವಿ ಮಾತು ಹೇಳಿದರು.

# ಸಂಸ್ಕಾರವಂತರನ್ನಾಗಿ ಮಾಡಿ, ಸಮಾಜವನ್ನು ಸುಧಾರಿಸಿ: ಹಿರಿಯ ನಾಗರಿಕರ ಜಾಗೃತಿ ಸಭೆ

• ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು

ಜೂ.29.ನಗರದ ಶಹರ ಪೊಲೀಸ್ ಠಾಣೆಯ ವತಿಯಿಂದ ಹಮ್ಮಿಕೊಂಡಿದ್ದ ಹಿರಿಯ ನಾಗರಿಕರ ಸಭೆಯು ಡಿವೈಎಸ್ಪಿ ಜಿ. ಚಂದ್ರಶೇಖರ್ ನಾಯಕ ಅವರ ನೇತೃತ್ವದಲ್ಲಿ ಜರುಗಿತು. ಸಭೆಯಲ್ಲಿ ಪಾಲ್ಗೊಂಡಿದ್ದ ಗಣ್ಯರು ಹಾಗೂ ಅಧಿಕಾರಿಗಳು ಹಿರಿಯ ನಾಗರಿಕರ ಭದ್ರತೆ ಮತ್ತು ಇಂದಿನ ಸಮಾಜದಲ್ಲಿ ಪೋಷಕರ ಜವಾಬ್ದಾರಿಗಳ ಕುರಿತು ಗಂಭೀರ ಚರ್ಚೆ ನಡೆಸಿದರು.ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಕಾರುಣ್ಯ ಆಶ್ರಮದ ಸಂಸ್ಥಾಪಕರಾದ ಚನ್ನಬಸಯ್ಯಸ್ವಾಮಿ ಮಾತನಾಡಿ,"ಇಂದಿನ ಪೋಷಕರು ಮಕ್ಕಳ ಉತ್ತಮ ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡುತ್ತಿದ್ದಾರೆ, ಆದರೆ ಅವರಿಗೆ ನೀಡಬೇಕಾದ ಸಂಸ್ಕಾರವನ್ನು ಮರೆಯುತ್ತಿದ್ದಾರೆ. ತಾಲೂಕಿನಲ್ಲಿ ಐದಾರು ವೃದ್ಧಾಶ್ರಮಗಳು ತಲೆ ಎತ್ತಿರುವುದು ನಮ್ಮ ಸಮಾಜದ ದುರ್ದೈವ. 'ಗಿಡವಾಗಿ ಬಗ್ಗದ್ದು ಮರವಾಗಿ ಬಗ್ಗೀತೆ?' ಎಂಬ ಗಾದೆಯಂತೆ, ಬಾಲ್ಯದಿಂದಲೇ ಮಕ್ಕಳಿಗೆ



ಬಸವಣ್ಣ,ಬುದ್ಧ,ಅಂಬೇಡ್ಕರ್ ಅವರಂತಹ ಮಹಾನ್ ವ್ಯಕ್ತಿಗಳ ತತ್ವ–ಸಿದ್ಧಾಂತಗಳು ಮತ್ತು ಮೌಲ್ಯಗಳನ್ನು ಕಲಿಸಿಕೊಡಬೇಕು. ಆಗ ಮಾತ್ರ ಮಗು ಸಮಾಜದ ಉತ್ತಮ ಪ್ರಜೆಯಾಗಿ ಹೊರಹೊಮ್ಮಲು ಸಾಧ್ಯ," ಎಂದು ಅಭಿಪ್ರಾಯಪಟ್ಟರು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಡಿವೈಎಸ್ಪಿ ಜಿ. ಚಂದ್ರಶೇಖರ್ ನಾಯಕ ಮಾತನಾಡಿ, ನಗರದಲ್ಲಿ ಯುವಕರು ಮಾದಕ ವಸ್ತುಗಳ ವ್ಯಸನಕ್ಕೆ ಬಲಿಯಾಗುತ್ತಿರುವ ಬಗ್ಗೆ ಆತಂಕ ವ್ಯಕ್ತಪಡಿಸಿದ ಅವರು, ಇದನ್ನು ನಿಯಂತ್ರಿಸಲು ಪೋಷಕರು ತಮ್ಮ ಮಕ್ಕಳ ಚಟುವಟಿಕೆಗಳ ಮೇಲೆ ನಿಗಾ ಇರಿಸಬೇಕು. ಮಾನವೀಯ ಮೌಲ್ಯಗಳನ್ನು ಮರೆಯುತ್ತಿರುವ ಇಂದಿನ ದಿನಮಾನದಲ್ಲಿ ಪಿತೃವಾಕ್ಯಪರಿಪಾಲನೆಯಂತಹ ಗುಣಗಳನ್ನು ಬೆಳೆಸುವ ಅಗತ್ಯವಿದೆ ಎಂದು ತಿಳಿಸಿದರು.

ವಯಸ್ಸಾದವರನ್ನು ಗುರಿಯಾಗಿಸಿಕೊಂಡು ನಡೆಯುತ್ತಿರುವ ಸೈಬರ್ ವಂಚನೆಗಳ ಬಗ್ಗೆ ಎಚ್ಚರವಿರಲಿ. ಅಕಸ್ಮಾತ್ ಹಣ ಕಳೆದುಕೊಂಡರೆ ತಕ್ಷಣವೇ ಟೋಲ್ ಫ್ರೀ ಸಂಖ್ಯೆ 1930ಕ್ಕೆ ಕರೆ ಮಾಡಿ ದೂರು ದಾಖಲಿಸಿ. ವಂಚನೆಯಾದ ಒಂದು ಗಂಟೆಯೊಳಗೆ ಕರೆ ಮಾಡಿದರೆ, ಕಳೆದುಕೊಂಡ ಹಣವನ್ನು ಮರಳಿ ಪಡೆಯಲು ಹೆಚ್ಚಿನ ಅವಕಾಶವಿರುತ್ತದೆ ಎಂದು ಸಲಹೆ ನೀಡಿದರು.ಯಾವುದೇ ರೀತಿಯ ಹಿರಿಯರಿಗೆ ದೌರ್ಜನ್ಯ ನಡೆದಿರುವ ಕಂಡುಬಂದಲ್ಲಿ ಕೂಡಲೇ ಪೊಲೀಸ್ ಇಲಾಖೆಗೆ ಮಾಹಿತಿ ನೀಡಿ. ಹಿರಿಯರ ಸಂಕಷ್ಟಗಳಿಗೆ ಸ್ಪಂದಿಸಲು ಪೊಲೀಸ್ ಇಲಾಖೆ ಸದಾ ಸಿದ್ಧವಿದ್ದು, ಯಾರಿಗೂ ನಿರಾಸೆಗೊಳ್ಳುವ ಅಗತ್ಯವಿಲ್ಲ ಎಂದು ಭರವಸೆ ನೀಡಿದರು.ಈ ಸಂದರ್ಭದಲ್ಲಿ ಸಿ ಪಿ ಐ ವಿನಾಯಕ್, ವಿರಾರೆಡ್ಡಿ,ಮುಖಂಡರಾದ ಬಾಬರ್ ಪಾಷಾ, ಛತ್ರಪ್ಪ ಉಪ್ಪಾರ, ಚಂದ್ರು ಮೈಲಾರಿ, ಜಿಲಾನಿ ಪಾಶಾ, ಯಮನಪ್ಪ ಗಿರಿಜಾಲಿ, ಹುಸೇನ್ ಸಾಬ್ ಜಮಾತಿ ಹಿಂದ್ ಇಸ್ಲಾಂ, ಪಂಪಣ್ಣ ದೇಸಾಯಿ ಸೇರಿದಂತೆ ಅನೇಕ ಹಿರಿಯರು ಭಾಗವಹಿಸಿದ್ದರು.

# ಅನಂತ ತಪ್ಪುಗಳಿಗೆ ಧರ್ಮದ ಅಜ್ಞಾನವೇ ಕಾರಣ

• ಮಲ್ಲಮ್ಮ ನುಡಿ ವಾರ್ತೆ ಬಸವಕಲ್ಯಾಣ

ಅನಂತ ತಪ್ಪುಗಳಿಗೆ ಧರ್ಮದ ಅಜ್ಞಾನವೇ ಕಾರಣ ಎಂದು ಬೀದರ ಚಿದಂಬರ ಆಶ್ರಮದ ಪೂಜ್ಯ ಶ್ರೀ ಡಾ. ಶಿವಕುಮಾರ ಸ್ವಾಮೀಜಿ ತಿಳಿಸಿದರು. ಜಿಲ್ಲಾ ಮಠಾಧೀಶರ ಒಕ್ಕೂಟ ಹಾಗೂ ಹಿಂದೂ ಸರ್ವ ಸಮಾಜಗಳ ಒಕ್ಕೂಟದ ಸಹಯೋಗದಡಿ ನಗರದ ಅಕ್ಕಮಹಾದೇವಿ ಕಾಲೇಜಿನ ಆವರಣದಲ್ಲಿ ರವಿವಾರ ಆಯೋಜಿಸಿದ್ದ ಬಸವಾದಿ ಶಿವಶರಣರ ಹಿಂದೂ ಸಮಾವೇಶದಲ್ಲಿ ಮಾತನಾಡಿದ ಅವರು ಹಿಮಾಚಲದಿಂದ ಹಿಡಿದು ಸಿಂಧು ನದಿವರೆಗೆ ದೇಶದಲ್ಲಿ ಇರುವ ಎಲ್ಲರೂ ಹಿಂದೂಗಳು ನಾವು ಎಲ್ಲ ಭಾರತೀಯರು ಎಂಬ ವಿಶಾಲ ಮನೋಭಾವ ಬೆಳೆಸಿಕೊಂಡು ಒಗ್ಗಟ್ಟಾಗಿ ಸಾಗಬೇಕೆಂದು ತಿಳಿಸಿದರು. ತಡೋಳಾದ ಪೂಜ್ಯ ಶ್ರೀ ರಾಜೇಶ್ವರ ಶಿವಾಚಾರ್ಯರು ಮಾತನಾಡಿ ಜಗತ್ತಿನಲ್ಲಿ ಅತ್ಯಂತ ಹಳೆಯದಾದ ಧರ್ಮ ಹಿಂದೂ. ನಮ್ಮ ಆಚಾರ ವಿಚಾರ ಸಂಸ್ಕೃತಿ ಮತ್ತು ಹಿಂದೂ ಧರ್ಮವನ್ನು ರಕ್ಷಿಸುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ ಎಂದರು. ಹಿರಿಯ ಪತ್ರಕರ್ತರಾದ ಶಿವಶರಣಪ್ಪ ವಾಲಿ. ಮುಚಳಂಬದ ಪೂಜ್ಯ ಶ್ರೀ



ಪ್ರಣವಾನಂದ ಮಹಾಸ್ವಾಮಿಗಳು. ಆಂದೋಲ ಪೂಜ್ಯಶ್ರೀ ಸಿದ್ದಲಿಂಗ ಸ್ವಾಮೀಜಿ. ಶಾಹಪುರದ ಪೂಜ್ಯಶ್ರೀ ಸೂಗುರೇಶ್ವರ ಸ್ವಾಮಿಜಿ. ಬೆಂಗಳೂರಿನ ಪೂಜ್ಯ ಶ್ರೀ ಆರೂಢಭಾರತಿ. ಸ್ವಾಗತ ಸಮಿತಿಯ ಕಾರ್ಯಾಧ್ಯಕ್ಷರಾದ ಗುಂಡುರಡ್ಡಿ ಆರ್ ಕಮಲಾಪುರೆ ಸಹ ಮಾತನಾಡಿದರು. ಕನೇರಿ ಮಠದ ಪೂಜ್ಯ ಶ್ರೀ ಆದೃಶ ಕಾಡ ಸಿದ್ದೇಶ್ವರ ಸ್ವಾಮಿಜಿ. ಪೂಜ್ಯಶ್ರೀ ಹವಾಮಲಿನಾಥ ಮಹಾರಾಜ. ಹುಡುಗಿಯ ಹಿರಿಯ ಪೂಜ್ಯ ಶ್ರೀ ವಿರೂಪಾಕ್ಷ ಸ್ವಾಮಿಜಿ. ಹಿರನಾಗಾಂವ ಪೂಜ್ಯ ಶ್ರೀ ಜಯಶಾಂತಲಿಂಗ ಮಹಾಸ್ವಾಮಿಜಿ ಸೇರಿದಂತೆ ಅನೇಕ ಪೂಜ್ಯರು ಭಾಗವಹಿಸಿದ್ದರು. ತಿಪುರಾಂತಿನ ಗವಿಮಠದ ಪೂಜ್ಯಶ್ರೀ ಡಾ ಅಭಿನವ ಘನಲಿಂಗ ರುದ್ರಮುನಿ ಶಿವಾಚಾರ್ಯರು ಸ್ವಾಗತಿಸಿದರು. ಭಕ್ತ ಕುಂಬಾರ ನಿರೂಪಿಸಿದರು.

# ಪಲ್ಸ್ ಪೋಲಿಯೊ ಅಭಿಯಾನಕ್ಕೆ ಶಾಸಕ ಹಂಪನಗೌಡ ಬಾದರ್ಲಿ ಚಾಲನೆ

• ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು

ಜೂ. 29: ತಾಲ್ಲೂಕು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವತಿಯಿಂದ ಭಾನುವಾರ ಹಮ್ಮಿಕೊಂಡಿದ್ದ ಪಲ್ಸ್ ಪೋಲಿಯೊ ಅಭಿಯಾನಕ್ಕೆ ನಗರದ ತಾಯಿ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ ಶಾಸಕ ಹಂಪನಗೌಡ ಬಾದರ್ಲಿ ಅವರು ಚಾಲನೆ ನೀಡಿದರು.ಈ ಸಂದರ್ಭದಲ್ಲಿ ಮಾತನಾಡಿದ ಶಾಸಕರು, "ಪ್ರತಿ ಬಾರಿ ಎರಡು ಹನಿ, ಪೋಲಿಯೊ ವಿರುದ್ಧ ನಿರಂತರ ಗೆಲುವು" ಎಂಬ ಧ್ಯೇಯವಾಕ್ಯದೊಂದಿಗೆ ಈ ಅಭಿಯಾನವನ್ನು ನಡೆಸಲಾಗುತ್ತಿದೆ. ದೇಶವನ್ನು ಪೋಲಿಯೊ ಮುಕ್ತವಾಗಿಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ. ಸಾರ್ವಜನಿಕರು ಆರೋಗ್ಯ ಇಲಾಖೆಯೊಂದಿಗೆ ಕೈಜೋಡಿಸಿ, ಸದೃಢ ಭಾರತ ನಿರ್ಮಾಣಕ್ಕೆ ಸಹಕರಿಸಬೇಕು ಎಂದು ಮನವಿ ಮಾಡಿದರು. ಅಲ್ಲದೆ, ಆರೋಗ್ಯ ಇಲಾಖೆಯ ಸಿಬ್ಬಂದಿಗಳು ಅಭಿಯಾನದ ಕುರಿತು ಜನರಲ್ಲಿ ಹೆಚ್ಚಿನ ಜಾಗೃತಿ ಮೂಡಿಸಿ, ಮಕ್ಕಳ ಆರೋಗ್ಯದ ಬಗ್ಗೆ ವಿಶೇಷ ಕಾಳಜಿ ವಹಿಸಬೇಕು ಎಂದು ಸೂಚಿಸಿದರು.



ಕಾರ್ಯಕ್ರಮದಲ್ಲಿ ತಾಯಿ ಮತ್ತು ಮಕ್ಕಳ ಆಸ್ಪತ್ರೆಯ ವೈದ್ಯಾಧಿಕಾರಿ ಡಾ. ಕಾವೇರಿ, ಸರ್ಕಾರಿ ಆಸ್ಪತ್ರೆಯ ಮುಖ್ಯ ವೈದ್ಯಾಧಿಕಾರಿ ಡಾ. ಸುರೇಶಗೌಡ, ತಾಲ್ಲೂಕು ಆರೋಗ್ಯಾಧಿಕಾರಿ ಡಾ. ಅಯ್ಯನಗೌಡ, ತಾಲ್ಲೂಕು ಮಟ್ಟದ ಮೇಲ್ವಿಚಾರಕ ಎಫ್.ಎ. ಹಣಗಿ ಸೇರಿದಂತೆ ಇಲಾಖೆಯ ವೈದ್ಯರು, ಸಿಬ್ಬಂದಿ ವರ್ಗದವರು ಮತ್ತು ಸಾರ್ವಜನಿಕರು ಉಪಸ್ಥಿತರಿದ್ದರು.

# ಪೋಲಿಯೊ ಮುಕ್ತ ಸಮಾಜಕ್ಕೆ ಕೈಜೋಡಿಸಿ:ಶಾಸಕ ಬಸನಗೌಡ

• ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು

ಜೂ.29:ಮಕ್ಕಳ ಸದೃಢ ಆರೋಗ್ಯ ಮತ್ತು ಸುರಕ್ಷಿತ ಭವಿಷ್ಯದ ದೃಷ್ಟಿಯಿಂದ ಪೋಲಿಯೋ ಲಸಿಕೆ ಅತ್ಯಗತ್ಯ ಎಂದು ವಿಧಾನಪರಿಷತ್ ಸದಸ್ಯ ಬಸನಗೌಡ ಬಾದರ್ಲಿ ಅಭಿಪ್ರಾಯಪಟ್ಟರು.ನಗರದ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಯಲ್ಲಿ ಭಾನುವಾರ ಆಯೋಜಿಸಲಾಗಿದ್ದ 'ಪಲ್ಸ್ ಪೋಲಿಯೋ ಅಭಿಯಾನ'ಕ್ಕೆ ಲಸಿಕೆ ನೀಡುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು. ದೇಶದ ಭವಿಷ್ಯವು ಮಕ್ಕಳ ಆರೋಗ್ಯದ ಮೇಲೆ ಅವಲಂಬಿತವಾಗಿದೆ. ಪೋಲಿಯೋ ಮುಕ್ತ ಸಮಾಜವನ್ನು ನಿರ್ಮಿಸುವ ನಿಟ್ಟಿನಲ್ಲಿ ಪೋಷಕರು ಜಾಗೃತರಾಗಬೇಕು ಎಂದು ಅವರು ಕರೆ ನೀಡಿದರು."ಐದು ವರ್ಷದೊಳಗಿನ ಪ್ರತಿಯೊಂದು ಮಗುವಿಗೂ ತಪ್ಪದೇ ಪೋಲಿಯೋ ಲಸಿಕೆ ಹಾಕಿಸುವುದು ಪ್ರತಿಯೊಬ್ಬ ಪೋಷಕರ ಜವಾಬ್ದಾರಿಯಾಗಿದೆ. 'ಎರಡು ಹನಿ ಜೀವ ರಕ್ಷಕ' ಎಂಬ ಅರಿವನ್ನು ಪ್ರತಿಯೊಬ್ಬರೂ ಬೆಳೆಸಿಕೊಳ್ಳಬೇಕು. ಈ ಅಭಿಯಾನವನ್ನು ಯಶಸ್ವಿಗೊಳಿಸುವ ಮೂಲಕ ಮಕ್ಕಳನ್ನು ಪೋಲಿಯೋ ಮುಕ್ತರನ್ನಾಗಿ ಮಾಡುವುದು ನಮ್ಮೆಲ್ಲರ ಕರ್ತವ್ಯ ಎಂದು ಅವರು ತಿಳಿಸಿದರು.ಈ ಕಾರ್ಯಕ್ರಮದಲ್ಲಿ ತಾಲ್ಲೂಕು ಆರೋಗ್ಯಾಧಿಕಾರಿ ಡಾ. ಅಯ್ಯನಗೌಡ, ತಾಲ್ಲೂಕು ಮಟ್ಟದ ಮೇಲ್ವಿಚಾರಕ ಎಫ್.ಎ. ಹಣಗಿ ಸೇರಿದಂತೆ ಇಲಾಖೆಯ ವೈದ್ಯರು,ಮುಖಂಡರಾದ ವೆಂಕಟೇಶ ನಾಯಕ ರಾಗಲಪರ್ವಿ,ವೀರೇಶ್ ರಾರಾವಿ, ಸೇರಿದಂತೆ ಇತರರು ಇದ್ದರು.



# ಹಾರಕೂಡ ಗ್ರಾಮದಲ್ಲಿ ಸಂಭ್ರಮದ ಕಾರ ಹುಣ್ಣಿಮೆ ಹಬ್ಬ ಆಚರಣೆ

• ಮಲ್ಲಮ್ಮ ನುಡಿ ವಾರ್ತೆ ಬಸವಕಲ್ಯಾಣ

ತಾಲೂಕಿನ ಸುಕ್ಷೇತ್ರ ಹಾರಕೂಡ ಶ್ರೀ ಮಠದ ಆವರಣದಲ್ಲಿ ಪೀಠಾಧಿಪತಿಗಳಾದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ಕಾರ ಹುಣ್ಣಿಮೆ ಹಬ್ಬಕ್ಕೆ ಚಾಲನೆ ನೀಡಿದರು. ಇದೇ ಸಂದರ್ಭದಲ್ಲಿ ಎಪಿಎಂಸಿ ಮಾಜಿ ಅಧ್ಯಕ್ಷ ಸಿದ್ರಾಮಪ್ಪ ಗುದಗೆ, ಮಲ್ಲಿನಾಥ ಹಿರೇಮಠ ಹಾರಕೂಡ, ಪಂಡಿತರಾವ ದೇಗಾಂವ, ವಿಜಯಕುಮಾರ ಅಟ್ನೂರೆ, ಶಿವಪುತ್ರ ಶೀಲವಂತ ಮುಂತಾದವರು ಉಪಸ್ಥಿತರಿದ್ದರು.



# ಸಜ್ಜ ಹೊಲದಲ್ಲಿ ಹಜರತ್ ಇಮಾಮ್ ಖಾಸಿಂ ಹಸನ್ ಹುಸೇನ್ ಮುದಗಲ್ ಮಸೀದಿಯ ಮೊಹರಂ ಆಚರಣೆ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಕೊಪ್ಪಳ ತಾಲೂಕಿನ 13ನೇ ವಾರ್ಡ್ ವ್ಯಾಪ್ತಿಯ ಸಜ್ಜೀಹೊಲದಲ್ಲಿ ಹಜರತ್ ಇಮಾಮ್ ಖಾಸಿಂ ಹಸನ್ ಹುಸೇನ್ ಮುದಗಲ್ ಮಸೀದಿ ವತಿಯಿಂದ ಮೊಹರಂ ಹಬ್ಬವನ್ನು ಭಕ್ತಿ ಮತ್ತು ಶ್ರದ್ಧಾಭಾವದಿಂದ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಮಸೀದಿಯ ಅಜ್ಜವಾರದ ಮುರ್ತುಜ್ ಸಾಬ್ ಅವರ ನೇತೃತ್ವದಲ್ಲಿ ವಿಶೇಷ ಅಂದರೆ 70 ವರ್ಷಗಳ ಇತಿಹಾಸ ಹೊಂದಿರುವ ಇಲ್ಲಿ ಎಲ್ಲಾ ಧರ್ಮದವರು ಸೇರಿಕೊಂಡು ಹಬ್ಬವನ್ನು ಆಚರಿಸುತ್ತಾರೆ.ಹಾಗೆ ಮೂರು ದಿನದ ಜಾರತ ಇಲ್ಲಿ ನಡೆಯುತ್ತದೆ ಅದರಲ್ಲಿ 5 ಕ್ವಿಂಟಲ್ ಅನ್ನ ಐದು ಕ್ವಿಂಟಲ್ ಮಟನ್ ಮಾಡುತ್ತಾರೆ. ಹಾಗೆ ಅನ್ನ ಸಂತರ್ಪಣೆ ಕಾರ್ಯಕ್ರಮವನ್ನು ಕೂಡ ಅಚ್ಚುಕಟ್ಟಾಗಿ ನಡೆಸಿಕೊಡುತ್ತಾರೆ ಮತ್ತೆ ಬೇರೆ ಬೇರೆ ಊರುಗಳಿಂದ ಭಕ್ತರು ತಮ್ಮ ಒಂದು ಬೇಡಿಕೆಗಳನ್ನು ದೇವರಿಗೆ ಒಪ್ಪಿಸುತ್ತಾರೆ. ಹಾಗೆ ಅಲ್ಲಿ ಪ್ರಾರ್ಥನೆಗಳು ಹಾಗೂ ಧಾರ್ಮಿಕ ಕಾರ್ಯಕ್ರಮಗಳು ನೆರವೇರಿದವು. ಗ್ರಾಮದಲ್ಲಿನ ಮುಸ್ಲಿಂ ಬಾಂಧವರು ಸೇರಿದಂತೆ ವಿವಿಧ ಸಮುದಾಯದ ಜನರು ಭಾಗವಹಿಸಿ ಶಾಂತಿ, ಸೌಹಾರ್ದತೆ ಮತ್ತು ಭಾವೈಕ್ಯತೆಯ ಸಂದೇಶ ಸಾರಿದರು.



ಮೊಹರಂ ಹಬ್ಬವು ತ್ಯಾಗ, ಧರ್ಮನಿಷ್ಠೆ ಮತ್ತು ಮಾನವೀಯ ಮೌಲ್ಯಗಳ ಪ್ರತೀಕವಾಗಿದ್ದು, ಸಜ್ಜೀಹೊಲದಲ್ಲಿ ಶಾಂತಿಯುತ ವಾತಾವರಣದಲ್ಲಿ ಆಚರಣೆ ನಡೆಯಿತು. ಭಕ್ತರು ಶ್ರದ್ಧೆಯಿಂದ ಪಾಲ್ಗೊಂಡು ಪ್ರಾರ್ಥನೆ ಸಲ್ಲಿಸಿದರು.

# ವಿಕಸಿತ ಭಾರತ ಗ್ಯಾರಂಟಿ ರೋಜಗಾರ್ ತರಬೇತಿ ಕಾರ್ಯಾಗಾರ



• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಜುಲೈ1ರಿಂದ ದೇಶದಾದ್ಯಂತ ಜಾರಿಯಾಗಲಿರುವ ಗಿಃ–ಉ ಖಂಒ ಉ ಯೋಜನೆನ್ನು ಅನುಷ್ಠಾನಿಸುವ ಕುರಿತಾಗಿ ಅಧಿಕಾರಿಗಳಿಗೆ ಮತ್ತು ಸಿಬ್ಬಂದಿಗಳಿಗೆ ದಿನಾಂಕ:29.06.2026 ರಂದು ತಾಲೂಕಾ ಪಂಚಾಯತ ಸಭಾಂಗಣ ಕೊಪ್ಪಳದಲ್ಲಿ VB-G RAM G ಯೋಜನೆ ತರಬೇತಿಯ ಜಿಲ್ಲಾ ಸಂಪನ್ಮೂಲ ವ್ಯಕ್ತಿಗಳಾದ ತಾ.ಪಂ ಕೊಪ್ಪಳ ಕಾರ್ಯನಿರ್ವಾಹಕ ಅಧಿಕಾರಿ ದುಂಡಪ್ಪ ತುರಾದಿ, ವೈ.ವನಜಾ ಸಹಾಯಕ ನಿರ್ದೇಶಕರು(ಗ್ರಾಉ) ತಾಲೂಕ ಪಂಚಾಯತ ಕಾರಟಗಿ, ನಿಂಗನಗೌಡ ಸಹಾಯಕ ನಿರ್ದೇಶಕರು(ಗ್ರಾಉ) ತಾ.ಪಂ ಕುಷ್ಟಗಿ, ಪಂಚಾಯತ್ ಅಭಿವೃದ್ಧಿ ಅಧಿಕಾರಿ ಶಂಶೀರ್ ಅಲಿ ತರಬೇತಿಯಲ್ಲಿ ಯೋಜನೆ ಕಾರ್ಯವೈಖರಿ ವಿಧಾನಗಳ ಕುರಿತು ಪಿಪಿಟಿ ಮುಖಾಂತರ ಮಾಹಿತಿ ವಿವರಿಸಿದರು.ಸದರಿ ತರಬೇತಿಯಲ್ಲಿ ಅನುಷ್ಠಾನ ಇಲಾಖೆಗಳಾದ ಕೃಷಿ, ಅರಣ್ಯ, ತೋಟಗಾರಿಕೆ, ರೇಷ್ಮೆ, ಪಂಚಾಯತ್ ರಾಜ್ ಇಲಾಖೆ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಜಿಲ್ಲಾ ಮತ್ತು ತಾಲೂಕಾ ಮಟ್ಟದ ಅಧಿಕಾರಿಗಳು ಮತ್ತು ಸಿಬ್ಬಂದಿಗಳು,ಸಹಾಯಕ ನಿರ್ದೇಶಕರು(ಗ್ರಾಉ) ತಾ.ಪಂ ಕೊಪ್ಪಳ, ಸಹಾಯಕ ನಿರ್ದೇಶಕರು(ಪಂ.ರಾಜ್), ಪಂಚಾಯತ ಅಭಿವೃದ್ಧಿ ಅಧಿಕಾರಿಗಳು, ಜಿಲ್ಲಾ ಪಂಚಾಯತಿ ಮತ್ತು ತಾಲೂಕಾ ಪಂಚಾಯತಿಯ ನರೇಗಾ ಸಿಬ್ಬಂದಿಗಳು, ತಾಂತ್ರಿಕ ಸಹಾಯಕರುಗಳು (ಗ್ರಾಮ ಪಂಚಾಯತ &ಅನುಷ್ಠಾನ ಇಲಾಖೆ), ಕಂಪ್ಯೂಟರ್ ಆಪರೇಟರ್ ಗಳು, ಬಿ.ಎಫ್.ಟಿಗಳು, ಗ್ರಾಮ ಕಾಯಕ ಮಿತ್ರರು ಹಾಜರಿದ್ದರು.

# ಜೀವನೋತ್ಸಾಹಕ್ಕೆ ಚುಟುಕು ಸಾಹಿತ್ಯ ಪ್ರೇರಣೆ : ಡಾ.ಅರಸು



• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಮಾನಸಿಕ ನೆಮ್ಮದಿ ಹಾಗೂ ವಿಕಾಸಕ್ಕೆ ಚುಟುಕು ಸಾಹಿತ್ಯ ಪ್ರೇರಣೆ ನೀಡುತ್ತದೆ ಸಾಹಿತ್ಯ ಆಸಕ್ತರಿಗೆ ಸೂಕ್ತ ವೇದಿಕೆ ದೊರೆತಾಗ ಪ್ರತಿಯೊಬ್ಬರೂ ಕವಿಗಳಾಗಿ ಹೊರ ಹೊಮ್ಮಲು ಸಾಧ್ಯ ಎಂದು ಚುಟುಕು ಸಾಹಿತ್ಯ ಪರಿಷತ್ ಕೇಂದ್ರ ಸಮಿತಿ ಸಂಚಾಲಕ ಡಾ. ಎಂಬ. ಜೀ. ಅರ್ ಅರಸು ಹೇಳಿದರು. ಅವರು ಭಾನುವಾರ ಭಾಗ್ಯನಗರದ ನಿಮಿಷಷಾ ಂಬಾ ದೇವಿ ಸಭಾ ಭವನದಲ್ಲಿ ಸಾಹಿತಿ, ಶಿಕ್ಷಕ ಶ್ರೀನಿವಾಸ್ ಚಿತ್ರಗಾರ ಅವರ ಸವಾ9ಧ್ಯಕ್ಷ್ಯತೆಯಲ್ಲಿ ಕೊಪ್ಪಳ ತಾಲೂಕು 2 ನೆಯ ಚುಟುಕು ಸಾಹಿತ್ಯ ಸಮ್ಮೇಳನ ಉದ್ಘಾಟಿಸಿ ಮಾತನಾಡಿದರು.ಬೀದಿಗಳಲ್ಲಿ ಹೊಟ್ಟೆಪಾಡಿಗಾಗಿ ಕೆಲಸ ಮಾಡುವವರು ಹಾಗೂ ಸುಖದ ಸುಪ್ಪತ್ತು ಸಂಪತ್ತೀಗಾಗಿ ಕೆಲಸ ಮಾಡುವವರಲ್ಲಿಯೂ ಸಹ ಸಾಹಿತ್ಯ ಅಭಿರುಚಿ ಇದ್ದೆ ಇರುತ್ತದೆ ಆ ಎಲ್ಲರ ಅಭಿವ್ಯಕ್ತಿ ಚುಟುಕು ಬರಹಗಳ ಮೂಲಕ ಹೊರ ಬಂದಾಗ ದೇಶ ಮತ್ತು ರಾಜ್ಯಗಳಲ್ಲಿ ಕ್ರಾಂತಿ ಸಾಧ್ಯ ವಾಗುತ್ತದೆ, ಅಷ್ಟೊಂದು ಪರಿಣಾಮಕಾರಿ ಶಕ್ತಿ ಚುಟುಕು ಸಾಹಿತ್ಯದಲ್ಲಿ ಇದೆ ಎಂದು ಹೇಳಿದರು. ಶ್ರೀನಿವಾಸ ಚಿತ್ರಗಾರ ಅವರ ಎಳೆಯರಿಗಾಗಿ ಒತ್ತಕ್ಷರ ಇಲ್ಲದ ಕಥೆಗಳು ಕೃತಿ, ಈರಪ್ಪ ಬಿಜಲಿ ಅವರ ನಿಖಿಲ್ ನ ಬಣ್ಣದ ಕೊಡೆ ಕೃತಿ ಹಾಗೂ ಎ.ಪಿ ಅಂಗಡಿ ಅವರ 156ನೇ ಕಲಾ ಕ್ರತಿ ಬಿಡುಗಡೆ ಗೊಳಿಸಿದ ಎಂಎಲ್ಸಿ ಹೇಮಲತಾ ನಾಯಕ ಅವರು ಮಾತನಾಡಿ, ತಿರುಳಗನ್ನಡ ನಾಡು ಸಾಹಿತ್ಯ ಸಂಗೀತಕ್ಕೆ ಕೊರತೆಯಿಲ್ಲ ಸಾಹಿತ್ಯ ಕ್ಷೇತ್ರದಲ್ಲಿ ಪುರುಷರಿಗಿಂತ ಮಹಿಳೆಯರೇ ಹೆಚ್ಚಿನ ಸಂಖ್ಯೆಯಲ್ಲಿ ಆಸಕ್ತಿ ಹೊಂದಿದ್ದಾರೆ, ಅವರಿಗೆಲ್ಲ ಸೂಕ್ತ ಪ್ರೋತ್ಸಾಹ ಸಿಗುತ್ತಿಲ್ಲ, ಸಮಾಜ ಸೇವೆ ಹೆಸರಿನಲ್ಲಿ ನಿತ್ಯ 24 ತಾಸು ರಾಜಕಾರಣ ಮಾಡುವ ಪದ್ಧತಿ ಕೈಬಿಟ್ಟಾಗ ಸೇವೆಗೆ ಮಹತ್ವ ಸಿಗುತ್ತದೆ, ಉತ್ತರ ಮತ್ತು ಕಲ್ಯಾಣ ಕರ್ನಾಟಕ ಪ್ರದೇಶಗಳು ಅಸಮತೋಲ ಎದುರಿಸುತ್ತಿದೆ, ಶಿಕ್ಷಣ, ವಿಶ್ವ ವಿದ್ಯಾಲಯ ಹಾಗೂ ಮಹಿಳಾ ಸಬಲೀಕರಣ ಪ್ರಗತಿ ಯಶಸ್ವಿಯಾಗುತ್ತಿಲ್ಲ, ತುಂಗ ಭದ್ರ ಡ್ಯಾಮ್ ಕ್ರೇಸ್ಟ್ ಗೆಟ್ಗೆ 50 ಕೋ. ರೂಪಾಯಿಗಳನ್ನು ಸರಕಾರ ಬಳಕೆ ಮಾಡಿದೆ, ದುರಂತ ವೆಂದರೆ ಮಳೆಯಾಗುತ್ತಿಲ್ಲ, ರೈತರಿಗೆ ಗೊಬ್ಬರ ಕ್ರಿಮಿನಾಶಕ ಗೊಬ್ಬರ ಸಲುವಾಗಿ ಪರದಾಟ ಎದ್ದಿದೆ ಕೊಪ್ಪಳದಲ್ಲಿ ಕಳಪೆ ಗೊಬ್ಬರ ಮಾರಾಟ ಹಾವಳಿ ಎದ್ದಿದೆ ಸಾಹಿತಿಗಳೂ ಲೇಖನಿ ಜೊತೆಗೆ ಜನಪರ ಕೆಲಸ ಮಾಡಲು ಸಿದ್ದರಾಗಿರಿ ಎಂದು ತಿಳಿಸಿದರು. ಪರಿಷತ್ ತಾಲೂಕು ಅಧ್ಯಕ್ಷ ಮೈಲಾರಪ್ಪ ಉಂಕಿ ಅಧ್ಯಕ್ಷತೆ ವಹಿಸಿದ್ದರು.ನಂತರ ಗೋಷ್ಠಿ 1ರಲ್ಲಿ ಚುಟುಕು ಸಾಹಿತ್ಯ ಬೆಳೆದು ಬಂದ ಬಗೆ ಕುರಿತು ಶಿ. ಕಾ.ಬಡಿಗೇರ ಅವರು ಉಪನ್ಯಾಸ ನೀಡಿದರು. ಸಾಹಿತಿಗಳಾದ ವೀರಣ್ಣ ಹುರಕಡ್ಲಿ, ಎಪಿ ಅಂಗಡಿ, ಕೋಮಲಾ ಕುದರಿಮೋತಿ ,ಡಾ.ಫಕೀರಪ್ಪ ವಜ್ರಬಂಡಿ, ಎಸ್.ಎಂ.ಕಂಬಾಳಿಮಠ, ವಿದ್ಯಾವತಿ ಚಿತ್ರಗಾರ, ಮುಖಂಡರಾದ ಮುದಕಪ್ಪ ಹೊಸಮನಿ, ಬಸವರಾಜ್ ಕೊಡ್ಲಿ, ಸರೋಜಾ ಬಾಕಳೆ ಇದ್ದರು. ಗೋಷ್ಠಿ 2 ರಲ್ಲಿ ಕೊಪ್ಪಳ ತಾಲ್ಲೂಕು ಅಭಿವೃದ್ಧಿ ಒಂದು ಅವಲೋಕನ ಕುರಿತು ಹೋರಾಟಗಾರ ಗಾಳೆಪ್ಪ ಕಡೆಮನಿ ವಿಷಯ ಮಂಡಿಸಿದರು. ಹಿರಿಯ ಚಿಂತಕ ವೀರಣ್ಣ ಹುರಕಡ್ಲಿ ಅಧ್ಯಕ್ಷತೆ ವಹಿಸಿದ್ದರು. ಮುಖಂಡ ಮಂಜುನಾಥ್ ಸೊರಟೂರ ಉಪಸ್ಥಿತರಿದ್ದರು. ನಂತರ ನಡೆದ ಚುಟುಕು ಕವಿಗೋಷ್ಠಿಯನ್ನು ಹಿರಿಯ ಕವಿ ವಿ.ಬೀ.ಪಟ್ಟಣಶೆಟ್ಟಿ ಉದ್ಘಾಟಿಸಿದರು. ಕವಿ ಯಲ್ಲಪ್ಪ ಮಲ್ಲಪ್ಪ ಹರನಾಳಗಿ ಅಧ್ಯಕ್ಷತೆ ವಹಿಸಿದ್ದರು. ಶರಣಬಸಪ್ಪ ಬಿಳಿಯಲಿ ಅವರು ಆಶಯ ನುಡಿ ಹೇಳಿದರು. ಸಾಹಿತಿಗಳಾದ ಅರುಣಾ ನರೇಂದ್ರ ಪಾಟೀಲ್, ಶಾಂತ ಕನಕಗಿರಿ ಮಠ್ ಸೇರಿದಂತೆ ಇತರರು ವೇದಿಕೆಯಲ್ಲಿದ್ದರು. ಕೊಪ್ಪಳ ತಾಲೂಕು ಸೇರಿದಂತೆ ಜಿಲ್ಲೆಯ ವಿವಿಧ ತಾಲೂಕಿನ ಕವಿಗಳು ಚುಟುಕು ವಾಚಿಸಿದರು. ನಂತರ ಸಂಜೆ ನಡೆದ ಸಮಾರೋಪ ಸಮಾರಂಭದಲ್ಲಿ ಸಾಹಿತಿ,ಚಿಂತಕ ಗಿರಿಜಾ ಶಂಕರ್ ಪಾಟೀಲ್ ಅವರು ಸಮಾರೋಪ ನುಡಿ ಹೇಳಿದರು.ಪರಿಷತ್ತಿನ ಜಿಲ್ಲಾಧ್ಯಕ್ಷ ರುದ್ರಪ್ಪ ಭಂಡಾರಿ ಅವರು ಅಧ್ಯಕ್ಷತೆ ವಹಿಸಿದ್ದರು. ಸಾಹಿತ್ಯ ಮತ್ತು ಸಾಂಸ್ಕೃತಿಕ ವಲಯದ ಪ್ರಮುಖರಾದ ಜಿ.ಎಸ್.ಗೋನಾಳ, ಪರಶುರಾಮಪ್ಪ ಚಿತ್ರಗಾರ, ವಿಶ್ವನಾಥ ಚಿತ್ರಗಾರ, ನಾಗರಾಜ್ ದಂಡೋತಿ,ಅಮೀನ ಸಾಬ್ ಮುಲ್ಲಾ, ಅನ್ನಪೂಣಮ್ಮ ಮನ್ನಾಪುರ,ನಾಗರಾಜ್ ಕುರಗೋಡ್ ಸೇರಿದಂತೆ ಚುಟುಕು ಸಾಹಿತ್ಯ ಪರಿಷತ್ ವಿವಿಧ ತಾಲ್ಲೂಕುಗಳ ಅಧ್ಯಕ್ಷರು ವೇದಿಕೆ ಯಲ್ಲಿದ್ದರು. ನಂತರ ಇಡೀ ದಿನ ನಡೆಯುವ ಸಮ್ಮೇಳನದಲ್ಲಿ ಕೊಪ್ಪಳ ಜಿಲ್ಲೆಯ ವಿವಿಧ ಕಲಾವಿದರಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು. ಇದೇ ವೇಳೆ ವಿವಿಧ ಸಾಧಕರನ್ನು ಸನ್ಮಾನಿಸಲಾಯಿತು.ಇದಕ್ಕೂ ಮುನ್ನ ಸಾಯಿಬಾಬಾ ದೇವಸ್ಥಾನದಿಂದ ನಿಮಿಷಾಂಬ ದೇವಸ್ಥಾನ ವರೆಗೆ ಸಮ್ಮೇಳ ನಾಧ್ಯಕ್ಷರ ಮೆರವಣಿಗೆ ನಡೆಯಿತು. ಜಿಲ್ಲಾ ಪ್ರಧಾನ ಕಾರ್ಯದರ್ಶಿ ಡಾ. ಮಹಾಂತೇಶ ನೇಲಾಗಣಿ ಹಾಗೂ ಶಿವ ಪ್ರಸಾದ್ ಹಾದಿಮನಿ ಅವರು ನಿರೂಪಿಸಿದರು.

# ಗಾಂಜಾ ಮಾರಾಟಗಾರರ ಬಂಧನ

• ಮಲ್ಲಮ್ಮ ನುಡಿ ವಾರ್ತೆ ಹುಣಸೂರು

ನಗರ ಪೊಲೀಸ್ ಠಾಣೆ ಯ ನೂತನ ಇನ್ಸ್ಪೆಕ್ಟರ್ ಶ್ರೀ ಶಿವಮಾಧಯ್ಯರವರ ನೇತೃತ್ವದಲ್ಲಿ ರತ್ನಪುರಿರಸ್ತೆಯಲ್ಲಿ , ಖಚಿತ ಮಾಹಿತಿ ಮೇರೆಗೆ ದಾಳಿ ಮಾಡಿ ಗಾಂಜಾ ಮಾರಾಟ ಮಾಡಲು ಬೈಕಿನಲ್ಲಿಸಾಗಿಸುತ್ತಿದ್ದ ಸುಮಾರು 350 ಗ್ರಾಂ ತೂಕದ ಒಣ ಗಾಂಜಾ ಸೊಪ್ಪನ್ನು ಮತ್ತು ಸಾಗಿಸಲು ಬಳಸುತ್ತಿದ್ದ ಓಂದು ಕೆ.ಡಿ.ಟಂ. ಡ್ಯೂಕ್ ಬೈಕನ್ನು ಹಾಗೂ ಓರ್ವ ಯುವಕನನ್ನು ಹುಣಸೂರು ಟೌನ್ ಪೊಲೀಸರು ವಶಕ್ಕೆ ಪಡೆದುಕೊಂಡು ಸದರಿಯವರ ಮೇಲೆ ಓಆಕಖ ಕಾಯ್ದೆ ಅಡಿಯಲ್ಲಿ ಈಖಖ ಪ್ರಕರಣ ದಾಖಲಿಸಿ ತನಿಖೆ ಕೈ ಗೊಂಡಿದ್ದಾರೆ ದಾಳಿಯಲ್ಲಿ ಹುಣಸೂರು ಠಾಣೆಯ ಹೆಚ್.ಸಿ.130 ಅರುಣ್ ಹೆಚ್.ಸಿ–166 ರಾಜರತ್ನಂವಿ. ಹೆಚ್ ಸಿ 133 ಮಂಜುನಾಥ್ , ಪಿಸಿ–363ಇರ್ಫಾನ್, ಪಿಸಿ – 525 ಮಹಿಂದ್ರ, ಪಿಸಿ–128 ಮಂಜುನಾಥ್, ಪಿಸಿ–502 ದಿಲೀಫ್, ಪಿಸಿ–120 ಚಂದು.ಪಿಸಿ–ಪಿಸಿ–190 ರವಿಕುಮಾರ್, ರವರು ದಾಳಿಯಲ್ಲಿ ಭಾಗವಹಿಸಿದ್ದು ನೂತನ ಇನ್ಸ್ಪೆಕ್ಟರ್ ಶಿವ ಮಾಧಯ್ಯ ರವರು ಮಾದಕ ವಸ್ತುಗಳ ವ್ಯಸನಿಗಳು ಹಾಗೂ ಮಾರಾಟ ಗಾರರ ಮೇಲೆ ಬಿಸಿ ಮುಟ್ಟಿಸಿ ಕಟ್ಟು ನಿಟ್ಟಿನ ಕ್ರಮ ಕೈಗೊಂಡಿ ದ್ಧಾರೆ. ಹಾಗೂ ಹುಣಸೂರು ಟೌನ್ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಗಾಂಜಾ ಮಾರಾಟ ಮತ್ತು ಸೇವನೆ ಪ್ರಕರಣಗಳು ಕಂಡುಬಂದಲ್ಲಿ ಸಾರ್ವಜನಿಕರು ಪೊಲೀಸರಿಗೆ ಮಾಹಿತಿ ನೀಡುವಂತೆ ಮನವಿ ಮಾಡಿರುತ್ತಾರೆ.

# ವಿಶೇಷ ಮತದಾರರ ಪಟ್ಟಿಯ ಪರಿಷ್ಕರಣೆ ಕುರಿತು ತರಬೇತಿ ಕಾರ್ಯಾಗಾರ

• ಮಲ್ಲಮ್ಮ ನುಡಿ ವಾರ್ತೆ ಲಿಂಗಸಗೂರ



ತಾಲೂಕಿನ 57–ಲಿಂಗಸೂಗೂರು ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ವಿಶೇಷ ಮತದಾರರ ಪಟ್ಟಿಯ ಪರಿಷ್ಕರಣೆ (Special Intensive Revision - SIR) ಕಾರ್ಯಕ್ರಮದ ಅಂಗವಾಗಿ ಎಲ್ಲಾ ಃಐಔ, ಃಐಔ ಮೇಲ್ವಿಚಾರಕರಿಗೆ ತರಬೇತಿ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಯಿತು.

ಕಾರ್ಯಾಗಾರದಲ್ಲಿ ಮತದಾರರ ಗಣತಿ ನಮೂನೆಗಳನ್ನು (Enumeration Forms) ಸರಿಯಾಗಿ ಭರ್ತಿ ಮಾಡುವ ವಿಧಾನ, ಮೃತ ಮತದಾರರ ಹೆಸರುಗಳನ್ನು ಮತದಾರರ ಪಟ್ಟಿಯಿಂದ ತೆಗೆದುಹಾಕುವುದು, ಶಾಶ್ವತವಾಗಿ ಬೇರೆ ಸ್ಥಳಕ್ಕೆ ಸ್ಥಳಾಂತರಗೊಂಡಿರುವ ಮತದಾರರ ವಿವರಗಳನ್ನು ದಾಖಲಿಸುವುದು, ಗೈರುಹಾಜರಾಗಿರುವ ಮತದಾರರ ಮಾಹಿತಿಯನ್ನು ಪರಿಶೀಲಿಸುವುದು ಸೇರಿದಂತೆ ಮತದಾರರ ಪಟ್ಟಿಯ ಶುದ್ಧೀಕರಣಕ್ಕೆ ಸಂಬಂಧಿಸಿದ ವಿವಿಧ ವಿಷಯಗಳ ಕುರಿತು ವಿವರವಾದ ಮಾಹಿತಿ ನೀಡಲಾಯಿತು.

ಕಾರ್ಯಾಗಾರದಲ್ಲಿ ಭಾಗವಹಿಸಿದ್ದ ಎಲ್ಲಾ ಸಿಬ್ಬಂದಿಗಳು ಅಧಿಕಾರಿಗಳು ತಮ್ಮ ಸಂದೇಹಗಳನ್ನು ನಿವಾರಿಸಿಕೊಳ್ಳುವ ಅವಕಾಶವನ್ನು ಪಡೆದುಕೊಂಡರು. ಮತದಾರರ ಪಟ್ಟಿಯ ಪರಿಷ್ಕರಣೆ ಪ್ರಕ್ರಿಯೆಯನ್ನು ಯಶಸ್ವಿಯಾಗಿ ಹಾಗೂ ಪಾರದರ್ಶಕವಾಗಿ ನಡೆಸಲು ಎಲ್ಲರ ಸಹಕಾರ ಅಗತ್ಯವಾಗಿದೆ ಎಂದು ತಿಳಿಸಲಾಯಿತು.

ಈ ಕುರಿತು ಮಾತನಾಡಿದ ಮಾನ್ಯ ಸಹಾಯಕ ಆಯುಕ್ತರು ಮತ್ತು ಮಾನ್ಯ ತಹಸೀಲ್ದಾರ ಅವರು, "ಮತದಾರರ ಪಟ್ಟಿಯನ್ನು ಶುದ್ಧ, ನಿಖರ ಹಾಗೂ ಪಾರದರ್ಶಕವಾಗಿಸಲು ವಿಶೇಷ ಮತದಾರರ ಪಟ್ಟಿಯ ಪರಿಷ್ಕರಣೆ ಕಾರ್ಯ ಕೈಗೊಳ್ಳಲಾಗಿದೆ. ಬೂತ್ ಮಟ್ಟದ ಅಧಿಕಾರಿಗಳು (BLOs) ಮನೆಗಳಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಸಾರ್ವಜನಿಕರು ಅಗತ್ಯ ಮಾಹಿತಿಯನ್ನು ಒದಗಿಸಿ ಸಂಪೂರ್ಣ ಸಹಕಾರ ನೀಡಬೇಕು. ಮೃತ, ಶಾಶ್ವತವಾಗಿ ಸ್ಥಳಾಂತರಗೊಂಡ ಹಾಗೂ ಅನರ್ಹ ಮತದಾರರ ಹೆಸರುಗಳನ್ನು ಪಟ್ಟಿಯಿಂದ ತೆಗೆದುಹಾಕುವ ಮೂಲಕ ನಿಖರ ಮತದಾರರ ಪಟ್ಟಿಯನ್ನು ಸಿದ್ಧಪಡಿಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ" ಎಂದು ಹೇಳಿದರು.

ಲಿಂಗಸೂಗೂರು ವಿಧಾನಸಭಾ ಕ್ಷೇತ್ರದ ಎಲ್ಲಾ ನಾಗರಿಕರು ಃಐಔಗಳೊಂದಿಗೆ ಸಹಕರಿಸಿ ಶುದ್ಧ ಹಾಗೂ ವಿಶ್ವಾಸಾರ್ಹ ಮತದಾರರ ಪಟ್ಟಿಯನ್ನು ರೂಪಿಸುವಲ್ಲಿ ಕೈಜೋಡಿಸುವಂತೆ ತಹಶೀಲ್ದಾರ್ ಅವರು ಮನವಿ ಮಾಡಿದರು.

# ಶಹರೆಗೆ ಎರಡು ಬಾರಿ ಹಾನಿ: ಭಕ್ತರಲ್ಲಿ ಹೆಚ್ಚಿದ ಆತಂಕ

• ಮಲ್ಲಮ್ಮ ನುಡಿ ವಾರ್ತೆಮುದಗಲ್

ಮುದಗಲ್ ಪಟ್ಟಣದಲ್ಲಿ ಭಾವೈಕ್ಯತೆಯ ಸಂಕೇತವಾಗಿ ಆಚರಿಸಲ್ಪಡುವ ಮೋಹರಂ ಹಬ್ಬದ ವೇಳೆ ಈ ಬಾರಿ ನಡೆದ ಒಂದು ಬೆಳವಣಿಗೆ ಭಕ್ತರಲ್ಲಿ ವ್ಯಾಪಕ ಚರ್ಚೆಗೆ ಕಾರಣವಾಗಿದೆ. ಕಿಲ್ಲಾದ ಹಜರತ್ ಹುಸೇನ್ ಆಲಂಗೆ ಅಲಂಕರಿಸುವ ಪ್ರಮುಖ ಶಹರೆ (ಹೂವಿನ ಅಲಂಕಾರ) ಎರಡು ಬಾರಿ ಹಾನಿಗೊಳಗಾದ ಘಟನೆ ಹಲವು ಪ್ರಶ್ನೆಗಳನ್ನು ಹುಟ್ಟುಹಾಕಿದೆ.

ಮುದಗಲ್‌ನ ಮೋಹರಂ ಆಚರಣೆ ಹಿಂದೂ–ಮುಸ್ಲಿಂ ಸಮುದಾಯಗಳ ಸೌಹಾರ್ದದ ಪ್ರತೀಕವೆಂದು ಪರಿಗಣಿಸಲಾಗುತ್ತದೆ. ಹತ್ತು ದಿನಗಳ ಕಾಲ ವಿವಿಧ ಧಾರ್ಮಿಕ ವಿಧಿವಿಧಾನಗಳೊಂದಿಗೆ ನಡೆಯುವ ಈ ಆಚರಣೆಯಲ್ಲಿ ಸಾವಿರಾರು ಭಕ್ತರು ಪಾಲ್ಗೊಳ್ಳುತ್ತಾರೆ. ಕಿಲ್ಲಾದಲ್ಲಿರುವ ಹಜರತ್ ಹುಸೇನ್ ಆಲಂಗೆ ಈ ಭಾಗದ ಜನರು ಅಪಾರ ಭಕ್ತಿಭಾವ ಹಾಗೂ ನಂಬಿಕೆಯನ್ನು ಹೊಂದಿದ್ದಾರೆ.

ಶುಕ್ರವಾರ ನಡೆದ ಅಂತಿಮ ದಿನದ ಸವಾರಿಗೆ ಆಲಂ ಹೊರಡಿಸುವ ವೇಳೆ ಶಹರೆ ಹಾನಿಗೊಳಗಾದ ಕಾರಣ



ಮೆರವಣಿಗೆ ಸುಮಾರು ಎರಡು–ಮೂರು ಗಂಟೆಗಳ ಕಾಲ ವಿಳಂಬವಾಯಿತು. ಇದೇ ವೇಳೆ ಪಟ್ಟಣದಲ್ಲಿ ಸುರಿದ ಮಳೆಯಿಂದ ಸವಾರಿಯನ್ನು ವೀಕ್ಷಿಸಲು ಬಂದ ಭಕ್ತರು ತೊಂದರೆ ಅನುಭವಿಸಿದರು. ಈ ಬೆಳವಣಿಗೆಗಳ ಹಿನ್ನೆಲೆಯಲ್ಲಿ ಕೆಲ ಭಕ್ತರು ಇದನ್ನು ಶುಭ–ಅಶುಭದ ಸಂಕೇತವಾಗಿ ವ್ಯಾಖ್ಯಾನಿಸುತ್ತಿದ್ದರೆ, ಇನ್ನೂ ಕೆಲವರು ಇದು ಕೇವಲ ಆಕಸ್ಮಿಕ ಘಟನೆ ಎಂದು ಅಭಿಪ್ರಾಯ ವ್ಯಕ್ತಪಡಿಸುತ್ತಿದ್ದಾರೆ. ಸಾಮಾಜಿಕ ಜಾಲತಾಣಗಳಲ್ಲಿಯೂ ಈ ಕುರಿತು ವಿವಿಧ ರೀತಿಯ ಚರ್ಚೆಗಳು ನಡೆಯುತ್ತಿವೆ.

ಆದಾಗ್ಯೂ, ಇಂತಹ ಘಟನೆಗಳನ್ನು ಯಾವುದೇ ದೃಢವಾದ ಸಾಕ್ಷ್ಯವಿಲ್ಲದೆ ಅಲೌಕಿಕ ಕಾರಣಗಳೊಂದಿಗೆ ಸಂಪರ್ಕಿಸುವುದು ಸೂಕ್ತವಲ್ಲ ಎಂದು ಸಾರ್ವಜನಿಕ ವಲಯದವರು ಅಭಿಪ್ರಾಯಪಡುತ್ತಿದ್ದಾರೆ.

ನೋಟೀಸ್ ಜಾರಿ

ಕಮೀಟಿ ಆಲಂಬರ್ದಾರ್ ರವರಿಗೆ ಕಿಲ್ಲಾದಲ್ಲಿನ ಹಜರತ್ ಹುಸೇನ ಅಶೂರಖಾನ ಶೋಕಾಸ್ ನೋಟೀಸ್ ನೀಡಿದೆ. ಲಕ್ಷಾಂತರ ಭಕ್ತರ ಆರಾಧ್ಯವಾಗಿರುವ ಆಲಂ ಸವಾರಿ ವೇಳೆ ಆಲಂಬರ್ದಾರ್ (ಮುಜಾವರ) ನಿರ್ಲಕ್ಷದ ಕುರಿತು ವ್ಯಾಪಕ ಮೌಖಿಕ ದೂರುಗಳ ಬಂದಿರುವ ಹಿನ್ನೆಲೆಯಲ್ಲಿ ತಕ್ಷಣ ಶೋಕಾಸ್ ನೋಟೀಸ್ ಜಾರಿ ಮಾಡಲಾಗಿದೆ ಎಂದು ದರ್ಗಾ ಕಮೀಟಿ ಅಧ್ಯಕ್ಷ ಅಮೀರ್ ಬೇಗ್ ಉಸ್ತಾದ್ ಮತ್ತು ಕಾರ್ಯದರ್ಶಿ ಮಹ್ಮದ ಸಾದೀಕ್ ಅಲಿ ತಿಳಿಸಿದ್ದಾರೆ.

ಧಾರ್ಮಿಕ ಆಚರಣೆಗಳ ಸಂದರ್ಭದಲ್ಲಿ ವದಂತಿಗಳಿಗೆ ಅವಕಾಶ ನೀಡದೆ, ಭಾವೈಕ್ಯತೆ ಮತ್ತು ಶಾಂತಿಯನ್ನು ಕಾಪಾಡಿಕೊಳ್ಳುವುದು ಅಗತ್ಯ ಎಂಬುದು ಸ್ಥಳೀಯ ಪ್ರಗತಿಪರರ ಅಭಿಪ್ರಾಯವಾಗಿದೆ.

# ಮೂರು ನೌಕರರರ ಮೇಲಿನ ದಾಳಿ ತಡೆದ ಹೆಮ್ಮೆಯಿದೆ

• ಮಲ್ಲಮ್ಮ ನುಡಿ ವಾರ್ತೆ ಪಿರಿಯಾಪಟ್ಟಣ



ನನ್ನ ಸೇವಾ ಅವಧಿಯಲ್ಲಿ ಮೂರು ನೌಕರರ ಮೇಲೆ ನಡೆಸಲಾಗುತ್ತಿದ್ದ ದಾಳಿ ಸಂದರ್ಭದಲ್ಲಿ ತಡೆದು ಅನಾಹುತ ಆಗದಂತೆ ಪಾರು ಮಾಡಿದ ಹೆಮ್ಮೆ ನನಗಿದೆ ಎಂದು ನೌಕರ ಸಿ ರಾಜು ಸಂತಸ ವ್ಯಕ್ತಪಡಿಸಿದರು.

ಪುರಸಭಾ ಕಚೇರಿ ಸಭಾಂಗಣದಲ್ಲಿ ಸೋಮವಾರ ನಡೆದ ನೌಕರರಾದ ರಾಜು ಬೀಳ್ಕೊಡುಗೆ ಸಮಾರಂಭ ಕಾರ್ಯಕ್ರಮದಲ್ಲಿ ಅಭಿನಂದನೆ ಸ್ವೀಕರಿಸಿ ಮಾತನಾಡಿದರು.

ಸರ್ಕಾರದ ನಿಯಮದ ಪ್ರಕಾರ ಸೇವಾ ವೃತ್ತಿಯಿಂದ ನಿವೃತ್ತಿಯಾಗುತ್ತಿದ್ದು ನನ್ನ ಸೇವಾ ಸಂದರ್ಭದಲ್ಲಿ ಕಳಂಕ ಇಲ್ಲದಂತೆ ಪ್ರಾಮಾಣಿಕ ಸೇವೆ ಸಲ್ಲಿಸಿರುವುದು ನನಗೆ ತೃಪ್ತಿ ತಂದಿದೆ.

ಎಲ್ಲರೂ ನನ್ನ ನಿವೃತ್ತಿ ಬೀಳ್ಕೊಡುಗೆ ಸಮಾರಂಭದಲ್ಲಿ ಪಾಲ್ಗೊಂಡು ನನ್ನ ನಿವೃತ್ತಿ ಜೀವನ ಸುಖಕರವಾಗಲಿ ಎಂದು ಹಾರೈಸಿದ್ದಾರೆ ಅವರಿಗೆ ಎಂದು ಆಭಾರಿಯಾಗಿದ್ದೇನೆ ಎಂದು ವಿವರಿಸಿದ್ದರು.

ಈ ಸಂದರ್ಭದಲ್ಲಿ ಮುಖ್ಯ ಅಧಿಕಾರಿ ಎಚ್ ಪಿ ಮಧು. ಇಲ್ಲಿನ ನೌಕರರಾದ ಶರ್ಮಿಳ. ಮಹದೇವ್. ಗಿರೀಶ್. ಚಂದನ್ ಕುಮಾರ್. ಮಹೇಶ್ ಸೇರಿದಂತೆ ಎಲ್ಲಾ ಸಿಬ್ಬಂದಿಗಳು ಹಾಗೂ ರಾಜು ಕುಟುಂಬದ ಸದಸ್ಯರು ಪೌರಕಾರ್ಮಿಕರು ಗೆಳೆಯರು ಸೇರಿದಂತೆ ಮತ್ತಿತರರು ಹಾಜರಿದ್ದರು.

# ಮತದಾರರು ಬೂತ್ ಮಟ್ಟದ ಅಧಿಕಾರಿಗಳಿಗೆ ಸಂಪೂರ್ಣ ಸಹಕಾರ ನೀಡಿ:ಪೂವಿತಾ ಎಸ್. ಮನವಿ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಜಿಲ್ಲೆಯ ಎಲ್ಲಾ ಅರ್ಹ ಮತದಾರರು ಎಸ್‌ಐಆರ್2026ರ ಕಾರ್ಯಕ್ರಮದಲ್ಲಿ ಸಕ್ರಿಯವಾಗಿ ಭಾಗವಹಿಸಿ ಬೂತ್ ಮಟ್ಟದ ಅಧಿಕಾರಿಗಳಿಗೆ ಸಂಪೂರ್ಣ ಸಹಕಾರ ನೀಡುವ ಮೂಲಕ ತಮ್ಮ ಮತ್ತು ತಮ್ಮ ಕುಟುಂಬದ ಎಲ್ಲ ಅರ್ಹ ಸದಸ್ಯರ ಹೆಸರುಗಳು ಮತದಾರರ ಪಟ್ಟಿಯಲ್ಲಿ ಸೇರ್ಪಡೆಯಾಗಿರುವುದನ್ನು ಖಚಿತಪಡಿಸಿಕೊಳ್ಳಬೇಕು ಎಂದು ಜಿಲ್ಲಾ ಚುನಾವಣಾಧಿಕಾರಿಗಳು ಹಾಗೂ ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್. ಅವರು ತಿಳಿಸಿದ್ದಾರೆ.

ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಮತದಾರರ ಪಟ್ಟಿಯನ್ನು ಸಮಗ್ರ, ನಿಖರ ಹಾಗೂ ದೋಷರಹಿತಗೊಳಿಸುವ ಉದ್ದೇಶದಿಂದ ವಿಶೇಷ ತೀವ್ರ ಪರಿಷ್ಕರಣೆ–2026ರ ಕಾರ್ಯಕ್ರಮವನ್ನು ರಾಜ್ಯಾದ್ಯಂತ ಕೈಗೊಳ್ಳಲಾಗಿದೆ. ಜೂನ್ 30ರಿಂದ ಜುಲೈ 29ರವರೆಗೆ ಬೂತ್ ಮಟ್ಟದ ಅಧಿಕಾರಿಗಳು ಮನೆ–ಮನೆಗೆ ಭೇಟಿ ನೀಡಿ ಮತದಾರರಿಗೆ ಎನುಮರೇಷನ್ ಫಾರಂ ವಿತರಿಸಿ, ನಮೂನೆ ಭರ್ತಿ ಮಾಡುವ ಕುರಿತು ಅಗತ್ಯ ಮಾರ್ಗದರ್ಶನ ನೀಡಲಿದ್ದಾರೆ.



ಈ ಪರಿಷ್ಕರಣೆಯ ಅರ್ಹತಾ ದಿನಾಂಕ 01 ಅಕ್ಟೋಬರ್ 2026 ಆಗಿರುತ್ತದೆ. ಈ ಕಾರ್ಯಕ್ರಮದ ಅಂಗವಾಗಿ ಜೂನ್ 30 ರಿಂದ ಜುಲೈ 29ರವರೆಗೆ ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಒ) ಮನೆ–ಮನೆಗೆ ಭೇಟಿ ನೀಡಿ ಮತದಾರರಿಗೆ ಎನುಮರೇಷನ್ ಫಾರಂ ವಿತರಿಸಿ, ನಮೂನೆ ಭರ್ತಿ ಮಾಡುವ ಕುರಿತು ಅಗತ್ಯ ಮಾರ್ಗದರ್ಶನ ನೀಡಲಿದ್ದಾರೆ ಹಾಗೂ ಭರ್ತಿ ಮಾಡಿದ ನಮೂನೆಗಳನ್ನು ಸ್ವೀಕರಿಸಿ ಸ್ವೀಕೃತಿ ರಸೀದಿಯನ್ನು ನೀಡಲಿದ್ದಾರೆ.

ಕಾರ್ಯಕ್ರಮದ ವೇಳಾಪಟ್ಟಿ: ಜೂನ್ 30ರಿಂದ ಜುಲೈ 29ರವರೆಗೆ ಮನೆ–ಮನೆಗೆ ಬಿಎಲ್‌ಒಗಳ ಭೇಟಿ ನೀಡಲಿದ್ದಾರೆ. ಆಗಸ್ಟ್ 05ರಂದು ಕರಡು ಮತದಾರರ ಪಟ್ಟಿ ಪ್ರಕಟಣೆ ಮಾಡಲಾಗುವುದು. ಆಗಸ್ಟ್ 05ರಿಂದ ಸೆಪ್ಟೆಂಬರ್ 04ರವರೆಗೆ ಹಕ್ಕು ಮತ್ತು ಆಕ್ಷೇಪಣೆ ಸಲ್ಲಿಕೆಗೆ ಅವಧಿ ನೀಡಲಾಗಿದೆ. ಆಗಸ್ಟ್ 05ರಿಂದ ಅಕ್ಟೋಬರ್ 04ರವರೆಗೆ ಹಕ್ಕು ಮತ್ತು ಆಕ್ಷೇಪಣೆಗಳ ವಿಲೇವಾರಿ ಮಾಡಲಾಗುವುದು. ಅಕ್ಟೋಬರ್ 07ರಂದು ಅಂತಿಮ ಮತದಾರರ ಪಟ್ಟಿ ಪ್ರಕಟಣೆ ಮಾಡಲಾಗುವುದು.

ಮತದಾರರು ಮಾಡಬೇಕಾದದ್ದು: ಬಿಎಲ್‌ಒಗಳಿಗೆ ಸಂಪೂರ್ಣ ಸಹಕಾರ ನೀಡಬೇಕು. ಇಸಿಐ ನೆಟ್ ನಲಿ ಬಿಎಲ್‌ಒಗಳ ಮಾಹಿತಿಯನ್ನು ಪಡೆಯಬಹುದಾಗಿದೆ.ಎನುಮರೇಷನ್ ಫಾರಂ ಅನ್ನು ಸಂಪೂರ್ಣವಾಗಿ ಹಾಗೂ ನಿಖರವಾಗಿ ಭರ್ತಿ ಮಾಡಿ ಸಲ್ಲಿಸಬೇಕು. ಇತ್ತೀಚಿನ ಬಣ್ಣದ ಭಾವಚಿತ್ರವನ್ನು ಅಂಟಿಸಬಹುದು (ಕಡ್ಡಾಯವಲ್ಲ). ಭರ್ತಿ ಮಾಡಿದ ನಮೂನೆಯನ್ನು ಬಿಎಲ್‌ಒ ಅವರಿಗೆ ಸಲ್ಲಿಸಿ ಸ್ವೀಕೃತಿ ರಸೀದಿಯನ್ನು ಪಡೆಯಬೇಕು ಅಥವಾ ಆನ್‌ಲೈನ್ ಮೂಲಕ Àhttps://voters.eci.gov.in/ ನಲ್ಲಿ ಭರ್ತಿ ಮಾಡಿ ಸಲ್ಲಿಸಬಹುದು. ಆಗಸ್ಟ್ 05ರಂದು ಪ್ರಕಟವಾಗುವ ಕರಡು ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರು ಇರುವ ಕುರಿತು https://voters.eci.gov.in or https://ceo.karnataka.gov.in ನಲ್ಲಿ ಅಥವಾ ಸಂಬಂಧಪಟ್ಟ ಬಿಎಲ್‌ಒಗಳ ಬಳಿ ಪರಿಶೀಲಿಸಿಕೊಳ್ಳಬಹುದು.

ಹೆಸರು ಸೇರ್ಪಡೆ, ತಿದ್ದುಪಡಿ ಹಾಗೂ ಇತರೆ ಅರ್ಜಿಗಳು: ನಮೂನೆ–6 ಹೊಸ ಮತದಾರರ ನೋಂದಣಿ. ನಮೂನೆ–6ಎ ವಿದೇಶದಲ್ಲಿರುವ ಭಾರತೀಯ ಮತದಾರರ ನೋಂದಣಿ. ನಮೂನೆ–7 ಮತದಾರರ ಹೆಸರು ಅಳಿಸುವಿಕೆ. ನಮೂನೆ–8 ವಿವರಗಳ ತಿದ್ದುಪಡಿ, ವಿಳಾಸ ಬದಲಾವಣೆ, ಎಪಿಕ್ ಬದಲಾವಣೆ ಹಾಗೂ ಪಿಡ್ಲೂಡಿ ಗುರುತಿಸುವಿಕೆಯನ್ನು ಮಾಡಲಾಗುವುದು. ಅರ್ಜಿಗಳನ್ನು ಸಂಬಂಧಿಸಿದ ಬಿಎಲ್‌ಒ ಮುಖಾಂತರ ಅಥವಾ ಇಸಿಐ ನೆಟ್ ಮೊಬೈಲ್ ಪ್ ಮತ್ತು https://voters.eci.gov.in/ ಮೂಲಕ ಆನ್‌ಲೈನ್‌ನಲ್ಲಿಯೂ ಅರ್ಜಿ ಸಲ್ಲಿಸಬಹುದಾಗಿದೆ.

ರಾಯಚೂರು ಜಿಲ್ಲೆಯ ಎಲ್ಲಾ ಅರ್ಹ ಮತದಾರರು (ನಾಗರಿಕರು) ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್–2026) ಕಾರ್ಯಕ್ರಮದಲ್ಲಿ ಸಕ್ರಿಯವಾಗಿ ಭಾಗವಹಿಸಿ, ಬೂತ್ ಮಟ್ಟದ ಅಧಿಕಾರಿಗಳಿಗೆ ಸಂಪೂರ್ಣ ಸಹಕಾರ ನೀಡುವಂತೆ ಹಾಗೂ ತಮ್ಮ ಮತ್ತು ತಮ್ಮ ಕುಟುಂಬದ ಎಲ್ಲ ಅರ್ಹ ಸದಸ್ಯರ ಹೆಸರುಗಳು ಮತದಾರರ ಪಟ್ಟಿಯಲ್ಲಿ ಸೇರ್ಪಡೆಯಾಗಿರುವುದನ್ನು ಖಚಿತಪಡಿಸಿಕೊಳ್ಳಬೇಕು.

# ಲಸಿಕೆ ಹಾಕುವ ಮೂಲಕ ಪಲ್ಸ್ ಪೋಲಿಯೊ ಕಾರ್ಯಕ್ರಮ ಉದ್ಘಾಟನೆ



• ಮಲ್ಲಮ್ಮ ನುಡಿ ವಾರ್ತೆ ಲಿಂಗಸಗೂರ

ಪಟ್ಟಣದ ಸಾಯಿಬಾಬಾ ಮಂದಿರ ಬೂತ್ ನಲ್ಲಿ ರಾಯಚೂರು ಅಂಗವಿಕಲರ ಜಿಲ್ಲಾಧಿಕಾರಿ ಸರಸ್ವತಿ ಅವರು ಲಸಿಕೆ ಹಾಕುವ ಮೂಲಕ ಪಲ್ಸ್ ಪೋಲಿಯೋ ಕಾರ್ಯಕ್ರಮ ಉದ್ಘಾಟಿಸಿದರು. ನಂತರ ಮಾತನಾಡಿ ತಾಲೂಕಿನಲ್ಲಿ 51852 ಮಕ್ಕಳಿಗೆ ಪೋಲಿಯೋ ಗುರಿ ಇದೆ.ಲಿಂಗಸುಗೂರ ಪಟ್ಟಣ ಪ್ರದೇಶದಲ್ಲಿ 6905 ಮಕ್ಕಳಿಗೆ ಲಸಿಕೆ ನೀಡಲು ಒ24 ಬೂತ್ ಸ್ಥಾಪಿಸಲಾಗಿದೆ.ಬಸ್ ನಿಲ್ದಾಣ,ತಾಲೂಕು ಆಸ್ಪತ್ರೆಯಲ್ಲಿ ಹೆಚ್ಚು ವರಿ ಬೂತ್ ಇವೆ.ಪಾಲಕರು ತಮ್ಮ ಎಲ್ಲ ಐದು ವರ್ಷದೊಳಗಿನ ಮಕ್ಕಳಿಗೆ ತಪ್ಪದೇ ಎರಡು ಹನಿ ಪೋಲಿಯೋ ಲಸಿಕೆ ಹಾಕಿಸಲು ಮನವಿ ಮಾಡಿದರು.ಈಸಂದರ್ಭದಲ್ಲಿ ಮೇಲ್ವಿಚಾರಕಿ ಲಕ್ಷ್ಮೀ. ಎಸ್.ಹಣಗಿ , ಅಂಗನವಾಡಿ ಕಾರ್ಯಕರ್ತೆ . ನರ್ಸಿಂಗ್ ಕಾಲೇಜಿನ ವಿದ್ಯಾರ್ಥಿಗಳು ತಾಯಂದಿರು ಹಾಜರಿದ್ದರು.

# ಪದಾಧಿಕಾರಿಗಳ ಆಯ್ಕೆ



• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಮಹಾ ನಾಯಕ ಡಾ. ಬಿ.ಆರ್. ಅಂಬೇಡ್ಕರ್ ಸಂಘರ್ಷ ಸಮಿತಿಯ ಬಳ್ಳಾರಿ ಜಿಲ್ಲಾ ಘಟಕದ ನೂತನ ಪದಾಧಿಕಾರಿಗಳ ಆಯ್ಕೆ ಕಾರ್ಯಕ್ರಮ ಸೋಮವಾರ ನಗರದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ನಡೆಯಿತು.

ಕಾರ್ಯಕ್ರಮದಲ್ಲಿ ವ್ಯವಸ್ಥಾಪಕ ರಾಜ್ಯಾಧ್ಯಕ್ಷರು ಮಹೇಶ್ ಕುರ್ವಳ್ಳಿ ಮಾತನಾಡಿ, ಸಮಾಜದ ಶೋಷಿತ, ದಲಿತ ಹಾಗೂ ಹಿಂದುಳಿದ ವರ್ಗಗಳ ಹಕ್ಕುಗಳ ರಕ್ಷಣೆಗಾಗಿ ಸಂಘಟನೆಯು ನಿರಂತರವಾಗಿ ಹೋರಾಟ ನಡೆಸುತ್ತಿದ್ದು, ಸಂಘಟನೆಯನ್ನು ಗ್ರಾಮ ಮಟ್ಟದಿಂದ ಜಿಲ್ಲಾ ಮಟ್ಟದವರೆಗೆ ಮತ್ತಷ್ಟು ಬಲಿಷ್ಠಗೊಳಿಸುವ ಅಗತ್ಯವಿದೆ ಎಂದು ತಿಳಿಸಿದರು.

ಸಂಘಟನೆಯ ತತ್ವ, ಉದ್ದೇಶ ಹಾಗೂ ಡಾ. ಬಿ.ಆರ್. ಅಂಬೇಡ್ಕರ್ ಅವರ ಸಮಾನತೆ, ಸಾಮಾಜಿಕ ನ್ಯಾಯ ಮತ್ತು ಸಂವಿಧಾನದ ಆಶಯಗಳನ್ನು ಜನರಿಗೆ ತಲುಪಿಸುವಲ್ಲಿ ನೂತನ ಪದಾಧಿಕಾರಿಗಳು ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಹೇಮಂತ್ ರಾಜ್ ಬಿ ಜಿಲ್ಲಾಧ್ಯಕ್ಷರು, ಎರ್ರಿಸ್ವಾಮಿ ಸಂಗನಕಲ್ಲು ಗೌರವಾಧ್ಯಕ್ಷರು, ಹೆಚ್ಚು ಎರಿಸ್ವಾಮಿ ಉಪಾಧ್ಯಕ್ಷರು, ರವಿ ಎ.ಕೆ ಪ್ರಧಾನ ಕಾರ್ಯದರ್ಶಿ, ದುರ್ಗೇಶ್ ಸಹ ಕಾರ್ಯದರ್ಶಿ, ಶಂಕರ್ ಸ್ವಾಮಿ ಎಸ್ ಎಚ್ ಡಿ ಖಜಾಂಚಿ , ಗ್ಯಾನಪ್ಪ,ರಮೇಶ,ಎಂ .ಎರೆಸ್ವಾಮಿ ,ಚಂದ್ರ,ಹುಲಹುಗಪ್ಪ ಇತರರನ್ನು ಸಂಘಟನಾ ಕಾರ್ಯದರ್ಶಿಗಳನ್ನಾಗಿ ಆಯ್ಕೆ ಮಾಡಲಾಗಿದೆ.ಬಳ್ಳಾರಿ ಜಿಲ್ಲಾ ಘಟಕದ ನೂತನ ಪದಾಧಿಕಾರಿಗಳನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು. ಆಯ್ಕೆಯಾದ ಪದಾಧಿಕಾರಿಗಳಿಗೆ ಮುಖಂಡರು ಅಭಿನಂದನೆ ಸಲ್ಲಿಸಿ, ಸಂಘಟನೆಯ ಬೆಳವಣಿಗೆಗೆ ಎಲ್ಲರೂ ಒಗ್ಗಟ್ಟಿನಿಂದ ಶ್ರಮಿಸುವಂತೆ ಶುಭ ಹಾರೈಸಿದರು.

ಕಾರ್ಯಕ್ರಮದಲ್ಲಿ ಸಂಘಟನೆಯ ರಾಜ್ಯ ಹಾಗೂ ಜಿಲ್ಲಾ ಮುಖಂಡರು, ವಿವಿಧ ತಾಲೂಕುಗಳ ಪದಾಧಿಕಾರಿಗಳು, ಕಾರ್ಯಕರ್ತರು ಮತ್ತು ಅಂಬೇಡ್ಕರ್ ಅಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

# ರಜಪೂತ್ ಅಭಿವೃದ್ಧಿ ಮಂಡಳಿ ಸ್ಥಾಪನೆಗೆ ಮನವಿ




• ಮಲ್ಲಮ್ಮ ನುಡಿ ವಾರ್ತೆಕಂಪ್ಲಿ

ಕಂಪ್ಲಿ ತಾಲೂಕು ರಜಪೂತ್ ಸಮಾಜದ ವತಿಯಿಂದ ತಹಶೀಲ್ದಾರ್ ಮಂಜುನಾಥ್ ನಾಯಕ್ ಅವರಿಗೆ ಮನವಿ ಸಲ್ಲಿಸಿದ ನಂತರ ಅಧ್ಯಕ್ಷರಾದ ಇಂದ್ರಜಿತ್ ಸಿಂಗ್ ಮಾತನಾಡಿ

ರಾಜ್ಯದಲ್ಲಿ ಲಕ್ಷಾಂತರ ಜನಸಂಖ್ಯೆ ಹೊಂದಿರುವ ರಜಪೂರ ಸಮಾಜವು ಆರ್ಥಿಕವಾಗಿ, ಶೈಕ್ಷಣೀಕವಾಗಿ ಹಾಗೂ ಉದ್ಯೋಗದ ರಂಗದಲ್ಲಿ ತೀವ್ರವಾಗಿ ಹಿಂದುಳಿದಿದೆ. ಯುವ ಪೀಳಿಗೆಗೆ ಸೂಕ್ತ ಪ್ರೋತ್ಸಾಹ ಮತ್ತು ಮಾರ್ಗದರ್ಶನ ಸಿಗದೆ ಸಮಾಜವು ಇಂದಿಗೂ ಮುಖ್ಯವಾಹಿನಿಗೆ ಬರಲು ಸಾಧ್ಯವಾಗುತ್ತಿಲ್ಲಾ. ಆದ್ದರಿಂದ ರಜಪೂತ ಸಮಾಜದ ಏಳಿಗೆಗಾಗಿ 'ರಜಪೂತ ಅಭಿವೃದ್ಧಿ ಮಂಡಳಿ' ಸ್ಥಾಪಿಸಲು ಸರ್ಕಾರದ ಮಟ್ಟದಲ್ಲಿ ಶಿಫಾರಸು ಮಾಡಬೇಕು ಎಂದು ಕಂಪ್ಲಿ ತಾಲೂಕು ರಜಪೂತ್ ಸಮಾಜ ವತಿಯಿಂದ ತಹಸೀಲ್ದಾರ್‌ಗೆ ಮನವಿ ಪತ್ರ ಸಲ್ಲಿಸಲಾಯಿತು.ಯಾದಗಿರಿ ಜಿಲ್ಲಾಡಳಿತದ ಉಸ್ತುವಾರಿಯಲ್ಲಿ ರಜಪೂತ ಸಮಾಜದ ಕೌಟುಂಬಿಕ ಸಮೀಕ್ಷೆ ಹಾಗೂ ಡಿಜಿಟಲ್ ನೋಂದಣಿ ಪ್ರಕ್ರಿಯೆಯೂ ಅತ್ಯಂತ ಯಶಸ್ವಿಯಾಗಿ ನಡೆದಿದ್ದು, ಸಮಗ್ರ ದತ್ತಾಂಶಗಳ ವರದಿಯು ಬೆಂಗಳೂರಿನಲ್ಲಿರುವ ಹಿಂದುಳಿದ ವರ್ಗಗಳ ಕಲ್ಯಾಣ ಆಯೋಗದ ಪರಿಶೀಲನೆಯಲ್ಲಿದೆ.ಈ ಮಹತ್ವದ ಅಭಿಮಾನದ ಮೂಲಕ ಇಡಿ ರಾಜ್ಯದ ರಜಪೂತ ಸಮಾಜದ ಬಂದುಗಳು ಒಕ್ಕಾಟ್ಟಾಗಿದ್ದಾರೆ. ಸಮಾಜದ ಸಮಗ್ರ ಅಭಿವೃದ್ಧಿಗಾಗಿ ರಜಪೂತ ಅಭಿವೃದ್ಧಿ ಮಂಡಳಿಯನ್ನು ಸ್ಥಾಪಿಸಲು ಮುಖ್ಯಮಂತ್ರಿಗಳಿಗೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಸಚಿವರಿಗೆ ಮತ್ತು ಹಿಂದುಳಿದ ವರ್ಗಗಳ ಆಯೋಗಕ್ಕೆ ತಾಲೂಕು ಆಡಳಿತದ ಪರವಾಗಿಯೂ ತುರ್ತು ಶಿಫಾರಸು ಪತ್ರವನ್ನು ಕಳುಹಿಸಿಕೊಡಬೇಕು ಎಂದು ಒತ್ತಾಯಿಸಲಾಯಿತು.ಈ ಸಂದರ್ಭದಲ್ಲಿ ರಜಪೂತ ಸಮಾಜದ ತಾಲೂಕು ಅಧ್ಯಕ್ಷ ಇಂದ್ರಜಿತ್ ಸಿಂಗ್, ಲಕ್ಷ್ಮಣ ಸಿಂಗ್, ತುಕಾರಾಂ ಸಿಂಗ್, ವಿಶ್ವನಾಥ್ ಸಿಂಗ್, ಜಮಾನ ಸಿಂಗ್, ಪೃಥ್ವಿರಾಜ್ ಸಿಂಗ್, ವಿನಯ್ ಸಿಂಗ್, ಮನ್ ಸಿಂಗ್, ಗಣಪತಿ ಸಿಂಗ್, ಆನ್ ಸಿಂಗ್, ಸೇರಿದಂತೆ ಕಂಪ್ಲಿ ರಜಪೂತ ಸಮಾಜದ ಮುಖಂಡರು ಇದ್ದರು.

# ಪಲ್ಸ್ ಪೋಲಿಯೊ ಕಾರ್ಯಕ್ರಮ



• ಮಲ್ಲಮ್ಮ ನುಡಿ ವಾರ್ತೆಬಸವನಬಾಗೇವಾಡಿ

ಪಟ್ಟಣದ ಡಾ. ಇಕ್ಬಾಲ್ ನಗರದ ಶ್ರೀ ವಿವೇಕಾನಂದಹಿರಿಯ ಪ್ರಾಥಮಿಕಶಾಲೆಯಲ್ಲಿ ಭಾನುವಾರ ಪಲ್ಸ್ ಪೋಲಿಯೋಕಾರ್ಯಕ್ರಮದಲ್ಲಿ ಪಟ್ಟಣದತಾಲೂಕು ಗ್ಯಾರಂಟಿ ಯೋಜನೆಯ ಅನುಷ್ಠಾನ ಸಮಿತಿ ಅಧ್ಯಕ್ಷ ಮೈಬೂಬಎಲ್ ನಾಯ್ಕೋಡಿ ಭಾಗವಹಿಸಿ ಮಕ್ಕಳಿಗೆ ಪೋಲಿಯೋ ಲಸಿಕೆಯನ್ನುಹಾಕಿದರು. ಈಸಂದರ್ಭದಲ್ಲಿಮಾಜಿ ಪುರಸಭೆ ಸದಸ್ಯ ಲಾಲಸಾಬ ರಗಟಿ ಯುವ ಮುಖಂಡರಾದ ಆಬಿದ ತಾಂಬೋಳಿ, ಇಸಾಕ್ ನಾಯ್ಕೋಡಿ, ಜಂಗ್ಲಿಭಾಷಾ ವಾಲಿಕಾರ, ಅಕ್ಬರ್ ಸಾಬ ರಗಟಿ ಹಾಗೂ ವಾರ್ಡಿನಲ್ಲಿರುವ ತಾಯಂದಿರು ಹಾಗೂ ಸಿಬ್ಬಂದಿ ವರ್ಗದವರು ಹಾಗೂ ಮಕ್ಕಳು ಹಾಜರಿದ್ದರು.

# ಶಾಸಕ ಪ್ರದೀಪ್ ಈಶ್ವರ್ ನಮ್ಮ ನಾಯಕರ ಬಗ್ಗೆ ನಾಲಿಗೆ ಬಿಗಿ ಹಿಡಿದು ಮಾತನಾಡಲಿ: ಮೀನಳ್ಳಿ ತಾಯಣ್ಣ ಎಚ್ಚರಿಕೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಮಾಜಿ ಮುಖ್ಯಮಂತ್ರಿಗಳು, ಕೇಂದ್ರ ಸಚಿವರಾದ ಎಚ್.ಡಿ.ಕುಮಾರಸ್ವಾಮಿ ಅವರ ಬಗ್ಗೆ ಶಾಸಕ ಪ್ರದೀಪ್ ಈಶ್ವರ್ ಮನಬಂದಂತೆ ಮಾತನಾಡುತ್ತಿರುವುದು ಸರಿಯಲ್ಲ, ಶೆಡ್ಡು ಹೊಡೆಯುವುದು, ತೊಡೆ ತಟ್ಟುವುದು, ಮೀಸೆ ತಿರುವುದು ಒಬ್ಬ ಶಾಸಕರ ಸಂಸ್ಕೃತಿಯಲ್ಲ, ನಮ್ಮ ನಾಯಕರ ಬಗ್ಗೆ ನಾಲಿಗೆ ಹರಿಬಿಡುವುದನ್ನು ಕೂಡಲೇ ನಿಲ್ಲಿಸಬೇಕು, ಮುಂದುವರೆದರೆ ಹೋರಾಟದ ಸ್ವರೂಪ ಬದಲಾಗಲಿದೆ ಎಂದು ಜೆಡಿಎಸ್ ಜಿಲ್ಲಾಧ್ಯಕ್ಷ ಮೀನಳ್ಳಿ ತಾಯಣ್ಣ ಅವರು ಎಚ್ಚರಿಸಿದ್ದಾರೆ.

ಈ ಕುರಿತು ಹೇಳಿಕೆ ನೀಡಿದ ಅವರು, ನಮ್ಮ ಕುಮಾರಣ್ಣ ಅವರು ಇಲ್ಲಿವರೆಗೆ ರಾಜಕಾರಣದಲ್ಲಿ ಹಾಲಿನಷ್ಟೇ ಶುದ್ಧವಾಗಿದ್ದಾರೆ, ಇಂತಹ ನಮ್ಮ ನಾಯಕರ ಬಗ್ಗೆ ಶಾಸಕ ಪ್ರದೀಪ್ ಈಶ್ವರ್ ಕುಮಾರಣ್ಣ ಅವರ ಮೇಲೆ ಸುಳ್ಳು ಆರೋಪಗಳನ್ನು ಮಾಡುತ್ತಿರುವುದು ಸರಿಯಲ್ಲ, ಕುಮಾರಣ್ಣ ನನ್ನ ಏನೂ ಮಾಡೋಕೆ ಆಗೋಲ್ಲ,ಒಂದು ಕೂದಲು ಕಿತ್ತುಕೊಳ್ಳೋಕೆ ಆಗೋಲ್ಲ,ಹೆದರುವ ಮಾತೇ ಇಲ್ಲ ಅಂತಾರೆ, ನಮ್ಮ ಕುಮಾರಣ್ಣ ಅವರು ಒಂದು ಕರೆ ಕೊಟ್ಟರೆ, ಅದರ ಕಥೆನೇ ಬೇರೆಯಾಗಲಿದೆ,



ಇನ್ನಾದರೂ ಪ್ರದೀಪ್ ಈಶ್ವರ್ ನಮ್ಮ ನಾಯಕರ ಬಗ್ಗೆ ಮಾತನಾಡುವ ಮುನ್ನ ಆಲೋಚಿಸಿ ಮಾತನಾಡಬೇಕು, ನಾಲಿಗೆ ಹರಿಬಿಟ್ಟರೆ, ರಾಜ್ಯದ ನಮ್ಮ ಕಾರ್ಯಕರ್ತರೇ ಅವರಿಗೆ ತಕ್ಕ ಉತ್ತರ ನೀಡಲಿದ್ದಾರೆ ಎಂದು ಎಚ್ಚರಿಸಿದರು. ಎಚ್.ಡಿ.ಕುಮಾರಸ್ವಾಮಿ ಅವರು ಒಬ್ಬ ಮುಖ್ಯಮಂತ್ರಿಯಾಗಿದ್ದವರು, ಹಾಲಿ ಕೇಂದ್ರ ಸಚಿವರಿದ್ದಾರೆ, ಅವರ ಬಗ್ಗೆ ಹೇಗೆ ಮಾತನಾಡಬೇಕು ಎನ್ನುವ ಸೌಜನ್ಯವೂ ಅವರಲ್ಲಿಲ್ಲ, ಪ್ರದೀಪ್ ಈಶ್ವರ್ ಒಬ್ಬ ಶಾಸಕರಾ ಎನ್ನುವ ಅನುಮಾನ ಕ್ಷೇತ್ರದ ಜನರಿಗೆ ಹುಟ್ಟಿದೆ, ಇದು ಬಹುದೊಡ್ಡ ದುರಂತ. ಉದ್ಧಟತನದಿಂದ ಮಾತನಾಡುವುದು, ನಿಂದನೆ ಮಾಡುವುದು, ಸಂಸ್ಕೃತಿಯಲ್ಲ, ಕ್ಷೇತ್ರಕ್ಕೆ ಇಂತಹ ಶಾಸಕರು ಆಯ್ಕೆಯಾಗಿರುವುದು ದೊಡ್ಡ ದುರಂತ, ಬಹಿರಂಗವಾಗಿ ತೊಡೇ, ತೋಳು ತಟ್ಟುವುದು, ಶೆಡ್ಡು ಹೊಡೆಯುವರನ್ನು ಶಾಸಕರು ಅನ್ನಬೇಕಾ, ಪ್ರಜಾ ಪ್ರಭುತ್ವ ವ್ಯವಸ್ಥೆಯಲ್ಲಿ ಇಂತವರಿಗೆ ಬರುವ ದಿನಗಳಲ್ಲಿ ಜನರೇ ತಕ್ಕ ಪಾಠ ಕಲಿಸಲಿದ್ದಾರೆ. ಕುಮಾರಣ್ಣ ಅವರ ಬಗ್ಗೆ ಅವಹೇಳನಕಾರಿಯಾಗಿ ಹೇಳಿಕೆ ನೀಡಿದ, ಮಾತನಾಡಿದ ಪ್ರದೀಪ್ ಈಶ್ವರ್ ಕೂಡಲೇ ಬಹಿರಂಗ ಕ್ಷಮೆಯಾಚಿಸಬೇಕು, ನಿರ್ಲಕ್ಷ್ಯ ವಹಿಸಿದರೆ ಬರುವ ದಿನಗಳಲ್ಲಿ ಜೆಡಿಎಸ್ ವತಿಯಿಂದ ಪ್ರತಿಭಟನೆಯ ಸ್ವರೂಪ, ಹೋರಾಟ ಬದಲಾಗಲಿದೆ ಎಂದು ಎಚ್ಚರಿಸಿದ್ದಾರೆ.

# ರಾಜ್ಯ ರೈತ ಸಂಘಟನೆಯಿಂದ ಉಪ ತಹಶೀಲ್ದಾರರಿಗೆ ಮನವಿ

• ಮಲ್ಲಮ್ಮ ನುಡಿ ವಾರ್ತೆ ಕೊಟ್ಟೂರು

ಪಟ್ಟಣದ ತಹಶಿಲ್ದಾರ ಕಚೇರಿ ಮುಂಭಾಗದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವಾಸುದೇವ ಮೇಟಿ ಬಣ (ರಿ)ವಿಜಯನಗರ ಜಿಲ್ಲಾಧ್ಯಕ್ಷರಾದ ಸಿ.ಎ.ಗಾಳೆಪ್ಪ ಅವರ ಅದೇಶ ಮೇರಿಗೆ ತಾಲೂಕು ಮಹಿಳೆ ಘಟಕದ ಅಧ್ಯಕ್ಷೆ ಸಿ.ರೇಖಾ ನೇತ್ರತ್ವದಲ್ಲಿ ಕರ್ನಾಟಕ ರಾಜ್ಯದಲ್ಲಿ ವಿದ್ಯುತ್ ಖಾಸಗೀಕರಣ ವಿರೋಧಿಸಿ ಮತ್ತು ಪವರ್ ಕಂಪನಿ ಪರವಾನಿಗೆಯನ್ನು ವಿರೋದಿಸಿ ಮತ್ತು ರೈತರಿಗೆ ಯೂರಿಯೋ ಮತ್ತು ರಸಗೊಬ್ಬರಗಳ ಬೆಲೆ ಇಳಿಸುವ ಬಗ್ಗೆ ಸರ್ಕಾರಕ್ಕೆ ಮನವಿ ಸಲ್ಲಿಸಲು ಗ್ರೇಡ್2 ತಹಶಿಲ್ದಾರರಾದ ಪ್ರತಿಭಾ ಮೇಡಂ ರವರಿಗೆ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವಾಸುದೇವ ಮೇಟಿ ಬಣದ ಸಂಘಟನೆಯ ಪಧಾದಿಕಾರಿಗಳು ಸದಸ್ಯರು ಮನವಿ ಪತ್ರ ಸಲ್ಲಿಸಿದರು. ಈ ಸಂದರ್ಭದಲ್ಲಿ ಕೊಟ್ಟೂರು ತಾಲೂಕು ಮಹಿಳೆ ಘಟಕದ ಅಧ್ಯಕ್ಷೆ ಸಿ. ರೇಖಾ ರವರು ಮಾತನಾಡಿ ಟಾಟಾ ಪವರ್ ಕಂಪನಿಯವರಿಗೆ ಪರವಾನಿಗೆ ನೀಡಬಾರದೆಂದು ನಮ್ಮ ಸಂಘಟನೆ ವಿರೋಧಿಸುತ್ತಿದೆ. ಇದು ರೈತರ ಪಂಪ್ಸೆಟ್ಟುಗಳಿಗೆ ಮಾರಕವಾಗಿದೆ ಮತ್ತು ಗೃಹ ಬಳಕೆಗೆ ಮತ್ತು ನಿರುದ್ಯೋಗದ ಸಮಸ್ಯೆಯು ಹೆಚ್ಚಾಗಲಿದ್ದು ಮತ್ತು ಮೀಸಲಾತಿಯಲ್ಲಿ ತೊಂದರೆ ಉಂಟಾಗುತ್ತದೆ. ಆದ ಕಾರಣ ಈ ಟಾಟಾ ಪವರ್ ಕಂಪನಿಗೆ ಪರವಾನಿಗೆ ನೀಡಬಾರದೆಂದು ಆಕ್ಷೇಪಣವನ್ನು ಸಲ್ಲಿಸುತ್ತಿದ್ದೇವೆ. ಹಾಗೂ ರೈತರಿಗೆ ಯೂರಿಯೋ ಮತ್ತು ರಸಗೊಬ್ಬರ ಬೆಲೆಗಳನ್ನು



ಇಳಿಕೆ ಮಾಡಿ ರೈತರಿಗೆ ಕಡಿಮೆ ಬೆಲೆಯಲ್ಲಿ ಸಿಗುವಂತೆ ಮಾಡಬೇಕು

ಒಂದುವೇಳೆ ವಿದ್ಯುತ್ ಖಾಸಗಿಕರಣ ಆಗಿದಿದ್ದರೆ ಮುಂದಿನ ದಿನಗಳಲ್ಲಿ ಕೊಟ್ಟೂರು ಪಟ್ಟಣದಲ್ಲಿ ತಾಲೂಕು ಬಂದ್ ಕರೆ ಕೊಡುವುದರ ಮೂಲಕ,

ಕರ್ನಾಟಕ ಸರ್ಕಾರದ ವಿರುದ್ಧ ಬಾರುಕೋಲು ಚಳುವಳಿ ಮಾಡಿ ಉಗ್ರವಾದ ಹೋರಾಟ ಮಾಡಬೇಕಾಗುತ್ತದೆ ಎಂದು ಅಗ್ರಹಿಸಿದರು.

ಈ ಸಂದರ್ಭದಲ್ಲಿ ರೈತ ಸಂಘದ ಹೋಬಳಿ ಅಧ್ಯಕ್ಷರು ಕೆ ಪವಿತ್ರ ಬೆನಕನಹಳ್ಳಿ ಗೌರವಧ್ಯಕ್ಷರು ಕುಬೇರಪ್ಪ, ಮೂರ್ತಿನಾಯಕನಹಳ್ಳಿ ಅಂಜಿನಪ್ಪ ಹುಣಸಿಕಟ್ಟಿ ಗೌರವ ಅಧ್ಯಕ್ಷರು ಬಸವರಾಜ್ ನಾಗಪ್ಪ ಮಹಿಳಾ ಕಾರ್ಯಾದರ್ಶಿ ನಾಗಮ್ಮ ಕಮಲಮ್ಮ ಗಂಗಮ್ಮ ಉಜ್ಜನಿ ಗೌರವ ಅಧ್ಯಕ್ಷರು ಹುಲಿಗೆಮ್ಮ ಪ್ರೇಮ ಶೃತಿ ಮಮತಾ ಹಾಗೂ ರೈತ ಮುಖಂಡರು ಪಾಲ್ಗೊಂಡಿದ್ದರು

# ಪೋಲಿಯೊ ಮುಕ್ತ ಭಾರತಕ್ಕಾಗಿ ಐದು ವರ್ಷದ ಒಳಗಿನ ಮಕ್ಕಳಿಗೆ ತಪ್ಪದೇ ಲಸಿಕೆ ಹಾಕಿಸಿ

• ಮಲ್ಲಮ್ಮ ನುಡಿ ವಾರ್ತೆಕುರುಗೋಡು

ದೇಶವನ್ನು ಪೋಲಿಯೋ ಮುಕ್ತ ಸಮಾಜವನ್ನಾಗಿಸಲು ಉಚಿತ ಪಲ್ಸ್ ಪೋಲಿಯೋ ಲಸಿಕೆ ನೀಡುತ್ತಿದ್ದು, ತಾಲೂಕಿನ ಐದು ವರ್ಷದ ಎಲ್ಲ ಮಕ್ಕಳಿಗೂ ಲಸಿಕೆಯನ್ನು ಕಡ್ಡಾಯವಾಗಿ ಹಾಕಿಸಬೇಕು ಎಂದು ತಹಸೀಲ್ದಾರ್ ನರಸಪ್ಪ ಹೇಳಿದರು.

ಆರೋಗ್ಯ ಇಲಾಖೆ, ತಾಪಂ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಪುರಸಭೆ ಕುರುಗೋಡು ಸಹಯೋಗದಲ್ಲಿ ಇಲ್ಲಿನ ನಾಡಗೌಡ ವೃತ್ತದಲ್ಲಿ ಭಾನುವಾರ ಹಮ್ಮಿಕೊಂಡಿದ್ದ ಉಚಿತ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮದಲ್ಲಿ ಮಗುವಿಗೆ ಲಸಿಕೆ ಹಾಕುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.ನಂತರ ತಾಲೂಕು ವೈದ್ಯಾಧಿಕಾರಿ ಮಂಜುನಾಥ ಜವಳಿ ಮಾತನಾಡಿ ಜು 28ರಿಂದ ಜುಲೈ 01ರವರೆಗೆ ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮ ನಡೆಯಲಿದೆ. ಐದು ವರ್ಷದೊಳಗಿನ ಎಲ್ಲ ಮಕ್ಕಳಿಗೂ ಪೋಲಿಯೋ ಲಸಿಕೆ ಕಡ್ಡಾಯವಾಗಿ



ಹಾಕಿಸಿ. ಸರ್ಕಾರ ಪೋಲಿಯೋ ಮುಕ್ತ ಸಮಾಜವನ್ನಾಗಿಸಲು ಉಚಿತ ಲಸಿಕೆಯನ್ನು ಜುಂ 28ರಿಂದ ಜುಲೈ 01ತಾರೀಖಿನರೆಗೆ ಆರಂಭಿಸಿದ್ದು, ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರ ಸೇರಿದಂತೆ ಹಲವೆಡೆ ಭೂತಗಳನ್ನು ಸ್ಥಾಪಿಸಿದೆ

ಪೋಲಿಯೋ ಹನಿ ಒಂದು ರಾಷ್ಟ್ರೀಯ ಕಾರ್ಯಕ್ರಮವಾಗಿದ್ದು, ಪೋಲಿಯೋ ಕಾಯಿಲೆ ಎಲ್ಲರಿಗೂ ಒಂದೇ ಆಗಿದೆ. ಇಂದಿನಿಂದ ಜಿಲ್ಲಾದ್ಯಂತ ವಿವಿಧೆಡೆಗಳಲ್ಲಿ ಮೂರು ದಿನಗಳವರೆಗೆ ಇಲಾಖೆ ಸ್ಥಾಪಿಸಿದ ಭೂತಗಳಲ್ಲಿ ಲಸಿಕೆ ಹಾಕಲಾಗುತ್ತದೆ. ಅಲ್ಲದೆ ಆರೋಗ್ಯ ಇಲಾಖೆ ಸಿಬ್ಬಂದಿ, ಅಂಗನವಾಡಿ ಕಾರ್ಯಕರ್ತೆಯರು, ಆಶಾ ಕಾರ್ಯಕರ್ತೆಯರೊಂದಿಗೆ ಮನೆ ಮನಗೆ ತೆರಳಿ ಲಸಿಕೆ ಹಾಕುತ್ತಾರೆ ತಮ್ಮ ಮಕ್ಕಳಿಗೆ ಲಸಿಕೆ ಹಾಕಿಸಿ ಪೋಲೀಯೋ ಮುಕ್ತ ಭಾರತಕ್ಕೆ ಕೈ ಜೋಡಿಸಿ ಎಂದರು.ಈ ವೇಳೆ ಪುರಸಭೆ ಅಧ್ಯಕ್ಷ ಮಂಜುನಾಥ ಲಸಿಕೆ ಕುರಿತು ಮಾತನಾಡಿದರು.ಪುರಸಭೆ ಉಪಾಧ್ಯಕ್ಷರು ಪುರಸಭೆ ಸದಸ್ಯರು ಆರೋಗ್ಯ ಇಲಾಖೆ ಸಿಬ್ಬಂದಿ, ಅಂಗನವಾಡಿ, ಆಶಾ ಕಾರ್ಯಕರ್ತೆಯರು ಸೇರಿದಂತೆ ಇತರರು ಇದ್ದರು

# ಯಾವುದೇ ಮಗು ಲಸಿಕೆಯಿಂದ ಹೊರಗುಳಿಯದಂತೆ ನೋಡಿಕೊಳ್ಳಿ : ವೆಂಕಟೇಶ ವಂದಾಲ

• ಮಲ್ಲಮ್ಮ ನುಡಿ ವಾರ್ತೆಬಸವನಬಾಗೇವಾಡಿ

ಪಟ್ಟಣದ ಬಸವನಗರದ ನಮ್ಮ ಕ್ಲಿನಿಕ್ ಆರೋಗ್ಯ ಕೇಂದ್ರದಲ್ಲಿ ಪಲ್ಸ್ ಪೋಲಿಯೋ ಕಾರ್ಯಕ್ರಮಕ್ಕೆ ಕಾರ್ಯನಿರ್ವಾಹಕ ಅಧಿಕಾರಿ ವೆಂಕಟೇಶ ವಂದಾಲ ಮಗುವಿಗೆ ಲಸಿಕೆ ಹಾಕುವುದರ ಮೂಲಕ ಜಾಗೃತಿ ಕಾರ್ಯಕ್ರಮಕ್ಕೆ ಚಾಲನೆ ಕೊಟ್ಟರು.

ಐದು ವರ್ಷಕ್ಕಿಂತ ಕಡಿಮೆ ವಯಸ್ಸಿನ ಪ್ರತಿಯೊಂದು ಮಗುವಿಗೂ ತಪ್ಪದೆ ಎರಡು ಹನಿ ಪೋಲಿಯೋ ಲಸಿಕೆ ಹಾಕಿಸಬೇಕು ಯಾವುದೇ ಮಗು ಲಸಿಕೆಯಿಂದ ಹೊರಗುಳಿಯದಂತೆ ಆರೋಗ್ಯ ಇಲಾಖೆ ಸಿಬ್ಬಂದಿಗಳು ನೋಡಿಕೊಳ್ಳಬೇಕು, ಎರಡು ಹನಿ ಜೀವನದ ರಕ್ಷಣೆ ಪೋಲಿಯೋ ಮುಕ್ತ ಭಾರತ ನಿರ್ಮಾಣಕ್ಕೆ ನಿಮ್ಮ ಸಹಕಾರ ಅಗತ್ಯ ಎಂದು ಆರೋಗ್ಯ ಇಲಾಖೆಯ ಸಿಬ್ಬಂದಿಗಳಿಗೆ ಸೂಚನೆ ನೀಡಿದರು.



16 ಪ್ರಾಥಮಿಕ ಆರೋಗ್ಯ ಕೇಂದ್ರಗಳು, 143 ಗ್ರಾಮಗಳು,38 ಗ್ರಾಮ ಪಂಚಾಯಿತಿಗಳು, 3 ಪಟ್ಟಣ ಪಂಚಾಯಿತಿಗಳು, 4,26,271 ತಾಲೂಕಿನ ಒಟ್ಟು ಜನಸಂಖ್ಯೆ,80,226 ತಾಲೂಕಿನ ಒಟ್ಟು ಮನೆಗಳು, 43,554 ಒಟ್ಟು ಐದು ವರ್ಷಕ್ಕಿಂತ ಒಳಗಿರುವ ಮಕ್ಕಳು, 221 ಒಟ್ಟು ಪೋಲಿಯ ಭೂತಗಳು, 6 ಟ್ರಾಂಜೇಟ ತಂಡಗಳು, 10 ಮೊಬೈಲ್ ತಂಡಗಳು, 237 ಒಟ್ಟು ತಂಡಗಳು, 474 ಒಟ್ಟು ತಂಡದ ಸದಸ್ಯರು, 45 ಒಟ್ಟು ಮೇಲ್ವಿಚಾರಕರನ್ನು ಒಳಗೊಂಡು ತಾಲೂಕಿನಲ್ಲಿ ಪಲ್ಸ್ ಪೋಲಿಯೋ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವ ಗೊಳಿಸಲಾಗುವುದು ಎಂದು ತಾಲೂಕ ಆರೋಗ್ಯ ಅಧಿಕಾರಿಗಳು ಮಾಹಿತಿ ತಿಳಿಸಿದರು.

ಕಾರ್ಯಕ್ರಮದಲ್ಲಿ ತಾಲೂಕ ಯೋಜನಾಧಿಕಾರಿ ಎಮ್ ಬಿ ಸೊನ್ನದ ತಾಲೂಕ ತಾಲೂಕ ಆರೋಗ್ಯ ಅಧಿಕಾರಿ ಡಾ.ಸಾಬಿರ ಪಟೇಲ , ಡಾ. ಪ್ರಕಾಶ, ಡಾ ರೋಹಿಣಿ, ರಾಜಶೇಖರ್ ಚಿಂಚೋಳಿ, ಚಂದ್ರು ಹದಿಮೂರ, ಆಶಾ ಕಾರ್ಯಕರ್ತರು, ಹಾಜರಿದ್ದರು.

# ಶಿಕ್ಷಕರು ಮನಸ್ಸು ಮಾಡಿದರೆ ದೇಶದ ಉತ್ತಮ ಪ್ರಜೆಯಾಗಲು ಸಾಧ್ಯ: ಶಾಸಕ ಶಿವಾನಂದ ಪಾಟೀಲ

• ಮಲ್ಲಮ್ಮ ನುಡಿ ವಾರ್ತೆಬಸವನಬಾಗೇವಾಡಿ

ಶಿಕ್ಷಕ ವೃತ್ತಿ ಸಮಾಜದಲ್ಲಿ ಅತ್ಯಂತ ಪವಿತ್ರವಾಗಿದೆ. ತಂದೆ ತಾಯಿಯ ನಂತರ ಗುರುವಿಗೆ ತಲೆ ಬಾಗುತ್ತೇವೆ. ನಾನು ಕಡಿಮೆ ಸಾಲಿ ಕಲಿತೆನೆಂದು ಶಾಸಕನಾದೆ. ಬಹಳ ಕಲಿತಿದ್ದರೆ ಶಿಕ್ಷಕನಾಗುತ್ತಿದ್ದೆ. ಶಿಕ್ಷಕರು ಎಂದಿಗೂ ಮಾಜಿ ಆಗಲ್ಲ,ಆಗ ಸಚಿವನಾಗಿದ್ದೆ. ಈಗ ಮಾಜಿ ಆಗಿರುವೆ ಎಂದು ಶಾಸಕ ಶಿವಾನಂದ ಎಸ್ ಪಾಟೀಲ ಅಭಿಪ್ರಾಯಪಟ್ಟರು.ಪಟ್ಟಣದಲ್ಲಿ ಭಾನುವಾರ ತಾಲೂಕಿನ ಹಂಚಿನಾಳದಲ್ಲಿ ಸುದೀರ್ಘವಾಗಿ ಸೇವೆ ಸಲ್ಲಿಸಿ ಸೇವಾ ನಿವೃತ್ತಿ ಹೊಂದಿದ ಮುಖ್ಯಗುರು ಜಗದೀಶ ಮು. ಚಿಕ್ಕಮಠ ಅವರ ಅಭಿನಂದನಾ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಅವರು,ಶಿಕ್ಷಕರು ಮನಸ್ಸು ಮಾಡಿದರೆ ನನ್ನನ್ನು ಶಾಸಕ ಹಾಗೂ ಚಂದ್ರು ನುಗ್ಲಿ ಅವರನ್ನು ಇಲ್ಲಿಂದ ರಾಜ್ಯಾಧ್ಯಕ್ಷನಾಗಿಸುವ ಶಕ್ತಿ ನಿಮ್ಮ ಕೈಯಲ್ಲಿದೆ. ನೀವು ಮನಸ್ಸು ಮಾಡಿದರೆ ದೇಶದ ಪ್ರಜೆಯನ್ನಾಗಿಸುವ ಶಕ್ತಿ ನಿಮ್ಮಲ್ಲಿದೆ. ಜೀವನದ ಅಡಿಪಾಯ ಹಾಕುವವನೇ ಶಿಕ್ಷಕ. ಅನೇಕ ಶಿಕ್ಷಕರು ನಿರೀಕ್ಷೆ ಮಾಡದೇ ಜೀವನ ಸವೆಸುತ್ತಿದ್ದಾರೆ ಅನೇಕ ಶಿಕ್ಷಕರ ಕುರಿತಾಗಿ ಮಾತನಾಡಿದರು ಎಂದರು.

ಕರಾಪ್ರಾಶಿ ಸಂಘದ ರಾಜ್ಯಾಧ್ಯಕ್ಷ ಚಂದ್ರಶೇಖರ ನುಗ್ಲಿ ಮಾತನಾಡಿ, ಶಿಕ್ಷಕರು ಸರ್ಕಾರಿ ಶಾಲೆಗೆ ಬರುವ ಬಡ ಮಕ್ಕಳನ್ನು ನಿಮ್ಮ ಮಕ್ಕಳೆಂದು ಭಾವಿಸಬೇಕು. ಸಣ್ಣಪುಟ್ಟ ಅಭಿಪ್ರಾಯ ಹಾಗೂಭಿನ್ನತೆ ಮರೆತು ಇಂದು ಅಖಂಡ ತಾಲೂಕಿನಲ್ಲಿ ಸಂಘಟನೆ ಗಟ್ಟಿಯಾಗಿ



ಸೇವೆಗೆ ಮುಂದಾಗಿದೆ ಎಂದರು.ಆದರ್ಶ ಶಿಕ್ಷಕರ ವೇದಿಕೆ ಜಿಲ್ಲಾಧ್ಯಕ್ಷ ಉಮೇಶ ಕೌಲಗಿ ಮಾತನಾಡಿ, ಇಂದು ಸರ್ಕಾರಿ ನೌಕರಿ ಸಿಗೋದು ಹಾಗೂ ಉಳಿಯುವುದು ತುಂಬಾ ಕಠಿಣ ಪರಸ್ಥಿತಿಯಾಗಿದೆ. ನಿವೃತ್ತಿ ಆದರೂ ಪಿಂಚಣಿ ವ್ಯವಸ್ಥೆ ಇಲ್ಲ. ಸಿಇಟಿ ಹಾಗೂ ಟಿಇಟಿ ಪಾಸು ಮಾಡಿದರೆ ಉಳಿಗಾಲ ಇಲ್ಲವೆಂದರೆ ಮನೆಗೆ ಹೋಗುವ ಸವಾಲು ಇಂದಿನ ಶಿಕ್ಷಕರ ಮೇಲಿದೆ ಎಂದರು.

ಶಿಕ್ಷಕ ಎಚ್.ಬಿ ಬಾರಿಕಾಯಿ ಮಾತನಾಡಿ, ಕರ್ತವ್ಯವುಳ್ಳ ಶಿಕ್ಷಕರು ಯಾರಿಗೂ ಕೈಮುಗಿಯುವ ಅವಶ್ಯಕತೆ ಇಲ್ಲ ಎಂದರು.

ಸಿದ್ಧಲಿಂಗ ಸ್ವಾಮೀಜಿ ಹಾಗೂ ಶಿವಾನಂದ ಶಿವಾಚಾರ್ಯರು , ಬ್ಲಾಕ್ ಕಾಂಗ್ರೇಸ್ ಅಧ್ಯಕ್ಷ ಸುರೇಶ ಹಾರಿವಾಳ, ರಾಷ್ಟ್ರೀಯ ಬಸವ ಸೈನ್ಯ . ಅಧ್ಯಕ್ಷ ಶಂಕರಗೌಡ ಶಿ ಬಿರಾದಾರ, ಶಿವು ಮಡಿಕೇಶ್ವರ, ಎಸ್ ಎಸ್ ಗರಸಂಗಿ, ಪಿ.ಡಿ ಜತ್ತಿ, ಸಿ.ಎಸ್ ಹಿರೇಮಠ, ಜಗದೀಶ ಚಿಕ್ಕಮಠ, ಪಾರ್ವತಿ ಎಸ್ ಹೊಸಮಠ ಮಾತನಾಡಿದರು.

ಡಾ. ಎನ್.ಬಿ ವಜೀರಕರ, ಶಿವನಗೌಡ ಗುಜಗೊಂಡ,ಎಂ ಎನ್ ಯಾಳವಾರ, ಎಂ.ವಿ ಗಬ್ಬೂರ ಎಚ್.ಎಸ್ ಗೊಳಸಂಗಿ, ಶ್ವೇತಾ. ಎನ್. ಸೇರಿದಂತೆ ಅನೇಕರು ಇದ್ದರು. ಭೀಮರಾಯ ಚಕ್ರಮನಿ ಹಾಗೂ ಕೊಟ್ರೇಶ ಹೆಗಡ್ಯಾಳ ನಿರೂಪಿಸಿದರು.ಸದಾಶಿವ ಹೊನವಾಡ ಪ್ರಾರ್ಥಿಸಿದರು.

## ಪೋಲಿಯೋ ಅಭಿಯಾನ ಯಶಸ್ವಿ



**ಗಂಗಾವತಿ:** ದೇಶವನ್ನು ಸಂಪೂರ್ಣ ಪೋಲಿಯೋ ಮುಕ್ತವಾಗಿಡುವ ನಿಟ್ಟಿನಲ್ಲಿ ಜೂನ್ 28ರಂದು ನಡೆಯಲಿರುವ ಪಲ್ಸ್ ಪೋಲಿಯೋ ಅಭಿಯಾನವನ್ನು ಯಶಸ್ವಿಗೊಳಿಸಲು ಪ್ರತಿಯೊಬ್ಬ ಪೋಷಕರೂ ತಮ್ಮ 5 ವರ್ಷದೊಳಗಿನ ಮಕ್ಕಳಿಗೆ ತಪ್ಪದೇ ಪೋಲಿಯೋ ಲಸಿಕೆ ಹಾಕಿಸಬೇಕು ಎಂದು ಸರ್ಕಾರಿ ವೈದ್ಯಾಧಿಕಾರಿಗಳ ಸಂಘದ ಕೊಪ್ಪಳ ಜಿಲ್ಲಾಧ್ಯಕ್ಷರು ಹಾಗೂ ಗಂಗಾವತಿ ಉಪವಿಭಾಗ ಆಸ್ಪತ್ರೆಯ ಮುಖ್ಯ ವೈದ್ಯಾಧಿಕಾರಿ ಡಾ. ಈಶ್ವರ ಎಸ್. ಸವಡಿ ಕರೆ ನೀಡಿದರು.

ಪಲ್ಸ್ ಪೋಲಿಯೋ ಕಾರ್ಯಕ್ರಮವು ಮಕ್ಕಳನ್ನು ಪೋಲಿಯೋ ಕಾಯಿಲೆಯಿಂದ ರಕ್ಷಿಸುವ ಅತ್ಯಂತ ಮಹತ್ವದ ರಾಷ್ಟ್ರೀಯ ಆರೋಗ್ಯ ಅಭಿಯಾನವಾಗಿದೆ. ಆರೋಗ್ಯ ಇಲಾಖೆ ವತಿಯಿಂದ ಜಿಲ್ಲೆಯಾದ್ಯಂತ ಲಸಿಕಾ ಕೇಂದ್ರಗಳನ್ನು ತೆರೆಯಲಾಗಿದ್ದು, ಅಗತ್ಯವಿದ್ದಲ್ಲಿ ಆರೋಗ್ಯ ಸಿಬ್ಬಂದಿ ಮನೆ-ಮನೆಗೆ ಭೇಟಿ ನೀಡಿ ಮಕ್ಕಳಿಗೆ ಲಸಿಕೆ ನೀಡಲಿದ್ದಾರೆ ಎಂದು ಅವರು ತಿಳಿಸಿದರು. ಮಕ್ಕಳ ಆರೋಗ್ಯ ಮತ್ತು ಸುರಕ್ಷತೆಯನ್ನು ಗಮನದಲ್ಲಿಟ್ಟುಕೊಂಡು ಪ್ರತಿಯೊಬ್ಬ ಪೋಷಕರೂ ಜವಾಬ್ದಾರಿಯಿಂದ ನಡೆದುಕೊಳ್ಳಬೇಕು. ಈಗಾಗಲೇ ಹಲವು ಬಾರಿ ಪೋಲಿಯೋ ಲಸಿಕೆ ಪಡೆದಿದ್ದರೂ ಸಹ ಈ ಬಾರಿಯ ಅಭಿಯಾನದಲ್ಲಿ "ಎರಡು ಹನಿ-ಜೀವದ ರಕ್ಷಣೆ" ಎಂಬ ಸಂದೇಶದೊಂದಿಗೆ ಮಕ್ಕಳಿಗೆ ಪೋಲಿಯೋ ಲಸಿಕೆಯನ್ನು ತಪ್ಪದೇ ನೀಡಿಸಬೇಕು ಎಂದು ಅವರು ಮನವಿ ಮಾಡಿದರು. ಸಾರ್ವಜನಿಕರು ಆರೋಗ್ಯ ಇಲಾಖೆಯೊಂದಿಗೆ ಕೈಜೋಡಿಸಿ ಪಲ್ಸ್ ಪೋಲಿಯೋ ಅಭಿಯಾನವನ್ನು ಯಶಸ್ವಿಗೊಳಿಸಬೇಕು ಎಂದು ಡಾ. ಈಶ್ವರ ಎಸ್. ಸವಡಿ ವಿನಂತಿಸಿದರು.

## ಕೆಂಪೇಗೌಡ ಜಯಂತಿಯಲ್ಲಿ ಗದ್ದಲ ಪ್ರಕರಣ, ಜೈಲಿಗೆ ನಿಖಿಲ್ ಭೇಟಿ



**ಚಿಕ್ಕಬಳ್ಳಾಪುರ:** ಚಿಕ್ಕಬಳ್ಳಾಪುರದಲ್ಲಿ ಕೆಂಪೇಗೌಡ ಜಯಂತಿ ವೇಳೆ ನಡೆದ ಗದ್ದಲ ಹಾಗೂ ಶಾಸಕ ಪ್ರದೀಪ್ ಈಶ್ವರ್ ಅವರತ್ತ ಚಪ್ಪಲಿ ಎಸೆದ ಪ್ರಕರಣಕ್ಕೆ ಸಂಬಂಧಿಸಿದಂತೆ ಚಿಕ್ಕಬಳ್ಳಾಪುರ ಪೊಲೀಸರು ಸುಮೋಟೋ ಪ್ರಕರಣ ದಾಖಲಿಸಿಕೊಂಡು ನಾಲ್ವರನ್ನು ಬಂಧಿಸಿದ್ದು ಈ ಬೆಳವಣಿಗೆಯಿಂದ ಚಿಕ್ಕಬಳ್ಳಾಪುರ ರಾಜಕೀಯ ವಲಯದಲ್ಲಿ ಚರ್ಚೆ ಮತ್ತು ಚಟುವಟಿಕೆಗಳು ಜೋರಾಗಿವೆ.

ಬಂಧಿತರು ಪ್ರಸ್ತುತ ಜಿಲ್ಲಾ ಕಾರಾಗೃಹದಲ್ಲಿದ್ದು, ಸೋಮವಾರ ಜೆಡಿಎಸ್ ರಾಜ್ಯ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಅವರು ಕಾರಾಗೃಹಕ್ಕೆ ಭೇಟಿ ನೀಡಿ ಬಂಧಿತರನ್ನು ಭೇಟಿಯಾಗಿ ಧೈರ್ಯ ತುಂಬಿದರು ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದ ನಿಖಿಲ್ ಕುಮಾರಸ್ವಾಮಿ, ಯಾವುದೇ ತಪ್ಪು ಮಾಡದವರನ್ನು ಉದ್ದೇಶಪೂರ್ವಕವಾಗಿ ಬಂಧಿಸಲಾಗಿದೆ.ಅವರನ್ನು ನೇರವಾಗಿ ಭೇಟಿ ಮಾಡಿ ಮಾತನಾಡಿದ್ದೇನೆ.ಅವರು ಕಾನೂನು ವಿರುದ್ಧ ನಡೆಯುವ ವ್ಯಕ್ತಿಗಳಲ್ಲ ಆದರೂ ಬಂಧಿಸಿರುವುದು ಸರಿಯಲ್ಲ ಎಂದು ಅಭಿಪ್ರಾಯಪಟ್ಟರು. ಕೆಂಪೇಗೌಡ ಜಯಂತಿಯಲ್ಲಿ ನಡೆದ ಘಟನೆಯಲ್ಲಿ ಪ್ರಚೋದನೆಯೂ ಕಾರಣವಾಗಿದೆ ಎಂದು ಆರೋಪಿಸಿದ ಅವರು,ಮೊದಲು ಪ್ರಚೋದನೆ ಮಾಡಿದವರ ವಿರುದ್ಧ ಏಕೆ ಕ್ರಮ ಕೈಗೊಳ್ಳಲಿಲ್ಲ? ಜನಪ್ರತಿನಿಧಿಗಳ ಒತ್ತಡಕ್ಕೆ ಮಣಿದು ಅಮಾಯಕರ ವಿರುದ್ಧ ಎಫ್ಐಆರ್ ದಾಖಲಿಸಿರುವುದು ಸರಿಯಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಈ ವೇಳೆ ಜೆಡಿಎಸ್ ರಾಜ್ಯ ಕೋರ್ ಕಮಿಟಿ ಅಧ್ಯಕ್ಷ ಜೆ ಕೆ ಕೃಷ್ಣ ರೆಡ್ಡಿ, ಶಾಸಕ ಬಿ.ಎನ್.ರವಿಕುಮಾರ್,ಜಿಲ್ಲಾಧ್ಯಕ್ಷ ಮುಕ್ತಮುನಿಯಪ್ಪ,ಕಾರ್ಯಾಧ್ಯಕ್ಷ ಕೆ.ಆರ್ ರೆಡ್ಡಿ ಸೇರಿದಂತೆ ಪಕ್ಷದ ಮುಖಂಡರು ಉಪಸ್ಥಿತರಿದ್ದರು.

## 20 ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್‌ಟಾಪ್ ವಿತರಣೆ



**ಕಲಬುರಗಿ:** ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ವತಿಯಿಂದ 2025-26ನೇ ಸಾಲಿನಲ್ಲಿ ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್‌ಟಾಪ್ ಯೋಜನೆಯಡಿ ಆಯ್ಕೆಯಾದ 10 ಅಂಧ ವಿದ್ಯಾರ್ಥಿಗಳಿಗೆ ಕಲಬುರಗಿ ಜಿಲ್ಲಾಧಿಕಾರಿಗಳಾದ ಇಕ್ರಮ್ ಶರೀಫ್ ಸೋಮವಾರ ಕಲಬುರಗಿ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಟಾಕಿಂಗ್ ಲ್ಯಾಪ್‌ಟಾಪ್‌ಗಳನ್ನು ವಿತರಿಸಿದರು.

ಅದೇ ರೀತಿ ಕಲಬುರಗಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಹುಲ್ ಶರಣಪ್ಪ ಸಂಕನೂರ ಅವರು ಟಾಕಿಂಗ್ ಲ್ಯಾಪ್‌ಟಾಪ್ ಯೋಜನೆಯಡಿ ಆಯ್ಕೆಯಾದ 10 ಅಂಧ ವಿದ್ಯಾರ್ಥಿಗಳಿಗೆ ಕಲಬುರಗಿ ಜಿಲ್ಲಾ ಪಂಚಾಯತ್ ಕಚೇರಿಯಲ್ಲಿ ಟಾಕಿಂಗ್ ಲ್ಯಾಪ್‌ಟಾಪ್‌ಗಳನ್ನು ವಿತರಿಸಿದರು.

ಈ ಸಂದರ್ಭದಲ್ಲಿ ಕಲಬುರಗಿ ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಸಾದಿಕ್ ಹುಸೇನ್ ಖಾನ್, ಅಂಧ ಬಾಲಕರ ಸರ್ಕಾರಿ ಪ್ರೌಢ ಶಾಲೆಯ ದೈಹಿಕ ಶಿಕ್ಷಣ ಶಿಕ್ಷಕ ಪ್ರಕಾಶ ಭಜಂತ್ರಿ ಸೇರಿದಂತೆ ಜಿಲ್ಲಾ ಅಂಗವಿಕಲರ ಕಲ್ಯಾಣ ಇಲಾಖೆಯ ಸಿಬ್ಬಂದಿ ಮೇಘಾಂಜಲಿ ಸೇರಿದಂತೆ ಆಯ್ಕೆಯಾದ 20 ಅಂಧ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಸಾಲ ಮಂಜೂರಾತಿಯಲ್ಲಿ ಅನಗತ್ಯ ವಿಳಂಬ ಸಲ್ಲದು

• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ**



ಸರಕಾರದ ವಿವಿಧ ಯೋಜನೆಗಳಡಿ ಅರ್ಹ ಫಲಾನುಭವಿಗಳಿಗೆ ಸಾಲ ಮಂಜೂರಾತಿಯಲ್ಲಿ ಅನಗತ್ಯ ವಿಳಂಬವಾಗದಂತೆ ಕ್ರಮವಹಿಸಬೇಕೆಂದು ಸಂಸದ ಪಿ.ಸಿ.ಗದ್ದಿಗೌಡರ ಬ್ಯಾಂಕರ್ಸ್ ಗಳಿಗೆ ಸೂಚನೆ ನೀಡಿದರು.

ಜಿಲ್ಲಾ ಪಂಚಾಯತ ಸಭಾಭವನದಲ್ಲಿ ಸೋಮವಾರ ಜಿಲ್ಲಾ ಸಮಾಲೋಚನಾ ಸಮಿತಿ ಹಾಗೂ ಜಿಲ್ಲಾ ಮಟ್ಟದ ಪರಿಶೀಲನಾ ಸಮಿತಿಯ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಸರಕಾರದ ವಿವಿಧ ಯೋಜನೆಗಳ ಉದ್ದೇಶವು ಜನಸಾಮಾನ್ಯರಿಗೆ ಸುಲಭವಾಗಿ ತಲುಪಬೇಕಾದರೆ ಬ್ಯಾಂಕ್‌ಗಳು ಹಾಗೂ ಇಲಾಖೆಗಳ ನಡುವೆ ಉತ್ತಮ ಸಮನ್ವಯ ಅಗತ್ಯವಿದೆ. ರೈತರು, ಮಹಿಳೆಯರು, ಯುವ ಉದ್ಯಮಿಗಳು ಹಾಗೂ ಸಣ್ಣ ವ್ಯಾಪಾರಿಗಳಿಗೆ ಅಗತ್ಯ ಹಣಕಾಸು ನೆರವು ಒದಗಿಸುವ ಕೆಲಸವಾಗಬೇಕು ಎಂದರು.

ಪ್ರಸಕ್ತಸಾಲಿನ ಮೊದಲನೇ ತ್ರೈಮಾಸಿಕ ಬ್ಯಾಂಕಿಂಗ್ ಸಾಧನೆ, ವಾರ್ಷಿಕ ಸಾಲ ಯೋಜನೆ ಅನುಷ್ಠಾನ, ಕೃಷಿ ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳು, ಶಿಕ್ಷಣ, ವಸತಿ, ಸ್ವಯಂ ಉದ್ಯೋಗ ಹಾಗೂ ಮಹಿಳಾ ಸ್ವಸಹಾಯ ಸಂಘಗಳಿಗೆ ನೀಡಿರುವ ಸಾಲದ ಪ್ರಗತಿಯನ್ನು ಸಂಸದರು ವಿವರವಾಗಿ ಪರಿಶೀಲಿಸಿದರು. ಪ್ರಧಾನಮಂತ್ರಿ ಮುದ್ರಾ ಯೋಜನೆ, ಪ್ರಧಾನಮಂತ್ರಿ ಸ್ವನಿಧಿ ಯೋಜನೆ, ಪ್ರಧಾನಮಂತ್ರಿ ಉದ್ಯೋಗ ಸೃಜನ ಕಾರ್ಯಕ್ರಮ, ಕೃಷಿ ಸಾಲ, ಶಿಕ್ಷಣ ಸಾಲ ಹಾಗೂ ಮನೆ ಸಾಲ ಯೋಜನೆಗಳ ಅನುಷ್ಠಾನದ ಪ್ರಗತಿಯನ್ನು ಸಭೆಯಲ್ಲಿ ಪರಿಶೀಲಿಸಲಾಯಿತು.

ಆದ್ಯತಾ ವಲಯಗಳಾದ ಕೃಷಿ, ತೋಟಗಾರಿಕೆ, ಪಶು, ಶಿಕ್ಷಣಕ್ಕೆ ಸಂಬಂಧಿಸಿದಂತೆ ಸಾಲ ವಿತರಣೆಯಲ್ಲಿ ಹೆಚ್ಚಿನ ಆಧ್ಯತೆ ನೀಡಬೇಕು. ವಿವಿಧ ಯೋಜನೆಗಳಡಿ ಬಾಕಿ ಉಳಿದಿರುವ ಅರ್ಜಿಗಳನ್ನು ತ್ವರಿತವಾಗಿ ವಿಲೇವಾರಿ ಮಾಡಿ ಅರ್ಹರಿಗೆ ಸಾಲ ಮಂಜೂರು ಮಾಡುವಂತೆ ಬ್ಯಾಂಕ್ ಅಧಿಕಾರಿಗಳಿಗೆ ಸೂಚಿಸಿದರು.

ಇದೇ ವೇಳೆ ಮಾತನಾಡಿದ ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ, ಸರಕಾರದ ವಿವಿಧ ಯೋಜನೆಗಳ ಲಾಭ ನಿಯಮಾನುಸಾರ ನಿಗದಿತ ಅವಧಿಯಲ್ಲಿ ದೊರೆಯದಿದ್ದರೆ ಹೇಗೆ ಎಂದು ಪ್ರಶ್ನಿಸಿದರು. ಬಾಕಿ ಇರುವ ಅರ್ಜಿಗಳನ್ನು 10 ದಿನಗಳೊಳಗಾಗಿ ವಿಲೇವಾರಿ ಮಾಡಿ ವರದಿ ಸಲ್ಲಿಸಲು ತಿಳಿಸಲಾಯಿತು.

ಬೀದಿ ಬದಿ ವ್ಯಾಪಾರಸ್ಥರಿಗೆ ಬ್ಯಾಂಕ್ ಸಾಲ ಕೊಡಲು ಆರ್‌ಡಿ ಸ್ಕಿಮ್ ಮಾಡಿದರೆ ಮಾತ್ರ ಸಾಲ ಮಂಜೂರು ಮಾಡುವುದಾಗಿ ಕೆಲವೊಂದು ಬ್ಯಾಂಕ್‌ಗಳು ಹೇಳುತ್ತಿರುವುದರಿಂದ ವ್ಯಾಪಾರಸ್ಥರಿಗೆ ತೊಂದರೆಯಾಗುತ್ತಿದೆ. ಈ ರೀತಿ ಆಗಬಾರದು. ಬ್ಯಾಂಕ್ ಅಧಿಕಾರಿಗಳಿಗೆ ತಮ್ಮ ವ್ಯಾಪ್ತಿಯ ಬ್ಯಾಂಕ್ ಶಾಖೆಯ ವ್ಯವಸ್ಥಾಪಕರಿಗೆ ನಿರ್ದೇಶನ ನೀಡಲು ತಿಳಿಸಿದರು. ಸೂರ್ಯಾ ಘರ್ ಯೋಜನೆಯಡಿ ಸೋಲಾರ ಅಳವಡಿಕೆ ಬಗ್ಗೆ ಜನರಲ್ಲಿ ಹೆಚ್ಚಿನ ಜಾಗೃತಿ ಮೂಡಿಸಲು ತಿಳಿಸಿದರು. ನಬಾರ್ಡ ಮತ್ತು ಆರ್.ಬಿ.ಐ ಅಧಿಕಾರಿಗಳು ಹೊಸ ಯೋಜನೆಗಳ ಬಗ್ಗೆ ಸಭೆಗೆ ಮಾಹಿತಿ ನೀಡಿದರು.

ಆರ್‌ಸೆಟ್ ಸಂಸ್ಥೆಯಿಂದ ವಿವಿಧ ವೃತ್ತಿ ಕೌಶಲ್ಯ ಕುರಿತು ತರಬೇತಿ ನೀಡಿರುವ ಬಗ್ಗೆ ಮಾಹಿತಿಯನ್ನು ಸಭೆಗೆ ತಿಳಿಸಿದಾಗ ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಸಂಗಪ್ಪ ಅವರು ಮಾತನಾಡಿ, ಮುಖ್ಯವಾಗಿ ವೈರಿಂಗ್, ಪ್ಲಂಬಿಂಗ ಸೇರಿದಂತೆ ಮೊಬೈಲ್, ಪೋಟೋಗ್ರಾಫಿ ಹಾಗೂ ಲೇಬರ್ ಓರಿಯಂಟ್ ತರಬೇತಿಗಳನ್ನು ನೀಡುವುದು ಅವಶ್ಯವಾಗಿದೆ. ತರಬೇತಿ ಕೊಟ್ಟು ಬ್ಯಾಂಕ್‌ನಲ್ಲಿ ಸಾಲ ಒದಗಿಸಿದರೆ ಸಾಲದು ಇದರಿಂದ ಪ್ರಯೋಜನವಾಗುತ್ತಿರುವ ಬಗ್ಗೆ ಗಮನ ಹರಿಸಲು ತಿಳಿಸಿದರು.

ವಿವಿಧ ಯೋಜನೆಗಳಿಗೆ ಸಂಬಂಧಿಸಿದ ಸಾಲ ಮಂಜೂರಾತಿಯಲ್ಲಿ ಬಾಕಿ ಇರುವ ಅರ್ಜಿಗಳನ್ನು ಹತ್ತು ದಿನಗಳಲ್ಲಿ ವಿಲೇವಾರಿ ಮಾಡುವಂತೆ ಜಿ.ಪಂ ಸಿಇಓ ಗಜಾನನ ಬಾಲೆ ತಿಳಿಸಿದರು.

ಈ ಸಂದರ್ಭದಲ್ಲಿ ಪ್ರಸಕ್ತ ಸಾಲಿನ ಸಾಲ ಯೋಜನೆಯ ಮಾಹಿತಿ ಪುಸ್ತಕವನ್ನು ಬಿಡುಗಡೆ ಮಾಡಲಾಯಿತು. ಸಭೆಯಲ್ಲಿ ಜಿ.ಪಂ ಉಪ ಕಾರ್ಯದರ್ಶಿ ಎನ್.ವಾಯ್.ಬಸರಿಗಿಡದ, ಮುಖ್ಯ ಲೆಕ್ಕಾಧಿಕಾರಿ ಸಿದ್ದರಾಮೇಶ್ವರ ಉಕ್ಕಲಿ, ಜಿಲ್ಲಾ ಅಗ್ರಣಿ ಬ್ಯಾಂಕ್‌ನ ವ್ಯವಸ್ಥಾಪಕ ರಾಜಕುಮಾರ ಹೂಗಾರ, ನಬಾರ್ಡ ಬ್ಯಾಂಕ್‌ನ ಡಿಡಿಎಂ ವಿಷ್ಣುವರ್ಧನ, ಆರ್.ಬಿ.ಐ ಎಲ್‌ಡಿಓ ಸೀಲಪ್ರೀಯಾ ಗೌತಮ, ಕೆರನಾ ಬ್ಯಾಂಕ್ ಎಜಿಎಂ ಯೋಗೇಶ ಪೂಜಾರ, ಕೆಜಿಬಿ ಬ್ಯಾಂಕ್‌ನ ಆರ್‌ಎಂ ಪರಮೇಶ್ವರ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು, ಬ್ಯಾಂಕರ್ಸ್ ಗಳು ಉಪಸ್ಥಿತರಿದ್ದರು.

## ಪೋಲಿಯೋ ಮುಕ್ತ ರಾಜ್ಯವಾಗಬೇಕು ನಮ್ಮ ರಾಜ್ಯ

• **ಮಲ್ಲಮ್ಮ ನುಡಿ ವಾರ್ತೆ ಹಗರಿಬೊಮ್ಮನಹಳ್ಳಿ**



ಮನುಕುಲಕ್ಕೆ ಕಂಟಕವಾಗಿರುವ ಪೋಲಿಯೋ ರೋಗ ಚಿಕ್ಕ ವಯಸ್ಸಿನ ಮಕ್ಕಳ ಜೀವನಕ್ಕೆ ಮಾರಕವಾಗಿದ್ದು, ಅದನ್ನು ಹೆತ್ತವರು, ಪೋಷಕರು ಹಾಗೂ ಆರೋಗ್ಯ ಇಲಾಖೆ ಅತ್ಯಂತ ಹೆಚ್ಚಿನ ಜವಾಬ್ದಾರಿಯಿಂದ ಐದು ವರ್ಷದ ಒಳಗಿನ ಮಕ್ಕಳಿಗೆ ಕಡ್ಡಾಯವಾಗಿ ಪೋಲಿಯೋ ಲಸಿಕೆ ಹಾಕಿಸುವುದರ ಮೂಲಕ ರೋಗ ರಹಿತ ರಾಜ್ಯವನ್ನು ಮಾಡಬೇಕಿದೆ ಎಂದು ಶಾಸಕ ನೇಮಿರಾಜ್ ನಾಯಕ್ ಹೇಳಿದರು.

ಅವರು ಪಟ್ಟಣದ ಸಾರ್ವಜನಿಕ ಆಸ್ಪತ್ರೆಯಲ್ಲಿ ಪಲ್ಸ್ ಪೋಲಿಯೋ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಮಕ್ಕಳ ವೈದ್ಯರಾದ ಡಾ. ತಿಪ್ಪೆಸ್ವಾಮಿ ಮಾತನಾಡಿ ಪಲ್ಸ್ ಪೋಲಿಯೋ ಕಾರ್ಯಕ್ರಮ ಒಂದು ಮಹತ್ವದ ಕಾರ್ಯಕ್ರಮವಾಗಿದ್ದು ರಾಷ್ಟ್ರ ನಿರೋಗದಿಂದ ನಿರ್ಮಾಣವಾಗಬೇಕಾದರೆ, ಪಲ್ಸ್ ಪೋಲಿಯೋದಂತ ಮಾರಕ ಕಾಯಿಲೆಗಳನ್ನು ಪ್ರತಿಯೊಬ್ಬರು ನಿರ್ಲಕ್ಷ ವಹಿಸದಂತೆ ಲಸಿಕೆ ಹಾಕಿಸಬೇಕು. ಇದರಿಂದ ಉತ್ತಮ ರಾಷ್ಟ್ರದ ನಿರ್ಮಾಣವಾಗುತ್ತದೆ ಹಾಗೂ ಸ್ವಸ್ಥ ಸಮಾಜ ರೂಪಗೊಳ್ಳುವುದರ ಮೂಲಕ ಮಾನವ ಸಂಪನ್ಮೂಲ ಹೆಚ್ಚಾಗುತ್ತದೆ ಎಂದರು. ಈ ಸಂದರ್ಭದಲ್ಲಿ ಮುಖ್ಯ ವೈದ್ಯಾಧಿಕಾರಿ ಡಾ. ಶಿವಕುಮಾರ್, ತಾಲೂಕು ವೈದ್ಯಾಧಿಕಾರಿ ಡಾ. ಪ್ರವೀಣ್, ಉಪ ತಹಸಿಲ್ದಾರ್ ಶಿವಕುಮಾರ್ ಗೌಡ, ಡಾ. ಮಲ್ಲಿಕಾರ್ಜುನ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಶಿವಲಿಂಗಪ್ಪ, ಮಹಿಳಾ ಆರೋಗ್ಯ ಸಹಾಯಕಿಯರಾದ ನಿರ್ಮಲ, ಅನಿತಾ, ನಾಗರತ್ನ, ಯಮುನಾ, ಜೆಡಿಎಸ್ ಜಿಲ್ಲಾ ಉಪಾಧ್ಯಕ್ಷ ನಾಣ್ಯಪುರ ಕೃಷ್ಣಮೂರ್ತಿ, ವೈ, ಮಲ್ಲಿಕಾರ್ಜುನ, ಸಿಎಚ್ ಸಿದ್ದರಾಜು ಸೇರಿದಂತೆ ಆಸ್ಪತ್ರೆಯ ಸಿಬ್ಬಂದಿ ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

## ಪೂರ್ವಭಾವಿ ಶಾಂತಿ ಸಭೆ: ಸೌಹಾರ್ದ ಕಾಪಾಡಲು ಮನವಿ



• **ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ**

ಮೊಹರಂ ಹಬ್ಬದ ಅಂಗವಾಗಿ ಕೌಡೇಪೀರ ಹಿರಿಯ ದೇವರ ಪೂರ್ವಭಾವಿ ಶಾಂತಿ ಸಭೆಯು ಗಂಗಾವತಿ ನಗರದಲ್ಲಿ ನಡೆಯಿತು.

ಸಭೆಯಲ್ಲಿ ಗಂಗಾವತಿ ನಗರದ ಪ್ರಮುಖ ಮುಖಂಡರು, ಮುಜಾವರ್‌ಗಳು ಹಾಗೂ ವಿವಿಧ ಸಮಾಜದ ಪ್ರತಿನಿಧಿಗಳು ಭಾಗವಹಿಸಿ, ಹಬ್ಬವನ್ನು ಶಾಂತಿ, ಸೌಹಾರ್ದತೆ ಮತ್ತು ಪರಸ್ಪರ ಸಹಕಾರದಿಂದ ಆಚರಿಸುವಂತೆ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಗಂಗಾವತಿ ನಗರ ಪೊಲೀಸ್ ಠಾಣೆಯ ಪಿಐ ಪ್ರಕಾಶ್ ಯಾತನೂರು, ನಗರ ಠಾಣೆಯ ಪಿಎಸ್‌ಐ ಟಿ.ಜಿ. ನಾಗರಾಜ್, ಸಂಚಾರಿ ಪೊಲೀಸ್ ಠಾಣೆಯ ಪಿಎಸ್‌ಐ ಇಸ್ಮಾಯಿಲ್ ಉಪಸ್ಥಿತರಿದ್ದು, ಹಬ್ಬದ ವೇಳೆ ಕಾನೂನು ಸುವ್ಯವಸ್ಥೆ ಕಾಪಾಡಲು ಸಾರ್ವಜನಿಕರು ಪೊಲೀಸ್ ಇಲಾಖೆಯೊಂದಿಗೆ ಸಹಕರಿಸಬೇಕು ಎಂದು ಮನವಿ ಮಾಡಿದರು.

ಸಭೆಯಲ್ಲಿ ಸಮಾಜದ ಮುಖಂಡರಾದ ಗೌಸ್ ಮನಿಯಾರ್, ಜಫರ್, ಖಾಜಾ ಹುಸೇನ್, ರಫಿ, ಕಿರಣ್, ಸಾಧಿಕ್, ಹುಸೇನ್, ನಾಗ, ಸಲೀಂ ಸೇರಿದಂತೆ ಅನೇಕ ಗಣ್ಯರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

## ಜ್ಞಾನದ ಹರವು ಹೆಚ್ಚಿಸಿಕೊಳ್ಳಲು ಗ್ರಂಥಾಲಯ ಸಹಕಾರಿ: ಎಸ್.ಆರ್.ಪಾಟೀಲ

• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ**



ವ್ಯಕ್ತಿಯ ವ್ಯಕ್ತಿತ್ವ ವಿಕಸನ ಹಾಗೂ ಜ್ಞಾನದ ಹರವು ವಿಸ್ತಾರಕ್ಕೆ ಗ್ರಂಥಾಲಯಗಳು ಸಹಕಾರಿಯಾಗುತ್ತವೆ ಎಂದು ಮಾಜಿ ಸಚಿವ ಎಸ್.ಆರ್.ಪಾಟೀಲ ಹೇಳಿದರು.

ಸಮೀಪದ ಹಳ್ಳೂರ ಗ್ರಾಮದಲ್ಲಿ ಸೋಮವಾರ ನಡೆದ ಬಸವಶ್ರೀ ಎಜ್ಯುಕೇಶನ್ ಮತ್ತು ರೂರಲ್ ಡೆವಲಪಮೆಂಟ್ ಟ್ರಸ್ಟ್‌ನ ಮಾತೋಶ್ರೀ ನೀಲಮ್ಮ ಪೂರ್ವ ಪ್ರಾಥಮಿಕ ಶಾಲೆ ಹಾಗೂ ಮಾತೋಶ್ರೀ ಈರಮ್ಮ ರುದ್ರಗೌಡ ಪಾಟೀಲ ಆಂಗ್ಲ ಮಾಧ್ಯಮ ಹಿರಿಯ ಪ್ರಾಥಮಿಕ ಶಾಲೆಯ ಪ್ರಾರಂಭೋತ್ಸವ ಹಾಗೂ ಗ್ರಂಥಾಲಯ ಕೊಠಡಿ ಉದ್ಘಾಟನೆ ನೆರವೇರಿಸಿ ಅವರು ಮಾತನಾಡಿದರು.

ವಿದ್ಯಾರ್ಥಿಗಳ ಶೈಕ್ಷಣಿಕ ಜೀವನದಲ್ಲಿ ಗ್ರಂಥಾಲಯಗಳ ಪಾತ್ರವೂ ಮಹತ್ತರವಾಗಿದ್ದು, ಉನ್ನತ ಹುದ್ದೆ ಪಡೆಯಲು ಜ್ಞಾನದ ಹರವು ಹೆಚ್ಚಿಸಿಕೊಳ್ಳುವುದು ಮುಖ್ಯವಾಗಿದೆ. ಆ ದಿಸೆಯಲ್ಲಿ ಶಾಲೆಗಳಲ್ಲಿ ಮಕ್ಕಳಿಗೆ ಗ್ರಂಥಾಲಯ ಸೌಲಭ್ಯ ಕಲ್ಪಿಸಬೇಕು ಎಂದ ಪಾಟೀಲ, ಶಿಕ್ಷಕರು ಶ್ರದ್ಧೆ, ನಿಷ್ಠೆಯಿಂದ ಕರ್ತವ್ಯ ನಿರ್ವಹಿಸಿ ಮಕ್ಕಳಿಗೆ ಸಂಸ್ಕಾರ ಹಾಗೂ ಮೌಲ್ಯಯುತ ಶಿಕ್ಷಣ ನೀಡಬೇಕು ಎಂದರು.

ಮುಖ್ಯ ಅತಿಥಿ ತೋಟಗಾರಿಕಾ ವಿಜ್ಞಾನ ವಿಶ್ವವಿದ್ಯಾಲಯದ ವಿಸ್ತರಣಾ ನಿರ್ದೇಶಕ ಡಾ. ವೆಂಕಟೇಶಲು ಮಾತನಾಡಿ, ಶಾಲೆಗಳು ದೇವಾಲಯವಾಗಿದ್ದರೆ ಗ್ರಂಥಾಲಯಗಳು ದೇವಾಲಯದ ಗರ್ಭಗುಡಿಗಳು. ಹೀಗಾಗಿ ಗ್ರಂಥಾಲಯಗಳಿಂದ ಮಕ್ಕಳ ಜ್ಞಾನ ವೃದ್ಧಿಸುತ್ತದೆ. ಯಶಸ್ಸು ಪಡೆಯಲು ವಿದ್ಯಾರ್ಥಿಗಳು ಗ್ರಂಥಾಲಯ ಪ್ರಯೋಜನ ಪಡೆಯಬೇಕು ಎಂದು ಹೇಳಿದರು.

ಕನ್ನಡ ಸಾಹಿತ್ಯ ಪರಿಷತ್ ತಾಲೂಕು ಘಟಕದ ಅಧ್ಯಕ್ಷ ಪಾಂಡುರಂಗ ಸಣ್ಣಪ್ಪನವರ, ಇನ್ಫೊಕ್ಷೇತ್ರ ಟೆಕ್ನಾಲಜಿಯ ನಿರ್ವಹಣಾ ನಿರ್ದೇಶಕ ವಿಜಯಮಹಾಂತೇಶ ಬಂಗಾರಗುಂಡ ಹಾಗೂ ನಿವೃತ್ತ ಶಿಕ್ಷಕ ವೈ.ವೈ.ಚಲವಾದಿ ಮಾತನಾಡಿದರು.

ಗ್ಯಾನಪ್ಪಜ್ಜನವರು ಸಾನಿಧ್ಯ ವಹಿಸಿದ್ದರು. ತೋಟಗಾರಿಕಾ ವಿವಿ ಸಹಾಯಕ ಆಡಳಿತಾಧಿಕಾರಿ ಎಸ್.ಬಿ.ರಾಮರಥ, ನ್ಯಾಯವಾದಿ ಸುಜಾತಾ ಆರ್. ಪಾಟೀಲ, ಬಾಪೂಜಿ ಬ್ಯಾಂಕ್ ನಿರ್ದೇಶಕ ನಿಂಗರಾಜ ಕೊಟಗಿ, ಎನ್.ಸಿ.ದೊಡ್ಡನಗೌಡರ, ಸೋಮನಗೌಡ ಮೇಟಿ, ಆರ್.ಎಚ್.ಗದ್ದನಕೇರಿ, ಎಸ್.ಎಸ್.ಗದ್ದನಕೇರಿ, ಸಂಸ್ಥೆಯ ಕಾರ್ಯದರ್ಶಿ ಎಂ.ಎಂ.ಕಮತರ ಅತಿಥಿಗಳಾಗಿದ್ದರು.

ಸರೋಜಿನಿ ಸುನಗದ ಪ್ರಾರ್ಥಿಸಿದರು. ಸಂಸ್ಥೆಯ ಅಧ್ಯಕ್ಷ ಎಸ್.ಎಸ್.ಜಿಗಳೂರ ಪ್ರಾಸ್ತಾವಿಕವಾಗಿ ಮಾತನಾಡಿದರು. ರೇಷ್ಮಾ ಸ್ವಾಗತಿಸಿದರು. ಮುಖ್ಯಗುರು ವಿಜಯಲಕ್ಷ್ಮೀ ಹೂಗಾರ ನಿರೂಪಿಸಿದರು.

# ಮತದಾರರ ಪಟ್ಟಿ ಪರಿಷ್ಕರಣೆ: ಯುವ ಮತದಾರರಲ್ಲಿ ಜಾಗೃತಿ

• **ಮಲ್ಲಮ್ಮ ನುಡಿ ವಾರ್ತೆ ವಿಜಯಪುರ**



ಮತದಾರರ ಪಟ್ಟಿಯು ಪ್ರಜಾಪ್ರಭುತ್ವದ ಮೂಲ ಆಧಾರವಾಗಿದ್ದು, ಅರ್ಹ ಮತದಾರರ ಹೆಸರು ಪಟ್ಟಿಯಲ್ಲಿ ಸೇರ್ಪಡೆಯಾಗುವುದು ಅತ್ಯಂತ ಮಹತ್ವದ್ದಾಗಿದೆ. ಈ ಹಿನ್ನೆಲೆಯಲ್ಲಿ ಯುವಜನತೆ ಸೇರಿದಂತೆ ಸಾರ್ವಜನಿಕರಲ್ಲಿ ಮತದಾರರ ನೋಂದಣಿ, ಹೆಸರು ಪರಿಶೀಲನೆ, ತಿದ್ದುಪಡಿ ಹಾಗೂ ಮತದಾನದ ಹಕ್ಕಿನ ಮಹತ್ವದ ಕುರಿತು ಅರಿವು ಮೂಡಿಸಲು ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ವಿವಿಧ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದು

ಜಿಲ್ಲಾಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರಾದ ರಿಷಿ ಆನಂದ ಅವರು ಹೇಳಿದರು. ನಗರದ ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜಿನಲ್ಲಿ ವಿವಿಧ ಕಾಲೇಜುಗಳ ವಿದ್ಯಾರ್ಥಿಗಳಿಂದ ಸೋಮವಾರ ಆಯೋಜಿಸಲಾಗಿದ್ದ ಜಾಗೃತಿ ಜಾಥಾಕ್ಕೆ ಅವರು ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿ ಮಾತನಾಡಿದರು. ಮತದಾನವು ಕೇವಲ ಹಕ್ಕು ಮಾತ್ರವಲ್ಲ, ಪ್ರತಿಯೊಬ್ಬ ನಾಗರಿಕನ ಜವಾಬ್ದಾರಿಯೂ ಆಗಿದೆ. 18 ವರ್ಷ ಪೂರ್ಣಗೊಂಡ ಪ್ರತಿಯೊಬ್ಬ ಯುವಕರು ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬೇಕು. ಅರ್ಹ ಮತದಾರರು ಯಾವುದೇ ಕಾರಣಕ್ಕೂ ಅವಕಾಶದಿಂದ ವಂಚಿತರಾಗಬಾರದು ಎಂಬ ಉದ್ದೇಶದಿಂದ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ-2026 ಕಾರ್ಯವನ್ನು ಕೈಗೊಳ್ಳಲಾಗಿದೆ ಎಂದು ಹೇಳಿದರು.

ಭಾರತೀಯ ಚುನಾವಣಾ ಆಯೋಗದ ನಿರ್ದೇಶನದಂತೆ ಹಮ್ಮಿಕೊಳ್ಳಲಾಗಿರುವ ಎಸ್ಐಆರ್ ವಿಶೇಷ ಸಮಗ್ರ ಪರಿಷ್ಕರಣೆ-2026ರ ಹಿನ್ನೆಲೆಯಲ್ಲಿ ವಿಜಯಪುರ ನಗರದಲ್ಲಿ ವಿದ್ಯಾರ್ಥಿಗಳ ಬೃಹತ್ ಮತದಾರರ ಜಾಗೃತಿ ಜಾಥಾ ಕಾರ್ಯಕ್ರಮವನ್ನು ಆಯೋಜಿಸುವ ಮೂಲಕ ಯುವ ಸಮೂಹದಲ್ಲಿ 'ತದಾನದ ಮಹತ್ವ ಹಾಗೂ ವಿಶೇಷ ಸಮಗ್ರ ಪರಿಷ್ಕರಣೆ-2026ರ ಕುರಿತು ಜಾಗೃತಿ ಮೂಡಿಸಲಾಗುತ್ತಿದೆ ಎಂದರು. ಯುವ ಸಮೂಹವು ಪ್ರಜಾಪ್ರಭುತ್ವದ ಶಕ್ತಿಯಾಗಿದ್ದು, ವಿದ್ಯಾರ್ಥಿಗಳು ತಮ್ಮ ಮನೆ, ನೆರೆಹೊರೆ ಹಾಗೂ ಸಮುದಾಯದಲ್ಲಿ ಮತದಾರರ ನೋಂದಣಿ ಕುರಿತು ಜಾಗೃತಿ ಮೂಡಿಸುವ ಮೂಲಕ ಮಹತ್ವದ ಪಾತ್ರ ವಹಿಸಬೇಕು. ಸರಿಯಾದ ಮತ್ತು ಪರಿಪೂರ್ಣ ಮತದಾರರ ಪಟ್ಟಿಯಿಂದ ಮಾತ್ರ ಬಲಿಷ್ಠ ಪ್ರಜಾಪ್ರಭುತ್ವ ನಿರ್ಮಾಣ ಸಾಧ್ಯ ಎಂದರು. ಜಾಗೃತಿ ಜಾಥಾದಲ್ಲಿ ಭಾಗವಹಿಸಿದ ನೂರಾರು ವಿದ್ಯಾರ್ಥಿಗಳು ಮತದಾನದ ಮಹತ್ವ ಸಾರುವ ಹಾಗೂ ವಿಶೇಷ ಸಮಗ್ರ ಪರಿಷ್ಕರಣೆ-2026ರ ಭಿತ್ತಿಫಲಕಗಳ ಹಿಡಿದು, ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆ ಮಾಡಿಸಿಕೊಳ್ಳುವಂತೆ, ತಮ್ಮ ವಿವರಗಳನ್ನು ಪರಿಶೀಲಿಸಿಕೊಳ್ಳುವಂತೆ ಹಾಗೂ ಅರ್ಹ ನಾಗರಿಕರು ಕಡ್ಡಾಯವಾಗಿ ಮತದಾರರಾಗುವಂತೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿದರು.

ನಗರದ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿದ ಜಾಥಾವು ವಿಶೇಷ ಸಮಗ್ರ ಪರಿಷ್ಕರಣೆ-2026 ಮಹತ್ವದ ಕುರಿತು ಸಾರ್ವಜನಿಕರ ಗಮನ ಸೆಳೆಯಿತು. ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆ ಪ್ರತಿಯೊಬ್ಬ ಯುವಕರ ಆದ್ಯತೆಯಾಗಲಿ ಪ್ರಜಾಪ್ರಭುತ್ವದ ಹಬ್ಬದಲ್ಲಿ ಪ್ರತಿಯೊಬ್ಬರು ಭಾಗವಹಿಸುವಿಕೆಯನ್ನು ಖಚಿತಪಡಿಸಲು ಮತದಾರರ ಯಾದಿಯ ವಿಶೇಷ ಸಮಗ್ರ ಪರಿಷ್ಕರಣೆ-2026 ಅತ್ಯಂತ ಪ್ರಮುಖ ಪ್ರಕ್ರಿಯೆಯಾಗಿದೆ. ವಿಶೇಷವಾಗಿ ಮೊದಲ ಬಾರಿಗೆ ಮತದಾನದ ಹಕ್ಕು ಪಡೆಯುವ ಯುವ ಮತದಾರರು ತಮ್ಮ ಹೆಸರುಗಳನ್ನು ಮತದಾರರ ಪಟ್ಟಿಯಲ್ಲಿ ಸೇರ್ಪಡೆ ಮಾಡಿಕೊಳ್ಳುವುದು ಅಗತ್ಯವಾಗಿದೆ. ಮತದಾರರ ಪಟ್ಟಿಯಲ್ಲಿ ಹೆಸರು ಇಲ್ಲದ ಅರ್ಹ ನಾಗರಿಕರು ನೋಂದಣಿ ಮಾಡಿಕೊಳ್ಳಲು, ತಪ್ಪು ಮಾಹಿತಿಗಳಿದ್ದಲ್ಲಿ ತಿದ್ದುಪಡಿ ಮಾಡಿಸಲು ಹಾಗೂ ಸ್ಥಳಾಂತರಗೊಂಡ ಮತದಾರರು ತಮ್ಮ ವಿವರಗಳನ್ನು ನವೀಕರಿ 'ಕೊಳ್ಳಲು ಈ ವಿಶೇಷ ಪರಿಷ್ಕರಣೆ ಕಾರ್ಯಕ್ರಮವು ಉತ್ತಮ ಅವಕಾಶವಾಗಿದೆ. ಜಿಲ್ಲಾಡಳಿತ ಹಾಗೂ ಜಿಲ್ಲಾ ಸ್ವೀಪ್ ಸಮಿತಿಯ ವತಿಯಿಂದ ಶಾಲಾ-ಕಾಲೇಜುಗಳು, ಗ್ರಾಮ ಪಂಚಾಯಿತಿಗಳು ಹಾಗೂ ವಿವಿಧ ಸಾರ್ವಜನಿಕ ಸ್ಥಳಗಳಲ್ಲಿ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಯಾವುದೇ ಅರ್ಹ ಮತದಾರರು

ಮತದಾರರ ಪಟ್ಟಿಯಿಂದ ಹೊರಗುಳಿಯಬಾರದು ಎಂಬ ಗುರಿಯೊಂದಿಗೆ ಕಾರ್ಯನಿರ್ವಹಿಸಲಾಗುತ್ತಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತಿಯ ಯೋಜನಾ ನಿರ್ದೇಶಕರಾದ ಅಶೋಕ ಕಲಘಟಗಿ, ಪದವಿ ಪೂರ್ವ ಇಲಾಖೆಯ ಉಪ ನಿರ್ದೇಶಕರಾದ ಕೆ. ಎ. ಉಪ್ಪಾರ, ಶಾಖಾಧಿಕಾರಿ ಪ್ರಕಾಶ ಗೋಂಗಡಿ, ಜಿಲ್ಲಾ ಸ್ವೀಪ್ ನೋಡಲ್ ಅಧಿಕಾರಿಗಳಾದ ಎಂ.ಬಿ. ರಜಪೂತ, ಕಾಲೇಜಿನ ಪ್ರಾಚಾರ್ಯರಾದ ಪಿ.ಎ. ಮೇತ್ರಿ, ಉಪ ಪ್ರಾಚಾರ್ಯರಾದ ಸಿ.ಎಸ್. ಕಾಂಬಳೆ ಸೇರಿದಂತೆ ವಿವಿಧ ಕಾಲೇಜುಗಳ ಉಪನ್ಯಾಸಕರು, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ರಾಷ್ಟ್ರೀಯ ಪಲ್ಸ್ ಪೋಲಿಯೋ: ಮಕ್ಕಳಿಗೆ ಲಸಿಕೆ ಹಾಕಿ ಚಾಲನೆ

• ಮಲ್ಲಮ್ಮ ನುಡಿ ವಾರ್ತೆ ಬೀದರ್



ಪೋಲಿಯೋ ಕಾಯಿಲೆ ತಡೆಗಟ್ಟಲು ಪೋಲಿಯೋ ಹನಿಯೇ ಅತ್ಯಂತ ಪ್ರಮುಖವಾಗಿದೆ. 0–5 ವರ್ಷ ಒಳಗಿನ ಎಲ್ಲಾ ಮಕ್ಕಳಿಗೆ ಪೋಲಿಯೋ ಲಸಿಕೆ ಹಾಕಿಸಬೇಕು ಎಂದು ಬೀದರ ಲೋಕಸಭಾ ಸದಸ್ಯರಾದ ಸಾಗರ ಖಂಡ್ರೆ ಅವರು ಹೇಳಿದರು.

ಬೀದರ ನಗರದ 2026ರ ಜೂನ್ 28 ರಂದು "ವಿಸ್ಡಮ್ ಶಾಲೆ" ಸಿದ್ದಿ ತಾಲಿಂ ಓಲ್ಡ್ ಸಿಟಿ ಬೀದರದಲ್ಲಿ "ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮ"ಕ್ಕೆ ಮಕ್ಕಳಿಗೆ ಲಸಿಕೆ ಹಾಕಿಸಿ ಅಭಿಯಾನಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಭಾರತದಲ್ಲಿ ಕೊನೆಯ ಪೋಲಿಯೋ ಪ್ರಕರಣ 2011ರಲ್ಲಿ ಪಶ್ಚಿಮ ಬಂಗಾಳದಲ್ಲಿ ವರದಿಯಾಗಿತ್ತು ಅದಾದಮೇಲೆ 15 ವರ್ಷಗಳಿಂದ ಯಾವುದೇ ಪೋಲಿಯೋ ಪ್ರಕರಣಗಳು ಭಾರತದಲ್ಲಿ ಕಂಡುಬಂದಿರುವುದಿಲ್ಲ. ನಮ್ಮ ನೆರೆ ದೇಶಗಳಾದ ಪಾಕಿಸ್ತಾನ ಹಾಗೂ ಅಫಘಾನಿಸ್ತಾನದಲ್ಲಿ ಇನ್ನೂ ಪಾಜಿಟಿವ್ ಪ್ರಕರಣಗಳಿದ್ದುದರಿಂದ ನಮ್ಮ ದೇಶದಲ್ಲಿ ಮುಂಜಾಗೃತೆ ಕ್ರಮಕ್ಕಾಗಿ ಪ್ರತಿ ವರ್ಷ ಪಲ್ಸ್ ಪೋಲಿಯೋ ಕಾರ್ಯಕ್ರಮ ಪೋಲಿಯೋ ಕಾಯಿಲೆ ತಡೆಗಟ್ಟಲು ಪೋಲಿಯೋ ಹನಿಯೇ ಅತ್ಯಂತ ಪ್ರಮುಖವಾಗಿದೆ. 0–5 ವರ್ಷ ಒಳಗಿನ ಎಲ್ಲಾ ಮಕ್ಕಳಿಗೆ ಪೋಲಿಯೋ ಲಸಿಕೆ ಹಾಕಿಸಿಕೊಳ್ಳುವಂತೆ ಪಾಲಕರಲ್ಲಿ ಮನವಿ ಮಾಡಿದರು.

ಜಿಲ್ಲಾಧಿಕಾರಿಗಳು ಬೀದರ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ಮಾತನಾಡಿ, ಭಾರತ 2014ರಲ್ಲಿ ಪೋಲಿಯೋ ಮುಕ್ತ ದೇಶವಾಗಿರುತ್ತದೆ, ಇದೇ ಸ್ಥಿತಿ ಮುಂದುವರೆಯುವದಕ್ಕಾಗಿ ನಮ್ಮ ದೇಶ, ರಾಜ್ಯ ಹಾಗೂ ಜಿಲ್ಲೆಯಲ್ಲಿ ಪೋಲಿಯೋ ಪ್ರಕರಣ ಬರದಂತೆ ಕಡ್ಡಾಯವಾಗಿ ತಮ್ಮ ಹತ್ತಿರದ ಬೂತ್‌ಗೆ 0–5 ವರ್ಷದೊಳಗಿನ ಮಕ್ಕಳಿಗೆ ಕರೆತಂದು ಪೋಲಿಯೋ ಲಸಿಕೆ ಹಾಕಿಸುವಂತೆ ಪೋಷಕರಿಗೆ ತಿಳಿಸಿದರು.

ಬೀದರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಧ್ಯಾನೇಶ್ವರ ನೀರಗುಡೆ ಅವರು ಮಾತನಾಡಿ, 2026ರ ಜೂನ್ 28 ರಂದು ಬೂತ್‌ಗಳ ಮೂಲಕ ಲಸಿಕೆ ನೀಡಲಾಗುವುದು ಹಾಗೂ 2026ರ ಜೂನ್ 29 ರಿಂದ ಜುಲೈ 1ರ ವರೆಗೆ ಮನೇ ಭೇಟಿಗಳ ಮೂಲಕ ಬಿಟ್ಟು ಹೋದ ಮಕ್ಕಳಿಗೆ ಪೋಲಿಯೋ ಲಸಿಕೆ ನೀಡಲಾಗುವುದು ಆದಪ್ರಯುಕ್ತ 0–5 ವರ್ಷದ 2,13,213 (ಗ್ರಾಮೀಣ ಮತ್ತು ನಗರ ಪ್ರದೇಶ ಸೇರಿ) ಮಕ್ಕಳಿಗೆ ಲಸಿಕೆ ಹಾಕುವ ಗುರಿ ಹೊಂದಲಾಗಿದ್ದು, ಇದಕ್ಕಾಗಿ 996 ಬೂತ್‌ಗಳು ನಿರ್ಮಿಸಲಾಗಿದ್ದು ಅಲ್ಲದೇ 2154 ಲಸಿಕೆದಾರರನ್ನು ಹಾಗೂ 216 ಜನರನ್ನು ಬೂತ್ ಮೇಲ್ವಿಚಾರಣೆಗಾಗಿ ಸಿಬ್ಬಂದಿಯವರನ್ನು ನೇಮಿಸಲಾಗಿದೆ 11 ಮೊಬೈಲ್ ತಂಡಗಳು ಹಾಗೂ 70–ಟ್ರಾನ್ಸಿಟ್ ಪಾಯಿಂಟ್ಸ್‌ಳ ಮೂಲಕ ಪ್ರತಿಶತ ಲಸಿಕಾಕರಣ ಗುರಿ ಸಾಧಿಸಲಾಗುವುದೆಂದು ಹೇಳಿದರು.

ಬೀದರ ವಿಸ್ಡಮ್ ಶಾಲೆ ಅಧ್ಯಕ್ಷರು ಎಂ.ಡಿ. ಆಸಿಫೋದಿನ್ ಅವರು ಮಾತನಾಡಿ, ನಮ್ಮ ಶಾಲೆಯಲ್ಲಿ ಈ ಕಾರ್ಯಕ್ರಮ ಮಾಡಿರುವುದಕ್ಕಾಗಿ ನಮ್ಮ ಸಮಿತಿಯವರಿಗೆ ಸಂತೋಷ ತಂದಿದೆ. ಈ ಕಾರ್ಯಕ್ರಮ ಶತ ಪ್ರತಿಶತ ಪ್ರಗತಿ ಸಾಧಿಸುವಲ್ಲಿ ಹಾಗೂ ಈ ಕಾರ್ಯಕ್ರಮ ಸಮುದಾಯಕ್ಕೆ ಮುಟ್ಟಿಸುವಲ್ಲಿ ಫಲಾನುಭವಿಗಳಿಗೆ ತಲುಪಿಸುವಲ್ಲಿ ನಮ್ಮ ಶಾಲೆಯ ಸಂಪೂರ್ಣ ಸಹಕಾರವಿರುತ್ತದೆ ಎಂದರು.

ಈ ಸಂದರ್ಭದಲ್ಲಿ ಬೀದರ ಜಿಲ್ಲಾ ನೋಡಲ್ ಅಧಿಕಾರಿಗಳಾದ ಡಾ.ಇಂದುಮತಿ ಪಾಟೀಲ ಉಪ ನಿರ್ದೇಶಕರು (ಆರ್.ಬಿ.ಎಸ್.ಕೆ) ಆರೋಗ್ಯ & ಕು.ಕ ಸೇವೆಗಳ ನಿರ್ದೇಶನಾಲಯ ಬೆಂಗಳೂರು ಸಲಾವುದಿನ್ ಕಾರ್ಯದರ್ಶಿಗಳು ವಿಸ್ಡಮ್ ಶಾಲೆ, ಎಂ.ಡಿ.ಗೌಸ್ ಚೇರಮೇನ ಸಿ.ಎಂ.ಸಿ. ಬೀದರ, ಸಿ.ಎಂ.ಸಿ. ವಾರ್ಡ ಕೌನ್ಸೆಲರ್‌ಗಳಾದ ಚೇತನಾ ಮೋಹನ, ಎಂ.ಡಿ. ಕಲೀಫ್, ಡಾ.ಶಿವಶಂಕರ.ಬಿ. ಜಿಲ್ಲಾ ಆರ್.ಸಿ.ಹೆಚ್. ಅಧಿಕಾರಿ ಬೀದರ, ಡಾ.ರಾಜಶೇಖರ ಪಾಟೀಲ ಜಿಲ್ಲಾ ಮಲೇರಿಯಾ ನಿಯಂತ್ರಣ ಅಧಿಕಾರಿ ಡಾ.ಅನೀಲ ಚಿಂತಾಮಣಿ ಜಿಲ್ಲಾ ಕ್ಷಯರೋಗ ನಿಯಂತ್ರಣ ಅಧಿಕಾರಿ ಡಾ.ಕಿರಣ ಪಾಟೀಲ ಜಿಲ್ಲಾ ಕುಷ್ಠರೋಗ ನಿಯಂತ್ರಣ ಅಧಿಕಾರಿ ಬೀದರ, ಡಾ.ಎಸ್.ಕೆ.ಬೊಮ್ಮಾ ಜಿಲ್ಲಾ ಸರ್ವೇಕ್ಷಣಾಧಿಕಾರಿ ಬೀದರ, ಡಾ.ಸಂಗಾರೆಡ್ಡಿ ತಾಲೂಕಾ ಅಧಿಕಾರಿ ಬೀದರ, ಡಾ.ಎಂ.ಡಿ.ಸೋಹೆಲ್ ಆಡಳಿತ ವೈದ್ಯಾಧಿಕಾರಿ 100 ಹಾಸಿಗೆ ಆಸ್ಪತ್ರೆ ಬೀದರ, ಶಶಿಕಲಾ.ಬಿ.ಸಿನ್ನೂರ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಬೀದರ, ಸಾವಿತ್ರಿಬಾಯಿ ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಚಂದ್ರಶೇಖರ ಇಜಾರೆ ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಓಂಕಾರ ಮಲ್ಲಿಗೆ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬೀದರ, ಉಮೇಶ ಬಿರಾದರ ಜಿಲ್ಲಾ ಕಾರ್ಯಕ್ರಮ ವ್ಯವಸ್ಥಾಪಕರು, ಲೋಕೇಶ ಸಲಗರ ಲಸಿಕಾ ಮೇಲ್ವಿಚಾರಕರು, ದೇವಿದಾಸ, ತಾರಾದೇವಿ, ವಿನಾಯಕ ಕಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಗುರುನಾಥ, ರವಿ ಶೆಂಬೆಳ್ಳಿ, ಚನ್ನಬಸವ, ಸತೀಶ ಬಿರಾದರ ಮುಂತಾದ ಅಧಿಕಾರಿ ಹಾಗೂ ಸಿಬ್ಬಂದಿಗಳು ಉಪಸ್ಥಿತರಿದ್ದರು. ಟಿ.ಎಂ.ಮಚ್ಚೆ ಸ್ವಾಗತಿಸಿದರು ಹಾಗೂ ಕಾರ್ಯಕ್ರಮ ನಿರೂಪಿಸಿದರು.

## ಸಿಟಿ ಮಾರ್ಕೆಟ್‌ನಲ್ಲಿ ಜನಸಾಗರ



**ಗಂಗಾವತಿ:** ವಾರಾಂತ್ಯದ ರಜೆಯ ಹಿನ್ನೆಲೆಯಲ್ಲಿ ಗಂಗಾವತಿ ನಗರದ ಗುಂಡಮ್ಮ ಕ್ಯಾಂಪ್ ಸಿಟಿ ಮಾರ್ಕೆಟ್ ಹಾಗೂ ತರಕಾರಿ ಮಾರುಕಟ್ಟೆಯಲ್ಲಿ ಶನಿವಾರ ಭಾರೀ ಜನಸಂದಣಿ ಕಂಡುಬಂತು. ಬೆಳಗ್ಗೆಯಿಂದಲೇ ದಿನಸಿ, ತರಕಾರಿ ಹಾಗೂ ಹಣ್ಣುಗಳ ಖರೀದಿಗಾಗಿ ಜನರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿದ್ದರಿಂದ ಮಾರುಕಟ್ಟೆ ಪ್ರದೇಶ ಜನರಿಂದ ಕಿಕ್ಕಿರಿದು ತುಂಬಿತ್ತು.

ಮಾರುಕಟ್ಟೆಯ ಮುಖ್ಯ ಪ್ರವೇಶ ದ್ವಾರದ (ಗೇಟ್) ಮುಂಭಾಗದಲ್ಲೇ ವ್ಯಾಪಾರಿಗಳು ತಮ್ಮ ಬಂಡಿಗಳನ್ನು ನಿಲ್ಲಿಸಿ ವ್ಯಾಪಾರ ನಡೆಸುತ್ತಿರುವುದರಿಂದ ಖರೀದಿಗೆ ಬಂದ ಸಾರ್ವಜನಿಕರು ಹಾಗೂ ಸಂಚಾರಿಗಳಿಗೆ ಓಡಾಡಲು ತೀವ್ರ ತೊಂದರೆ ಉಂಟಾಗಿದೆ. ಇದೇ ಮಾರ್ಗದಲ್ಲಿ ಮುಖ್ಯ ರಸ್ತೆ ಇರುವುದರಿಂದ ವಾಹನ ಸಂಚಾರವೂ ಅಸ್ತವ್ಯಸ್ತಗೊಂಡಿದ್ದು, ಕೆಲಕಾಲ ಟ್ರಾಫಿಕ್ ದಟ್ಟಣೆ ಕಂಡುಬಂತು. ಸ್ಥಳೀಯರು ನಗರಸಭೆ ಅಧಿಕಾರಿಗಳು ಹಾಗೂ ಪೊಲೀಸ್ ಇಲಾಖೆ ತಕ್ಷಣ ಕ್ರಮ ಕೈಗೊಂಡು ಗೇಟ್ ಮುಂಭಾಗದ ಅತಿಕ್ರಮಣ ತೆರವುಗೊಳಿಸಿ, ಸಾರ್ವಜನಿಕರಿಗೆ ಸುಗಮ ಸಂಚಾರ ಹಾಗೂ ವಾಹನಗಳ ಓಡಾಟಕ್ಕೆ ಅನುಕೂಲ ಮಾಡಿಕೊಡಬೇಕು ಎಂದು ಒತ್ತಾಯಿಸಿದ್ದಾರೆ. ಇನ್ನೊಂದೆಡೆ, ವಾರಾಂತ್ಯದ ವ್ಯಾಪಾರ ಜೋರಾಗಿದ್ದರಿಂದ ವ್ಯಾಪಾರಸ್ಥರು ಉತ್ತಮ ವಹಿವಾಟು ನಡೆದಿರುವುದಾಗಿ ಸಂತಸ ವ್ಯಕ್ತಪಡಿಸಿದರು. ಕುಟುಂಬ ಸಮೇತರಾಗಿ ಆಗಮಿಸಿದ ಜನರು ಅಗತ್ಯ ವಸ್ತುಗಳನ್ನು ಖರೀದಿಸಿ ಮಾರುಕಟ್ಟೆಯ ಚಟುವಟಿಕೆಗೆ ಮತ್ತಷ್ಟು ಚೈತನ್ಯ ತುಂಬಿದರು.

## ವಿದ್ಯುತ್ ಸಮಸ್ಯೆ ಸರಿಪಡಿಸಲು ಮನವಿ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ನಗರದ ಗುಗ್ಗರಹಟ್ಟಿ ವ್ಯಾಪ್ತಿಯ ಸಾಯಿಕಾಲೋನಿಯಿಂದ ಕೃಷ್ಣಕಾಲೋನಿಯವರೆಗಿನ (ಕೆಲ ಏರಿಯಾದಲ್ಲಿ) ನಿವಾಸಿಗಳು ಕಳೆದ ಹಲವು ವರ್ಷಗಳಿಂದ ಕಡಿಮೆ ವೋಲ್ಟೇಜ್ ಸಮಸ್ಯೆಯಿಂದ ತೀವ್ರ ತೊಂದರೆ ಅನುಭವಿಸುತ್ತಿದ್ದು ಬಗೆಹರಿಸುವಂತೆ ಜೆಸ್ಕಾಂ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಮೋಹನ್ ಬಾಬು ಮತ್ತು ಕಿರಿಯ ಇಂಜಿನಿಯರ್ ಚಿಟ್ಟಿ ಚಂದ್ರಶೇಖರ್ ಅವರಿಗೆ ಸ್ಥಳೀಯ ನಿವಾಸಿಗಳು ಮನವಿ ಸಲ್ಲಿಸಿದರು.

ವಿದ್ಯುತ್ ಸಂಪರ್ಕದಲ್ಲಿನ ಏರಿಳಿತದಿಂದಾಗಿ ನಿತ್ಯಬಳಕೆಯ ವಿದ್ಯುತ್ ಉಪಕರಣಗಳು ಕೆಲಸ ನಿರ್ವಹಿಸದೇ, ಸ್ಥಳೀಯರು ಕಂಗಾಲಾಗಿದ್ದಾರೆ.

ಗುಗ್ಗರಹಟ್ಟಿ ಪ್ರದೇಶದ ವಿದ್ಯುತ್ ಲೈನ್‌ಗಳಲ್ಲಿ ಅಗತ್ಯ ಪ್ರಮಾಣದ ವೋಲ್ಟೇಜ್ ಸರಬರಾಜು ಆಗುತ್ತಿಲ್ಲ. ವಿದ್ಯುತ್ ಸಂಪರ್ಕ ಸರಿಯಿಲ್ಲದ ಕಾರಣ ಫ್ಯಾನ್, ಫ್ರಿಜ್, ವಾಷಿಂಗ್ ಮಷಿನ್ ಸೇರಿದಂತೆ ಇತರೆ ವಿದ್ಯುತ್ ಉಪಕರಣಗಳು ಸರಿಯಾಗಿ ಕಾರ್ಯನಿರ್ವಹಿಸುತ್ತಿಲ್ಲ. ಸಂಜೆಯಾಗುತ್ತಿದ್ದಂತೆ ವೋಲ್ಟೇಜ್ ಮಟ್ಟ ಇನ್ನಷ್ಟು ಕುಸಿಯುತ್ತಿದ್ದು, ವಿದ್ಯಾರ್ಥಿಗಳ ಓದಿಗೆ ಮತ್ತು ಹಿರಿಯ ನಾಗರಿಕರಿಗೆ ಕತ್ತಲೆಯಲ್ಲಿ ಕಾಲ ಕಳೆಯುವಂತಾಗಿದೆ ಎಂದು ನಿವಾಸಿಗಳು ಅಳಲು ತೋಡಿಕೊಂಡಿದ್ದಾರೆ.

ಈ ಕುರಿತು "ಹಲವು ವರ್ಷಗಳಿಂದಲೂ ಇದೇ ಸಮಸ್ಯೆ ಕಾಡುತ್ತಿದೆ. ಸಂಬಂಧಪಟ್ಟ ಸಿಬ್ಬಂದಿಗಳನ್ನು ಕಳುಹಿಸಿ ಕೂಡಲೇ ಪರಿಶೀಲನೆ ನಡೆಸಿ, ವಿದ್ಯುತ್ ಮಾರ್ಗಗಳನ್ನು ಸರಿಪಡಿಸಬೇಕು," ಎಂದು ನಿವಾಸಿಗಳು ಒತ್ತಾಯಿಸಿದ್ದಾರೆ.

## ಮತದಾರರ ಪಟ್ಟಿಯಲ್ಲಿ ಹೆಸರು ಸೇರಿಸಿ



• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ವಿದ್ಯಾರ್ಥಿಗಳು ಪ್ರಜಾಪ್ರಭುತ್ವದ ಬೆನ್ನೆಲುಬು ಮತ್ತು ದೇಶದ ಭವಿಷ್ಯದ ನಿರ್ಮಾಪಕರು. 18 ವರ್ಷ ತುಂಬಿದ ಪ್ರತಿಯೊಬ್ಬ ವಿದ್ಯಾರ್ಥಿಯು ಮತದಾರರ ಪಟ್ಟಿಯಲ್ಲಿ ಹೆಸರು ನೋಂದಾಯಿಸಿಕೊಂಡು ತಪ್ಪದೆ ಮತದಾನ ಮಾಡಬೇಕು ಎಂದು ರಾಜ್ಯಶಾಸ್ತ್ರದ ಉಪನ್ಯಾಸಕಿ ಆರತಿ ಪಾತ್ರೆ ಹೇಳಿದರು.

ನಗರದ ಶಿವಾಜಿ ಪದವಿ ಕಾಲೇಜಿನಲ್ಲಿ ಕಿಸಾನ್ ಶಿಕ್ಷಣ ಪ್ರಸಾರಕ ಮಂಡಳಿ ವತಿಯಿಂದ ಸೋಮವಾರ ಆಯೋಜಿಸಿದ್ದ ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ಜಾಗೃತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ವಿದ್ಯಾರ್ಥಿಗಳು ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರು ಸೇರಿಸುವುದರ ಜತೆಗೆ ತಮ್ಮ ಕುಟುಂಬದ ಸದಸ್ಯರು ಹಾಗೂ ನೆರೆಹೊರೆಯವರಿಗೆ ತಿಳಿಹೇಳುವ ಕೆಲಸ ಮಾಡಬೇಕು ಎಂದು ಕಿವಿಮಾತು ಹೇಳಿದರು.

ಪ್ರಾಚಾರ್ಯ ರಾಜು ಪಾಟೀಲ್ ಅಧ್ಯಕ್ಷತೆ ವಹಿಸಿದ್ದರು. ಈ ಸಂದರ್ಭದಲ್ಲಿ ಪ್ರಣೀತಾ ತಿಗಳೇ, ಮೀರಾ ಉಮಾಜಿ, ಸಂಜು ಬಿರಾದಾರ್, ಪ್ರೀತಿ ಪಾಟೀಲ್ ಸೇರಿದಂತೆ ಹಲವರು ಇದ್ದರು.

## ಪ್ರಜಾಪ್ರಭುತ್ವ ವ್ಯವಸ್ಥೆಗೆ ಕೈ ಜೋಡಿಸಿ: ಬಂಡೆಪ್ಪ ಖಾಶೆಂಪುರ್

• ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ



ಸಂವಿಧಾನದ ಆಸಯದಂತೆ ಗಟ್ಟಿಯಾದ ಪ್ರಜಾಪ್ರಭುತ್ವ ವ್ಯವಸ್ಥೆ ನಿರ್ಮಾಣ ಮಾಡುವುದಕ್ಕೆ ಎಲ್ಲರೂ ಕೈ ಜೋಡಿಸಬೇಕೆಂದು ಮಾಜಿ ಸಚಿವ ಬಂಡೆಪ್ಪ ಖಾಶೆಂಪುರ್ ತಿಳಿಸಿದರು.

ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರದ ಖಾಶೆಂಪುರ್ ಪಿ ಗ್ರಾಮದ ಹೊರವಲಯದಲ್ಲಿರುವ ಮಾಜಿ ಸಚಿವ ಬಂಡೆಪ್ಪ ಖಾಶೆಂಪುರ್ ರವರ ತೋಟದ ಮನೆಯ ಆವರಣದಲ್ಲಿ ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರದ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್), ಬಿಎಲ್‌ಎ–2 ಕಾರ್ಯಾಗಾರವನ್ನು ಜೆಡಿಎಸ್ ಪಕ್ಷ ಹಮ್ಮಿಕೊಂಡಿತ್ತು.

ಮಾಜಿ ಸಚಿವರಾದ ಬಂಡೆಪ್ಪ ಖಾಶೆಂಪುರ್, ಜೆಡಿಎಸ್ ರಾಜ್ಯ ವಕ್ತಾರರು ಹಾಗೂ ಬಿಎಲ್‌ಎ–2 ಕಾರ್ಯಾಗಾರದ ಉಸ್ತುವಾರಿ ಜಿ.ಪಿ. ಅಶ್ವಿನಕುಮಾರ್, ಜೆಡಿಎಸ್ ಜಿಲ್ಲಾಧ್ಯಕ್ಷ ರಮೇಶ್ ಪಾಟೀಲ್ ಸೋಲಾಪುರ್ ರವರ ಮುಖಂಡತ್ವದಲ್ಲಿ ಭಾನುವಾರ ನಡೆದ ಕಾರ್ಯಕ್ರಮದಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಬಗ್ಗೆ ಜೆಡಿಎಸ್ ನಾಯಕರು ಜಾಗೃತಿ ಮೂಡಿಸಿದರು.

ಇದೇ ವೇಳೆ ಪಕ್ಷದಿಂದ ಬಿಎಲ್‌ಎಗಳಾಗಿ ನೇಮಕಗೊಂಡ ಕಾರ್ಯಕರ್ತರಿಗೆ ಬ್ಯಾಡ್ಜ್ ಹಾಗೂ ಗುರುತಿನ ಚೀಟಿಯನ್ನು ವಿತರಿಸಿ, ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಬಗ್ಗೆ ಸ್ಕ್ರೀನ್ ಮೂಲಕ ಮಾಹಿತಿ ಹಂಚಿಕೊಂಡರು.

ಈ ವೇಳೆ ಮಾತನಾಡಿದ ಜೆಡಿಎಸ್ ರಾಜ್ಯ ವಕ್ತಾರರು ಹಾಗೂ ಬಿಎಲ್‌ಎ–2 ಕಾರ್ಯಾಗಾರದ ಉಸ್ತುವಾರಿ ಜಿ ಪಿ ಅಶ್ವಿನ್ ಕುಮಾರ್ ರವರು, ಬಂಡೆಪ್ಪ ಖಾಶೆಂಪುರ್ ರವರು ರಾಜ್ಯ ಮಟ್ಟದ ನಾಯಕರಾಗಿದ್ದಾರೆ. ಎಸ್‌ಐಆರ್ ಕಾರ್ಯಾಗಾರವನ್ನು ಅವರು ಹಮ್ಮಿಕೊಂಡಿದ್ದಾರೆ. ಇದನ್ನು ಕ್ಷೇತ್ರದ ಮುಖಂಡರು, ಕಾರ್ಯಕರ್ತರು ಸದುಪಯೋಗ ಪಡೆದುಕೊಳ್ಳಬೇಕು. ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಕ್ಷರಣೆಯ ಬಗ್ಗೆ ಪ್ರತಿಯೊಬ್ಬರೂ ತಿಳಿದುಕೊಳ್ಳಬೇಕಾಗಿದೆ ಎಂದರು.

ಎಸ್‌ಐಆರ್ ಬಗ್ಗೆ ಅಶ್ವಿನಕುಮಾರ್ ರವರು ಬಹಳಷ್ಟು ಸವಿಸ್ತಾರವಾಗಿ ಹೇಳಿದ್ದಾರೆ. ನಮ್ಮ ಪಕ್ಷದಿಂದ ಬಿಎಲ್‌ಎ ಅಂತ ನೇಮಕ ಆಗಿರುವವರು ಶ್ರಮ ವಹಿಸಿ ಕೆಲಸ ಮಾಡಬೇಕಾಗಿದೆ. ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಬಗ್ಗೆ ಪ್ರತಿಯೊಬ್ಬರೂ ತಿಳಿದುಕೊಳ್ಳಬೇಕಾಗಿದೆ ಎಂದು ಮಾಜಿ ಸಚಿವರು, ಜೆಡಿಎಸ್ ಪಕ್ಷದ ಹಿರಿಯ ನಾಯಕರಾಗಿರುವ ಬಂಡೆಪ್ಪ ಖಾಶೆಂಪುರ್ ರವರು ಹೇಳಿದರು. ಈ ಸಂದರ್ಭದಲ್ಲಿ ಜೆಡಿಎಸ್ ಜಿಲ್ಲಾಧ್ಯಕ್ಷ ರಮೇಶ್ ಪಾಟೀಲ್ ಸೋಲಾಪುರ್, ಪ್ರಮುಖರಾದ ಮಾರುತಿ ಖಾಶೆಂಪುರ್, ಮಾರುತಿ ಬೌದ್ಧೆ, ಸಜ್ಜದ್ ಸಾಹೇಬ್, ಶಾಂತಕುಮಾರ್ ಸಾವಳಗಿ, ದೇವೇಂದ್ರ ಸೋನಿ, ಸಂಜುರೆಡ್ಡಿ ನಿರ್ಣಾ, ರಾಜು ಕಡ್ಯಾಳ, ತರುಣ್ ನಾಗಮಾರಪಳ್ಳಿ, ಸಂತೋಷ್ ರಾಸೂರೆ, ಜಾಪೆಡ್ ಕಡ್ಯಾಳ, ಅಭಿ ಕಾಳೆ, ಬೊಮಗೊಂಡ ಚಿಟ್ಟಾವಾಡಿ, ರೇವಣಸಿದ್ದಪ್ಪ ಸಿರಕಟ್ಟನಳ್ಳಿ, ಇಸ್ಲಾಹಿಲ್ ಸಾಬ್, ಲಲಿತಾ ಕರಂಜೆ ಸೇರಿದಂತೆ ಅನೇಕರಿದ್ದರು.

## ಗುರುಮಠಕಲ್‌ನಲ್ಲಿ ಕಾರ ಹುಣ್ಣಿಮೆಯ ವಿಶಿಷ್ಟ ಸಂಪ್ರದಾಯ



**ಗುರುಮಠಕಲ್:** ಕಲ್ಯಾಣ ಕರ್ನಾಟಕದ ಪ್ರಮುಖ ಗ್ರಾಮೀಣ ಹಬ್ಬಗಳಲ್ಲಿ ಒಂದಾದ ಕಾರ ಹುಣ್ಣಿಮೆ ಪ್ರಯುಕ್ತ ಗುರುಮಠಕಲ್ ಪಟ್ಟಣದ ನಾರಾಯಣಪುರ ಬಡಾವಣೆಯಲ್ಲಿ ಸೋಮವಾರ ಸಂಪ್ರದಾಯಬದ್ಧ ಆಚರಣೆಗಳು ಭಕ್ತಿ, ಸಂಭ್ರಮ ಹಾಗೂ ಸಡಗರದಿಂದ ಜರುಗಿದವು.

ಸಂಪ್ರದಾಯದಂತೆ ಕಾಕಲವರ್ ದೇಶಮುಖ ಸಂಸ್ಥಾನದ ಅಲಂಕೃತ ಎತ್ತುಗಳು ಮೂರು ಬಾರಿ ಕಮಾನಿನ ಮೂಲಕ ಹಾದುಹೋದವು. ಬಳಿಕ ಕಮಾನಿನ ಮೇಲ್ಭಾಗದಲ್ಲಿ ಕುಳಿತಿದ್ದವರು ಮಾವಿನ ತೋರಣ ಹರಿಯುವ ವಿಶಿಷ್ಟ ಆಚರಣೆಯನ್ನು ನೆರವೇರಿಸಿದರು. ಹಲವು ದಶಕಗಳಿಂದ ನಡೆದುಕೊಂಡು ಬಂದಿರುವ ಈ ಸಂಪ್ರದಾಯವನ್ನು ಕಣ್ತುಂಬಿಕೊಳ್ಳಲು ನೂರಾರು ಭಕ್ತರು ಹಾಗೂ ಸಾರ್ವಜನಿಕರು ಸೇರಿದ್ದರು. ಈ ಸಂದರ್ಭದಲ್ಲಿ ರವೀಂದ್ರರೆಡ್ಡಿ ಮಾಲಿ ಪಾಟೀಲರು ಅಲಂಕೃತ ಎತ್ತುಗಳೊಂದಿಗೆ ಹೆಜ್ಜೆ ಹಾಕಿ ಸಂಪ್ರದಾಯಕ್ಕೆ ಚಾಲನೆ ನೀಡಿದರು. ಎತ್ತುಗಳು ಕಮಾನಿನ ಮೂಲಕ ಮೂರು ಬಾರಿ ಹಾದುಹೋಗಿದ ಬಳಿಕ ಮಾವಿನ ತೋರಣ ಹರಿಯುವ ಸಂಪ್ರದಾಯ ನೆರವೇರಿತು. ಈ ಅಪರೂಪದ ದೃಶ್ಯ ನೆರೆದಿದ್ದ ಜನರಲ್ಲಿ ವಿಶೇಷ ಭಾವನೆಯನ್ನು ಮೂಡಿಸಿತು. ಕಾರ ಹುಣ್ಣಿಮೆಯನ್ನು ರೈತರು ಕೃಷಿ ಚಟುವಟಿಕೆಗಳ ಶುಭಾರಂಭದ ಸಂಕೇತವಾಗಿ ಆಚರಿಸುತ್ತಾರೆ. ಉತ್ತಮ ಮಳೆ ಹಾಗೂ ಸಮೃದ್ಧ ಬೆಳೆಗಾಗಿ ಮಳೆರಾಯನಿಗೆ ಪ್ರಾರ್ಥನೆ ಸಲ್ಲಿಸಿ, ಎತ್ತುಗಳನ್ನು ಬಣ್ಣಬಣ್ಣದ ಅಲಂಕಾರಗಳಿಂದ ಸಿಂಗರಿಸಿ, ಕೊರಳಿಗೆ ಮಣಿಗಳ ಸರ, ಗೆಜ್ಜೆಗಳು, ಬಾಸಿಂಗ ಹಾಗೂ ಕವಡಿ ಸರಗಳನ್ನು ಧರಿಸಿ ಉತ್ಸವದಲ್ಲಿ ಭಾಗವಹಿಸುವುದು ಈ ಹಬ್ಬದ ವಿಶೇಷತೆಯಾಗಿದೆ.

ಈ ವರ್ಷ ಮಳೆಯ ಕೊರತೆಯಿಂದ ರೈತರಲ್ಲಿ ಆತಂಕ ಇದ್ದರೂ, ಉತ್ತಮ ಮಳೆಯ ನಿರೀಕ್ಷೆಯೊಂದಿಗೆ ಸಂಪ್ರದಾಯವನ್ನು ಯಥಾವತ್ತಾಗಿ ಆಚರಿಸಲಾಯಿತು. ಗ್ರಾಮೀಣ ಸಂಸ್ಕೃತಿ, ಕೃಷಿ ಪರಂಪರೆ ಮತ್ತು ಭಕ್ತಿ–ಭಾವನೆಗಳನ್ನು ಪ್ರತಿಬಿಂಬಿಸುವ ಈ ವಿಶಿಷ್ಟ ಆಚರಣೆ ಸಾರ್ವಜನಿಕರ ಗಮನ ಸೆಳೆಯಿತು.

## ಗುರಿಯತ್ತ ದೃಷ್ಟಿ ನೆಟ್ಟರೆ ಯಶಸ್ಸು ದೂರವಿಲ್ಲ: ಡಾ. ಭೀಮೇಶ

• ಮಲ್ಲಮ್ಮ ನುಡಿ ವಾರ್ತೆ ವಿಜಯನಗರ



ಕಾರ್ಯಾಗಾರದಲ್ಲಿ ಸಂಪನ್ಮೂಲ ವ್ಯಕ್ತಿಗಳು ತಮ್ಮ ತಾಜಾ ಓದು ಮತ್ತು ಅಧ್ಯಯನದ ಅನುಭವದೊಂದಿಗೆ ವಿದ್ಯಾರ್ಥಿಗಳಿಗೆ ಜ್ಞಾನವನ್ನು ಹಂಚಿಕೊಂಡಿದ್ದಾರೆ. ಕಾರ್ಯಾಗಾರದಲ್ಲಿ ಸ್ಮಾರ್ಟ್‌ಬೋರ್ಡ್ ಬಳಕೆಯಿಂದ ವಿಷಯಗಳನ್ನು ದೃಶ್ಯಾತ್ಮಕವಾಗಿ, ಪರಿಣಾಮಕಾರಿಯಾಗಿ ನಿರೂಪಿಸಲು ಸಾಧ್ಯವಾಗಿದ್ದು, ತರಗತಿಗಳು ಹೆಚ್ಚು ಅರ್ಥಪೂರ್ಣವಾಗಿ ಸಾಗಲು ಸಹಕಾರಿಯಾಯಿತು ಎಂದು ಡಾ. ಭೀಮೇಶ ಯರಡೋಣಿ ತಿಳಿಸಿದರು.

ಕನ್ನಡ ವಿಶ್ವವಿದ್ಯಾಲಯ, ಹಂಪಿಯ ಪಂಪ ಸಭಾಂಗಣದಲ್ಲಿ ಕನ್ನಡ ಸಾಹಿತ್ಯ ಅಧ್ಯಯನ ವಿಭಾಗ ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವಿಶೇಷ ಘಟಕದ ಸಂಯುಕ್ತ ಆಶ್ರಯದಲ್ಲಿ 2026ರ ಜೂನ್ 12ರಿಂದ 25ರವರೆಗೆ ಆಯೋಜಿಸಲಾಗಿದ್ದ 14 ದಿನಗಳ ಯುಜಿಸಿ–ನೆಟ್ ಜೆಆರ್‌ಎಫ್ ಮತ್ತು ಕೆ–ಸೆಟ್ ತರಬೇತಿ ಕಾರ್ಯಾಗಾರದ ಸಮಾರೋಪ ಸಮಾರಂಭದ ಮುಖ್ಯ ಅತಿಥಿಗಳಾಗಿ ಧಾರವಾಡ ಜಿಲ್ಲೆಯ ಗುಡಗೇರಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಹಾಯಕ ಪ್ರಾಧ್ಯಾಪಕರಾದ ಡಾ.ಭೀಮೇಶ ಯರಡೋಣಿ ಅವರು ಮಾತನಾಡುತ್ತಾ; ವಿದ್ಯಾರ್ಥಿಗಳು ತಮ್ಮ ಗುರಿಯನ್ನು ಮಾತ್ರ ಕಣ್ಣೆದುರಿಗೆ ಇಟ್ಟು–ಕೊಂಡು ಮುನ್ನಡೆಯಬೇಕು. ಗುರಿ ಸಾಧನೆಯ ಹಾದಿಯಲ್ಲಿ ಉಳಿದೆಲ್ಲವೂ ತೊಂದರೆಗಳು ಶೂನ್ಯವಾಗಿ ಕಾಣಬೇಕು. ಏಕಾಗ್ರತೆ ಮತ್ತು ದೃಢ ಸಂಕಲ್ಪವನ್ನು ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಮುಖ್ಯ ಅತಿಥಿಗಳಾಗಿ ಕಲಬುರಗಿಯ ವಾಣಿಜ್ಯ ತೆರಿಗೆಗಳ ಸಹಾಯಕ ಆಯುಕ್ತರಾದ ಡಾ. ಮಹಾಲಿಂಗ ಪೋಳ ಭಾಗವಹಿಸಿ ಮಾತನಾಡುತ್ತಾ; ಪ್ರಾಧ್ಯಾಪಕರಲ್ಲಿ ದೂರದೃಷ್ಟಿಯ ಕನಸು ಮತ್ತು ಬದ್ಧತೆ ಇದ್ದಾಗ ಮಾತ್ರ ಇಂತಹ ಅರ್ಥಪೂರ್ಣ ತರಬೇತಿ ಕಾರ್ಯಾಗಾರಗಳನ್ನು ಆಯೋಜಿಸಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಗದಗ ಜಿಲ್ಲೆಯ ಹುಲಕೋಟಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಹಾಯಕ ಪ್ರಾಧ್ಯಾಪಕರಾದ ಭೀಮೇಶ್ ಅವರು ಮಾತನಾಡಿ; ಗುರುವಿನ ಸಮರ್ಪಕ ಮಾರ್ಗದರ್ಶನ ದೊರೆತರೆ ಯಶಸ್ಸಿನ ಹಾದಿ ಸುಗಮವಾಗುತ್ತದೆ ಎಂದು ಹೇಳಿದರು. ವಿದ್ಯಾರ್ಥಿಗಳಲ್ಲಿ ಸದಾ ಉತ್ಸಾಹ ಮತ್ತು ಸಾಧಿಸುವ ಛಲ ಇರಬೇಕು. ಯಾವುದೇ ಯಶಸ್ಸು ಸುಲಭವಾಗಿ ದೊರೆಯುವುದಿಲ್ಲ ಅದಕ್ಕಾಗಿ ನಿರಂತರ ಪರಿಶ್ರಮ ಮತ್ತು ಶಿಸ್ತುಬದ್ಧ ಅಧ್ಯಯನ ಅಗತ್ಯವೆಂದರು. ಬದುಕಿನಲ್ಲಿ ಎದುರಾಗುವ ತೊಂದರೆಗಳು ಮತ್ತು ಸವಾಲುಗಳ ಬಗ್ಗೆ ಅತಿಯಾಗಿ ಚಿಂತಿಸದೆ ಆತ್ಮವಿಶ್ವಾಸದಿಂದ ಮುನ್ನಡೆಯಬೇಕು. ನಿರಂತರವಾದ ಅಧ್ಯಯನವೇ ವ್ಯಕ್ತಿಯನ್ನು ಉನ್ನತ ಸ್ಥಾನಕ್ಕೆ ಕೊಂಡೊಯ್ಯುವ ಶಕ್ತಿಯಾಗಿದೆ ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಅಧ್ಯಯನಾಂಗದ ನಿರ್ದೇಶಕರಾದ ಡಾ. ಅಮರೇಶ ಯತಗಲ್ ಅವರು ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿ ಮಾತನಾಡುತ್ತಾ; ಜ್ಞಾನದ ಹಸಿವುಳ್ಳ ವಿದ್ಯಾರ್ಥಿಗಳೇ ಈ ಕಾರ್ಯಾಗಾರದಲ್ಲಿ ಆಸಕ್ತಿಯಿಂದ ಪಾಲ್ಗೊಂಡು ಕಲಿಕೆಯಲ್ಲಿ ತೊಡಗಿಸಿಕೊಂಡಿದ್ದಾರೆ ಎಂದು ಹೇಳಿದರು.

ಕಾರ್ಯಾಗಾರಗಳು ಕೇವಲ ಕಾಗದಗಳಲ್ಲಿ ಮಾತ್ರ ಉಳಿಯದೆ ವಿದ್ಯಾರ್ಥಿಗಳ ಜ್ಞಾನಾರ್ಜನೆ ಮತ್ತು ಕೌಶಲ್ಯ ವೃದ್ಧಿಗೆ ನೈಜವಾಗಿ ನೆರವಾಗಬೇಕು ಎಂದು ಅಭಿಪ್ರಾಯಪಟ್ಟರು. ಓದುವ ತುಡಿತ ಮತ್ತು ಕಲಿಯುವ ಉತ್ಸಾಹ ಇರುವ ಅವಧಿಯಲ್ಲಿಯೇ ಅದನ್ನು ಸಮರ್ಪಕವಾಗಿ ಬಳಸಿಕೊಳ್ಳಬೇಕು. ಆ ತುಡಿತ ಒಂದು ಹಂತವನ್ನು ಮೀರಿದ ಬಳಿಕ ಅದೇ ಉತ್ಸಾಹವನ್ನು ಮರಳಿ ಪಡೆಯುವುದು ಕಷ್ಟವಾಗಬಹುದು ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಕಾರ್ಯಕ್ರಮದಲ್ಲಿ ಕನ್ನಡ ಸಾಹಿತ್ಯ ಅಧ್ಯಯನ ವಿಭಾಗದ ಮುಖ್ಯಸ್ಥರಾದ ಡಾ. ವೆಂಕಟಗಿರಿ ದಳವಾಯಿ ಅವರು ಸ್ವಾಗತ ಮತ್ತು ಪ್ರಾಸ್ತಾವಿಕ ನುಡಿಗಳನ್ನಾಡಿದರು. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವಿಶೇಷ ಘಟಕದ ಸಂಯೋಜನಾಧಿಕಾರಿಗಳಾದ ಡಾ. ಗೀತಮ್ಮ ವಂದನಾರ್ಪಣೆ ನೆರವೇರಿಸಿದರು. ಹಿರಿಯ ಸಹಾಯಕ ಪ್ರಾಧ್ಯಾಪಕ ಡಾ. ಗೋವಿಂದ ಉಪಸ್ಥಿತರಿದ್ದರು. ಶಬರಿನ್ ಬಾನು ನಿರೂಪಿಸಿದರು. ವಿವಿಧ ವಿಭಾಗಗಳ ಡೀನರು, ಬೋಧಕ ಹಾಗೂ ಆಡಳಿತ ಸಿಬ್ಬಂದಿಗಳು ಮತ್ತು ಸಂಶೋಧನಾ ವಿದ್ಯಾರ್ಥಿಗಳು, ವಿವಿಧ ವಿಶ್ವವಿದ್ಯಾಲಯದ ಪರೀಕ್ಷಾರ್ಥಿಗಳು ಉಪಸ್ಥಿತರಿದ್ದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000, Telephone Number:08483200222

PRGI NO. 120927
(RNINO:KARKAN/2011/48371)